ಸಂಪುಟ: ೦೭/ ಸಂಚಿಕೆ: ೧೪೫/ಗುರುವಾರ ದಿನಾಂಕ : ೨೪-೦೭-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 145/ THURSDAY Date : 24-07-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಸಣ್ಣ ವ್ಯಾಪಾರಿಗಳ ಹಳೆಯ ತೆರಿಗೆ ಬಾಕಿ ಮನ್ನಾ ಮಾಡಲು ಸರ್ಕಾರ ತೀರ್ಮಾನ: 18 ಸಾವಿರ ವ್ಯಾಪಾರಿಗಳು ನಿರಾಳ



ಬೆಂಗಳೂರು: ಸಣ್ಣ ವ್ಯಾಪಾರಿಗಳಿಗೆ ನೋಟಿಸ್ ನೀಡಲಾಗಿರುವ ಹಳೆಯ ತೆರಿಗೆ ಬಾಕಿಯನ್ನು ಮನ್ನಾ ಮಾಡಲಾಗುವುದು. ಅದನ್ನು ಸರ್ಕಾರ ವಸೂಲು ಮಾಡುವುದಿಲ್ಲ. ಆದರೆ, ಅವರೆಲ್ಲರೂ ಕಡ್ಡಾಯವಾಗಿ ಜಿಎಸ್‌ಟಿ ನೋಂದಣಿ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಬುಧವಾರ ಸಂಜೆ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸಣ್ಣ ವ್ಯಾಣಿಜ್ಯೋದ್ಯಮಿಗಳಿಗೆ ವಾಣಿಜ್ಯ ತೆರಿಗೆ ಇಲಾಖೆ ನೀಡಿರುವ ಜಿಎಸ್?ಟಿ ನೋಟಿಸ್ ವಿಷಯಕ್ಕೆ ಸಂಬಂಧಿಸಿದಂತೆ, ವ್ಯಾಪಾರಿಗಳನ್ನು ಪ್ರತಿನಿಧಿಸುವ ಹಲವು ಸಂಘಟನೆಗಳ ಪ್ರತಿನಿಧಿಗಳು ತಮ್ಮ ಅಹವಾಲುಗಳನ್ನು ಸಲ್ಲಿಸಿದರು.

ಸಮಸ್ಯೆ ಬಗೆಹರಿಸಲು ಪ್ರತಿನಿಧಿಗಳ ಮನವಿ: ಸಣ್ಣ ವ್ಯಾಪಾರಿಗಳಲ್ಲಿ ಜಿಎಸ್‌ಟಿ ನೋಟೀಸ್ ಕುರಿತು ಗೊಂದಲ ಇದೆ. ಸಾಲದ ಮೊತ್ತ ಕೂಡಾ ಇದರಲ್ಲಿ ಸೇ–ರಿಕೊಂಡಿದೆ. ವೈಯಕ್ತಿಕ ವಹಿವಾಟು ಹಣ ಸಹ ಇದರಲ್ಲಿ ಸೇರಿದೆ. ಜಿಎಸ್‌ಟಿ ನೋಟಿಸ್ ನೀಡುವುದು ತಪ್ಪಲ್ಲ. ಆದರೆ ವ್ಯಾಪಾರಿಗಳಿಗೆ ಪರಿಹಾರ ತೆರಿಗೆ ಪಾವತಿಸಲು ಅವಕಾಶ ನೀಡಬೇಕು. ಮಧ್ಯವರ್ತಿಗಳಿಗೆ ಅವಕಾಶ ನೀಡದೆ, ವ್ಯಾಪಾರಿಗಳು ನೇರವಾಗಿ ಇಲಾಖೆ ಸಂಪರ್ಕಿಸಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಬೇಕು? ಎಂದು ಕೆಲ ಪ್ರತಿನಿಧಿಗಳು ಮನವಿ ಮಾಡಿದರು.

ಸಣ್ಣ ವ್ಯಾಪಾರಿಗಳಿಗೆ ನೆರವಾಗುವಂತೆ ಸಹಾಯವಾಣಿ ಆರಂಭಿಸಬೇಕು. ಜಿಎಸ್?ಟಿ ಕುರಿತು ಸರಿಯಾಗಿ ಮಾಹಿತಿ ಇಲ್ಲದ ಕಾರಣ ಗೊಂದಲ ಉಂಟಾಗಿದೆ. ಜಾಗೃತಿ ಕಾರ್ಯಕ್ರಮ ಕೈಗೊಳ್ಳಬೇಕು. ಒಂದು ಬಾರಿಗೆ ಹಳೆಯ ಬಾಕಿಯನ್ನು ಮನ್ನಾ ಮಾಡಬೇಕು ಎಂದು ಮನವಿ ಸಲ್ಲಿಸಿದರು.

ಯುಪಿಐ ಅಡಿ 40 ಲಕ್ಷ ರೂ.ಗಳಿಗೂ ಅಧಿಕ ವಹಿವಾಟು ಮಾಡಿರುವವರಿಗೆ ಮಾತ್ರ ಜಿಎಸ್‌ಟಿ ನೋಟಿಸ್ ನೀಡಲಾಗಿದೆ. ಆರಂಭದಲ್ಲಿ ಜಿಎಸ್?ಟಿ ನೋಂದಣಿ ಮಾಡುವಂತೆ ನೋಟಿಸ್ ನೀಡಲಾಗಿತ್ತು.

ವ್ಯಾಪಾರಿ ಪ್ರತಿನಿಧಿಗಳ ಅಹವಾಲು ಆಲಿಸಿದ ನಂತರ ಮಾಧ್ಯಮಗೋಷ್ಠಿಯಲ್ಲಿ ಮಾಹಿತಿ ನೀಡಿದ ಸಿಎಂ ಸಿದ್ದರಾಮಯ್ಯ, "ಹಾಲು, ತರಕಾರಿ, ಮಾಂಸ, ಹಣ್ಣಿನಂತಹ ಅಗತ್ಯ ಆಹಾರ ವಸ್ತುಗಳಿಗೆ ತೆರಿಗೆ ವಿನಾಯಿತಿ ಇದ್ದು, ಅಂತಹ ವ್ಯಾಪಾರಿಗಳಿಗೆ ನೋಟಿಸ್ ಕೊಟ್ಟಿದ್ದರೂ, ಅವರಿಂದ ತೆರಿಗೆ ವಸೂಲು ಮಾಡುವುದಿಲ್ಲ. ಆದರೆ ಯಾರು ಕಾಯ್ದೆ ಪ್ರಕಾರ ತೆರಿಗೆ ಕಟ್ಟಬೇಕಾಗಿದೆಯೋ, ಅವರು ಕಟ್ಟಲೇಬೇಕು" ಎಂದು ಹೇಳಿದರು.

ಸರ್ಕಾರ ಸಣ್ಣ ವ್ಯಾಪಾರಿಗಳ ಪರ: "ಯುಪಿಐ ವಹಿವಾಟು ಕೈಬಿಟ್ಟರೆ ವಹಿವಾಟಿನ ಮೇಲೆ ಪರಿಣಾಮ ಬೀರಲಿದೆ. ರಾಜ್ಯದಲ್ಲಿ ಕೇವಲ 9ಸಾವಿರ ವ್ಯಾಪಾರಿಗಳಿಗೆ ಕಳೆದ 2–3 ವರ್ಷಗಳ ಅವಧಿಗೆ ಸಂಬಂಧಿಸಿದಂತೆ 18 ಸಾವಿರ ನೋಟಿಸ್ ಜಾರಿಗೊಳಿಸಲಾಗಿದೆ. ವ್ಯಾಪಾರ, ವಹಿವಾಟುಗಳಿಗೆ ಕಾನೂನು ಬದ್ಧವಾಗಿ ಸರ್ಕಾರ ಎಲ್ಲಾ ನೆರವು ನೀಡಲಿದೆ. ತೆರಿಗೆ ಸರಿಯಾಗಿ ಪಾವತಿಸಲು ಸಹಕಾರ ನೀಡಲಿದೆ. ವ್ಯಾಪಾರಿಗಳಿಗೆ ತೊಂದರೆ ನೀಡಬೇಕೆಂಬುವುದು ಸರ್ಕಾರದ ಉದ್ದೇಶವಲ್ಲ. ಸರ್ಕಾರ ಸಣ್ಣ ವ್ಯಾಪಾರಿಗಳ ಪರವಾಗಿದೆ" ಎಂದು ಅಭಯ ನೀಡಿದರು.

ಜಿಎಸ್‌ಟಿಯನ್ನು ಕೇಂದ್ರ ಹಣಕಾಸು ಸಚಿವರ ಅಧ್ಯಕ್ಷತೆಯ ಜಿಎಸ್?ಟಿ ಕೌನ್ಸಿಲ್ ನಿರ್ಧರಿಸುತ್ತದೆ. ಈ ತೆರಿಗೆ ಸಂಗ್ರಹದಲ್ಲಿ ಶೇ.50ರಷ್ಟನ್ನು ರಾಜ್ಯಕ್ಕೆ ನೀಡಲಾಗುತ್ತದೆ. ದೇಶದಲ್ಲೇ ಕರ್ನಾಟಕ ಜಿಎಸ್‌ಟಿ ಸಂಗ್ರಹದಲ್ಲಿ ಎರಡನೇ ಸ್ಥಾನದಲ್ಲಿದೆ ಎಂದು ಸಿಎಂ ತಿಳಿಸಿದರು.

ಸರ್ಕಾರ ಪಾರದರ್ಶಕವಾಗಿ ಕಾರ್ಯನಿರ್ವಹಿಸಲಿದ್ದು, ಯಾ–ರಿಗೂ ತೊಂದರೆಯಾಗದಂತೆ ಖಾತ್ರಿಪಡಿಸಲಾಗುವುದು. ವ್ಯಾಪಾರಿಗಳಿಗೆ ನೆರವು ನೀಡಲು ಈಗಲೇ ಸಹಾಯವಾಣಿ ಇದ್ದು, ಇದನ್ನು ಪರಿಣಾಮಕಾ–ರಿಯಾಗಿಸಬೇಕು ಎಂದು ಸಿಎಂ ಅಧಿಕಾ–ರಿಗಳಿಗೆ ಸೂಚಿಸಿದರು.

**ಪ್ರತಿಭಟನೆ ಕೈಬಿಟ್ಟ ವ್ಯಾಪಾರಿಗಳು :** ವ್ಯಾಪಾರ ವಹಿವಾಟು ಬಂದ್??ಗೆ ಯಾವುದೇ ಸಂಘಟನೆಗಳು ಬೆಂಬಲ ನೀಡಿಲ್ಲ ಎಂದು ಪ್ರತಿನಿಧಿಗಳು ಸ್ಪಷ್ಟಪಡಿಸಿದ್ದಾರೆ. ಈ ಕುರಿತಾಗಿ ನಡೆಸಲು ನಿರ್ಧರಿಸಿದ್ದ ಎಲ್ಲಾ ರೀತಿಯ ಪ್ರತಿಭಟನೆಗಳನ್ನು ಕೈಬಿಡಲಾಗುವುದು ಎಂದು ಸಂಘ ಸಂಸ್ಥೆಗಳ ಪ್ರತಿನಿಧಿಗಳು ತಿಳಿಸಿದರು.

## ಮಹಾದಾಯಿ ಯೋಜನೆ ಗೋವಾ ಮುಖ್ಯಮಂತ್ರಿ ಹೇಳಿಕೆ ಆಘಾತಕಾರಿ: ಎಚ್.ಕೆ.ಪಾಟೀಲ್

ಬೆಂಗಳೂರು : ಕೇಂದ್ರ ಸರಕಾರವು ಮಹಾದಾಯಿ ಯೋಜನೆಗೆ ಯಾವುದೇ ಕಾರಣಕ್ಕೂ ಅನುಮೋದನೆ ನೀಡುವುದಿಲ್ಲ ಎಂದು ಕೇಂದ್ರ ಪರಿಸರ ಮತ್ತು ಅರಣ್ಯ ಖಾತೆ ಸಚಿವ ಭೂಪೇಂದ್ರ ಯಾದವ್ ತಮಗೆ ತಿಳಿಸಿದ್ದಾರೆ ಎಂದು ಗೋವಾ ರಾಜ್ಯದ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಅಲ್ಲಿನ ವಿಧಾನಸಭೆಯಲ್ಲಿ ಅಧಿಕೃತ ಹೇಳಿಕೆ ನೀಡಿರುವುದು ಕರ್ನಾಟಕಕ್ಕೆ ಆಘಾತ ತಂದಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು.

ಬುಧವಾರ ವಿಧಾನಸೌಧದಲ್ಲಿ ತುರ್ತು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮಹಾದಾಯಿ ಜಲವಿವಾದವು ಅಂತರರಾಜ್ಯ ಜಲವಿವಾದ ಕಾಯ್ದೆಯನ್ವಯ ಒಂದು ನ್ಯಾಯಾಧೀಕರಣ ರಚನೆಯಾಗಿ ಅದು ಅಂತಿಮ ತೀರ್ಪು ನೀಡಿ, ಆ ತೀರ್ಪು ಕೇಂದ್ರ ಸರಕಾರದ ಗೆಜೆಟ್‌ನಲ್ಲಿ ಪ್ರಕಟಣೆಯಾಗಿ ನ್ಯಾಯಾಧೀಕರಣದ ತೀರ್ಪು ಜಾರಿಗೆ ಬಂದಿದೆ ಎಂದು ಹೇಳಿದರು.

ಕರ್ನಾಟಕವು ಕಳಸಾ–ಬಂಡೂರಿ ಯೋಜನೆಗೆ 7.56 ಟಿ.ಎಂ.ಸಿ ಅಡಿ ನೀರನ್ನು ಮಲಪ್ರಭಾ ಕಣಿವೆಗೆ ತಿರುಗಿಸಿಕೊಳ್ಳಲು ತನ್ನ ಕೋರಿಕೆ ಸಲ್ಲಿಸಿತ್ತು. ಇದರಲ್ಲಿ 3.90 ಟಿ.ಎಂ.ಸಿ ನೀರನ್ನು ಕರ್ನಾಟಕದ ಪಾಲಿಗೆ ಹಂಚಿಕೆ ಮಾಡಿದೆ. ಅಂತರ್ ಕಣಿವೆ ತಿರುಗಿಸುವಿಕೆಯನ್ನು ಕರ್ನಾಟಕದ ಕಡೆಯಿಂದ ಮಾಡಿಕೊಳ್ಳಲು ನ್ಯಾಯಾಧೀಕರಣ ಒಪ್ಪಿದೆ ಎಂದು ಎಚ್.ಕೆ.ಪಾಟೀಲ್ ತಿಳಿಸಿದರು.

ಈ ಯೋಜನೆ ಜಾರಿಗೊಳಿಸಲು ಪ್ರಸ್ತಾವನೆಯನ್ನು ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರಕ್ಕೆ ಕರ್ನಾಟಕ ಮಂಜೂರಿಗಾಗಿ/ತೀರುವಳಿಗಾಗಿ (Clearance) ಅರ್ಜಿ ಸಲ್ಲಿಸಿತ್ತು. 10.6 ಹೆಕ್ಟೇರ್ ಅರಣ್ಯ ಭೂಮಿ ಕಾಳಿ ಮತ್ತು ಸಹ್ಯಾದ್ರಿ ಹುಲಿ ಕಾಯ್ದಿಟ್ಟ ಪ್ರದೇಶದಲ್ಲಿ ಬರುತ್ತದೆ ಎಂದು ಗೋವಾ ಆಕ್ಷೇಪಿಸಲು ಪ್ರಾರಂಭಿಸಿತು. ಈ ಹಿನ್ನೆಲೆಯಲ್ಲಿ 2024ರ ಜ.23ರಂದು ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರವು ಈ ಅರಣ್ಯ ಪ್ರದೇಶವನ್ನು ಬಳಕೆ ಮಾಡಿಕೊಳ್ಳಲು ಶಿಫಾರಸ್ಸು ಮಾಡಿದೆ ಎಂದು ಅವರು ಮಾಹಿತಿ ನೀಡಿದರು. ಇದಾದ ನಂತರ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಮುಂದೆ 77ನೆ, 79ನೆ ಮತ್ತು 80ನೆ ಸಭೆಗಳಲ್ಲಿ ಈ ವಿಷಯವನ್ನು ನಿರ್ಣಯ ಮಾಡದೆ ವೃಥಾ ಕಾಲಹರಣ ಮುಂದೂಡುತ್ತಾ ಬಂದಿದೆ.

ಸರ್ವೋಚ್ಚ ನ್ಯಾಯಾಲಯವು ಕರ್ನಾಟಕದ ಮಹಾದಾಯಿ



ಯೋಜನೆಗೆ ತಡೆಹಿಡಿಯಬೇಕೆಂಬುವ ಯಾವುದೇ ಆದೇಶ ನೀಡಿಲ್ಲ ಎಂದು ಎಚ್. ಕೆ.ಪಾಟೀಲ್ ಗಮನ ಸೆಳೆದರು.

2022ರ ಡಿ.29ರಂದು ಕೇಂದ್ರ ಜಲ ಆಯೋಗವು ಕಳಸಾ ಮತ್ತು ಬಂಡೂರಿ ಯೋಜನೆಗಳ ಪರಿಷ್ಕೃತ ವಿವರವಾದ ಯೋಜನಾ ವರದಿಗಳಿಗೆ ಅನುಮೋದನೆ ನೀಡಿದೆ. 2023ರ ಎ.19ರಂದು ಸರ್ವೋಚ್ಚ ನ್ಯಾಯಾಲಯವು ಗೋವಾದ ಮೂಲದಾವೆಯ ಮೇಲಿನ ಮಧ್ಯಂತರ ಅರ್ಜಿಯನ್ನು ವಿಲೇವಾರಿ ಮಾಡಿ, ಕಳಸಾ ಯೋಜನೆಗೆ ತಡೆಯೊಡ್ಡುವಂತೆ ಕರ್ನಾಟಕದ ವಿರುದ್ಧ ತಡೆಯಾಜ್ಞೆ ನೀಡುವಂತೆ ಕೋರಿದ್ದ ಗೋವಾದ ಪ್ರಾರ್ಥ–ನೆಯನ್ನು ವಜಾ ಮಾಡಿದೆ ಎಂದು ಅವರು ತಿಳಿಸಿದರು.

ನ್ಯಾಯಾಂಗದ ಯಾವುದೇ ಅಡೆತಡೆ ಇಲ್ಲದಿದ್ದರೂ ಕರ್ನಾಟಕದ ವಿರುದ್ಧ ಮಲತಾಯಿ ಧೋರಣೆ ಅನುಸ–ರಿಸುತ್ತಾ ಕರ್ನಾಟಕದ ನ್ಯಾಯಯುತವಾದ ಮತ್ತು ಕಾನೂನುಬದ್ಧವಾದ ಹಾಗೂ ಸಂವಿಧಾನಾತ್ಮಕ ರಕ್ಷಣೆ ಹೊಂದಿರುವ ಯೋಜನೆಗಳನ್ನು ಅನುಷ್ಠಾನ ಮಾಡುವಲ್ಲಿ ವೃಥಾ ಅಡ್ಡಿ ಮಾಡುತ್ತಿರುವುದು ಒಕ್ಕೂಟ ವ್ಯವಸ್ಥೆಗೆ ಅನ್ಯಾಯಗೊಳಿಸಿದಂತಾಗಿದೆ ಎಂದು ಎಚ್.ಕೆ.ಪಾಟೀಲ್ ಅಸಮಾಧಾನ ವ್ಯಕ್ತಪಡಿಸಿದರು.

ನ್ಯಾಯಾಂಗದಿಂದ ಯಾವುದೇ ಅಡೆತಡೆಯಿಲ್ಲದ ಯೋಜನೆಗಳನ್ನು ಮತ್ತು ಕಾನೂನು ಬದ್ಧವಾಗಿ ಅಂತರ್‌ರಾಜ್ಯ ಜಲವಿವಾದ ಕಾಯ್ದೆಯಡಿಯಲ್ಲಿ ನ್ಯಾಯಾಧೀಕರಣದಿಂದ ಇತ್ಯರ್ಥಗೊಂಡಿರುವ ಯೋಜನೆಗಳನ್ನು ಅನುಷ್ಠಾನಗೊಳಿಸಲು, ಕರ್ನಾಟಕಕ್ಕೆ ಕೇಂದ್ರ ಸರಕಾರವು ತಾನು ನೀಡಬೇಕಾದ ಮಂಜೂರಾತಿಗಳನ್ನು ತಕ್ಷಣ ನೀಡದಿರುವುದು ಜನರ ಆಕ್ರೋಶಕ್ಕೆ ಕಾರಣವಾಗುತ್ತಿದೆ. ಉತ್ತರ ಕರ್ನಾಟಕ ಜನರ ಹಾಗೂ ರೈತರ ಹಿತ ಗಮನಿಸಿ, ಕೇಂದ್ರ ಸರಕಾರ ತಕ್ಷಣ ಅನುಮತಿ ನೀಡಬೇಕು ಎಂದು ಅವರು ಒತ್ತಾಯಿಸಿದರು.

## ರಾಜ್ಯ ಸರ್ಕಾರ ನಡೆಸುತ್ತಿರುವುದು ಸಾಮಾಜಿಕ- ಶೈಕ್ಷಣಿಕ ಆರ್ಥಿಕ ಸಮೀಕ್ಷೆ, ಜಾತಿ ಗಣತಿ ಅಲ್ಲ: ಸಚಿವ ಶಿವರಾಜ್ ತಂಗಡಗಿ

ಬೆಂಗಳೂರು: ಕೇಂದ್ರ ಸರ್ಕಾರ ನಡೆಸುತ್ತಿರುವುದು ಜಾತಿಗಣತಿ. ರಾಜ್ಯ ಸರ್ಕಾರ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷೆಯನ್ನು ನಡೆಸುತ್ತಿದ್ದು, ಗುರುವಾರ ಅಧಿಕೃತ ಆದೇಶ ಹೊರಡಿಸಲಾಗುತ್ತದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ತಿಳಿಸಿದರು.

ವಿಕಾಸಸೌಧದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿಎಂ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆದು ಮಹತ್ವದ ವಿಚಾರಗಳನ್ನು ಚರ್ಚೆ ನಡೆಸಲಾಗಿದೆ. ರಾಜ್ಯದಲ್ಲಿ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ವರದಿ ರಚನೆಯ ಸಿದ್ಧತೆಗಳು ಅಂತಿಮಗೊಳ್ಳುತ್ತಿದ್ದು, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರ ನೇತೃತ್ವದ ನಿಯೋಗವು ಮುಂದಿನ ಸೋಮವಾರ ತೆಲಂಗಾಣಕ್ಕೆ ತೆರಳಿ ಅಲ್ಲಿನ ಸಮೀಕ್ಷೆಯ ಪದ್ಧತಿಯನ್ನು ಅಧ್ಯಯನ ನಡೆಸಲಿದೆ ಎಂದರು.

ಕಾಂತರಾಜು ಅವರ ವರದಿ ರಚಿಸಿ 10 ವರ್ಷ ಕಳೆದಿರುವುದರಿಂದ ರಾಜ್ಯದಲ್ಲಿ ಮತ್ತೊಮ್ಮೆ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲು ಮುಖ್ಯಮಂತ್ರಿಗಳು ತೀರ್ಮಾನಿಸಿದ್ದಾರೆ. ಮುಂದಿನ ಮೂರು ತಿಂಗಳಲ್ಲಿ ವರದಿ ನೀಡಬೇಕು ಎಂದು ಮುಖ್ಯಮಂತ್ರಿಗಳು ಆಯೋಗಕ್ಕೆ ನಿರ್ದೇಶನ ನೀಡಿದ್ದಾರೆ ಎಂದು ತಿಳಿಸಿದರು.

ಸಮೀಕ್ಷೆ ನಡೆಸಲು ಶಿಕ್ಷಕರನ್ನೇ ಬಳಸಿಕೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಗಿದೆ. ಎಲ್ಲಾ ಇಲಾಖೆಯ ಅಧಿಕಾರಿಗಳು ಇದಕ್ಕೆ ಕೈಜೋಡಿಸಲಿದ್ದಾರೆ. ಮುಂದಿನ ಹಂತಗಳಲ್ಲಿ ಹೇಗೆಲ್ಲ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕು, ಸಮೀಕ್ಷೆಯ ಮಾದರಿ ಹೇಗಿರಬೇಕು, ಶಿಕ್ಷಕ–ರಿಗೆ ಸಮೀಕ್ಷೆಯ ತರಬೇತಿ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಅಧಿಕಾರಿಗಳ ಮಟ್ಟದಲ್ಲಿ ನಿರಂತರವಾಗಿ ಸಭೆಗಳು ನಡೆಯಲಿವೆ.

ಈ ಹಿಂದೆ ಕಾಂತರಾಜು ಆಯೋಗವು ಸಮೀಕ್ಷೆ ನಡೆಸಿದ ಸಂದರ್ಭದಲ್ಲಿ ಸಮೀಕ್ಷಾ ಮಾದರಿ ಸಂಗ್ರಹಕ್ಕೆ 54 ಕಾಲಂಗಳು ಇದ್ದವು. ಅದರಂತೆ ಪ್ರತಿ ಮನೆಗೆ ತೆರಳಿ



ಅವುಗಳನ್ನು ಭರ್ತಿ ಮಾಡಿ ಅದರ ಆಧಾರದ ಮೇಲೆ ಸಮೀಕ್ಷಾ ವರದಿ ರಚಿಸಲಾಗಿತ್ತು. ಈ ಬಾರಿ ಎಷ್ಟು ಮಾದರಿ ಇರಬೇಕು ಎಂಬುದರ ಬಗ್ಗೆ ನಿರ್ಧರಿಸಲು ತಜ್ಞರ ತಂಡವೊಂದನ್ನು ರಚಿಸಲು ತೀರ್ಮಾನಿಸಲಾಗಿದೆ. ಈ ಎಲ್ಲಾ ಪ್ರಕ್ರಿಯೆಗಳು ಗುರುವಾರದಿಂದ ಪ್ರಾರಂಭವಾಗುತ್ತವೆ ಎಂದು ಹೇಳಿದರು.

ಸಮೀಕ್ಷೆಯನ್ನು ಅತ್ಯಂತ ಪಾರದರ್ಶಕವಾಗಿ ನಡೆಸಲಾಗುವುದು. ಮನೆ ಮನೆ ಸಮೀಕ್ಷೆಯ ಜೊತೆಗೆ ತಂತ್ರಜ್ಞಾನವನ್ನೂ ಸಹ ಬಳಸಿಕೊಳ್ಳಲಾಗುವುದು. ಒಂದು ವೇಳೆ ಸಮೀಕ್ಷೆ ಮಾಡುವವರು ತಮ್ಮ ಮನೆಗೆ ಭೇಟಿ ನೀಡಿದ ವೇಳೆ ಕುಟುಂಬದ ಸದಸ್ಯರು ಲಭ್ಯ ಇಲ್ಲದಿದ್ದಾಗ ಅಂತಹವರು ಸ್ವಯಂ ವಿವರಗಳನ್ನು ದಾಖಲು ಮಾಡುವುದಕ್ಕೆ ಆಯಪ್ ಸೇರಿ ಮುಂತಾದ ತಾಂತ್ರಿಕ ಸೌಲಭ್ಯಗಳನ್ನು ಸಹ ಬಳಸಿಕೊಳ್ಳಲು ವ್ಯವಸ್ಥೆ ಕಲ್ಪಿಸಲಾಗುವುದು ಎಂದು ವಿವರಿಸಿದರು.

ದಸರಾ ರಜೆಯಲ್ಲಿ ಶಿಕ್ಷಕರನ್ನು ಬಳಕೆ ಮಾಡಿಕೊಂಡು 15 ದಿನಗಳಲ್ಲಿ ಸಮೀಕ್ಷೆ ನಡೆಸಲಾಗುವುದು. ಶಾಲಾ ರಜೆ ವೇಳೆ ಯಾವುದೇ ತೊಂದರೆ ಆಗುವುದಿಲ್ಲ. ಅಗತ್ಯ ತಂತ್ರಜ್ಞಾನ ಬಳಕೆ ಮಾಡಿಕೊಂಡು ಸಮೀಕ್ಷೆ ಮಾಡಲಾಗುತ್ತದೆ. 15 ದಿನದಲ್ಲಿ ಸಮೀಕ್ಷೆ ನಡೆಸಲು ಯಾವುದೇ ತೊಂದರೆ ಆಗುವುದಿಲ್ಲ. ಏಳು ಕೋಟಿ ಜನರು ಕೂಡ ಸಮೀಕ್ಷೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ರಾಜ್ಯ ಸರ್ಕಾರ ಮಾಡುತ್ತಿರುವುದು ಜಾತಿ ಗಣತಿ ಅಲ್ಲ ಎಂಬುದು ಈಗಲೇ ಸ್ಪಷ್ಟಪಡಿಸುತ್ತೇವೆ. ಜಾತಿಗಣತಿಯನ್ನು ಕೇಂದ್ರ ಸರ್ಕಾರ ಮಾಡುತ್ತಿದೆ. ಕೇಂದ್ರ ಸರ್ಕಾರ ಮಾಡುತ್ತಿರುವ ಜಾತಿ ಗಣತಿಗೂ ರಾಜ್ಯ ಸರ್ಕಾರದ ಸಮೀಕ್ಷೆಗೂ ವ್ಯತ್ಯಾಸ ಇದೆ.

ರಾಜ್ಯ ಸರ್ಕಾರವು ರಾಜ್ಯದ ಪ್ರತಿ ವ್ಯಕ್ತಿಯ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ನಡೆಸುತ್ತದೆ. ಆ ವ್ಯಕ್ತಿಯ ಓದು, ಉದ್ಯೋಗ, ವ್ಯಾಪಾರ, ಆರ್ಥಿಕ ಸ್ಥಿತಿಗತಿ ಅರಿಯುವ ಉದ್ದೇಶ ಇದೆ. ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಿಂದುಳಿದಂತಹವರು ಯಾವುದೇ ಸಮಯದಾಯದರಾಗಿದ್ದರೂ ಅವರಿಗೆ ವಿಶೇಷ ಸೌಲಭ್ಯಗಳನ್ನು ಕಲ್ಪಿಸಿ ಅವರನ್ನು ಮೇಲಕ್ಕೆತ್ತಬೇಕು ಎಂಬುದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಹುದಿನಗಳ ಆಸೆ ಮತ್ತು ಕನಸು ಎಂದು ಹೇಳಿದರು. ಕೇಂದ್ರ ಶೇ. 24.1 ರಷ್ಟು ಮೊತ್ತವನ್ನು ಎಸ್?ಸಿ – ಎಸ್?ಟಿ ವರ್ಗಕ್ಕೆ ಮೀಸಲಿಡಲಿ: ಕೇಂದ್ರ ಸರ್ಕಾರವೂ ಸಹ ಸಿದ್ದರಾಮಯ್ಯ ಅವರ ಸರ್ಕಾರದ ಮಾದರಿಯನ್ನು ಅನುಸರಿಸಿ ಪ್ರತಿ ವ್ಯಕ್ತಿಯ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಯ ಸಮೀಕ್ಷೆ ನಡೆಸಬೇಕು. ಈ ಮೂಲಕ ದೇಶದ ಜನಸಂಖ್ಯೆಗೆ ಅನುಗುಣವಾಗಿ ತನ್ನ ಬಜೆಟ್ ವಿಂಗಡಿಸಬೇಕು. ಶೇ.24.1ರಷ್ಟು ಇರುವ ಪರಿಶಿಷ್ಟ ಜಾತಿ ಮತ್ತು ಪಂಗಡದವ–ರಿಗೆ ಬಜೆಟ್‌ನ ಅನುದಾನ ಮೀಸಲಿಡಬೇಕು. ಅದು ಬಿಟ್ಟು ಪರಿಶಿಷ್ಟರ ಬಗ್ಗೆ ಕೇವಲ ಬಾಯಿ ಮಾತಿನಲ್ಲಿ ಪ್ರಸಾದ ಹಂಚುವುದನ್ನು ನಿಲ್ಲಿಸಬೇಕು ಎಂದರು.

ವೀರಶೈವ ಲಿಂಗಾಯತ ಪಂಚಪೀಠದವರು ದಾವಣಗೆರೆಯ ಸಮಾವೇಶದ ಮೂಲಕ ತಮ್ಮ ಸಮುದಾಯದವರು ಜಾತಿಗಣತಿಯನ್ನು ಏನು ಬರೆಸಬೇಕು ಎಂದು ಹೇಳಿದ್ದಾರೆ. ಇದು ಸ್ವಾಗತಾರ್ಹ. ಅವರು ಜಾತಿಗಣತಿಯನ್ನು ವಿರೋಧ ಮಾಡಿಲ್ಲ. ಸಮೀಕ್ಷೆಯಲ್ಲಿ ಅವರವರ ಸಮುದಾಯ ಏನು ದಾಖಲಿಸಬೇಕು ಎಂಬುದು ಅವರಿಗೆ ಬಿಟ್ಟಿದ್ದು. ಇದಕ್ಕೆ ಯಾರ ಅಭ್ಯಂತರವಾಗಲಿ, ಕಟ್ಟಪ್ಪಣೆಯಾಗಲಿ ಇಲ್ಲ ಎಂದು ಸಚಿವರು ಹೇಳಿದರು.

ರಾಜ್ಯ ರಾಜಕಾರಣದಲ್ಲಿ ಏನಾದರೂ ಕ್ರಾಂತಿ ಆಗಲಿದೆಯೇ ಎಂಬ ಪ್ರಶ್ನೆಗೆ, ಜನವರಿಯಲ್ಲಿ ಮಕರ ಸಂಕ್ರಾಂತಿ ಇದೆ. ಇದು ಬಿಟ್ಟರೆ ಯಾವ ಕ್ರಾಂತಿಯೂ ಆಗುವುದಿಲ್ಲ ಎಂದು ಸಚಿವರು ನಗೆಚಟಾಕಿ ಹಾರಿಸಿದರು.

## ಕೆಪಿಸಿಎಲ್ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮ : ಮುಖ್ಯಮಂತ್ರಿ

ಬೆಂಗಳೂರು, ಜು.23: ಕರ್ನಾಟಕ ವಿದ್ಯುತ್ ನಿಗಮ ನಿಯಮಿತದಲ್ಲಿ(ಕೆಪಿಸಿಎಲ್) ಖಾಲಿ ಇರುವ ಹುದ್ದೆಗಳ ಭರ್ತಿಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಬುಧವಾರ ಇಲ್ಲಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ಆಯೋಜಿಸಿದ್ದ ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ '56ನೇ ಸಂಸ್ಥಾಪನಾ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯುತ್ ಉತ್ಪಾದನೆಯಲ್ಲಿ ಕರ್ನಾಟಕ ರಾಜ್ಯ ಈಗ ಸ್ವಾವಲಂಬಿಯಾಗಿದ್ದು, ಇದರಲ್ಲಿ ಕೆಪಿಸಿ–ಎಲ್ ನೌಕರರ ಶ್ರಮ ಅಪಾರವಿದೆ. ಕೆಪಿಸಿ–ಎಲ್ ಅಧ್ಯಕ್ಷನಾಗಿ ನಾನೂ ಕೂಡ ಕೆಪಿಸಿಎಲ್ ನೌಕರರಲ್ಲಿ ಒಬ್ಬನಾಗಿದ್ದೀನಿ. ಅತೀ ಹೆಚ್ಚು ಕಾಲ ಕೆಪಿಸಿಎಲ್ ಅಧ್ಯಕ್ಷನಾಗಿ ಸಂಸ್ಥೆಯ ಬೆಳವಣಿಗೆಗೆ ಸಾಕ್ಷಿಯಾಗಿದ್ದೇನೆ. ಸಚಿವ ಕೆ.ಜೆ. ಜಾರ್ಜ್ ನೇತೃತ್ವದಲ್ಲಿ ಕೆಪಿಸಿಎಲ್ ಸಿಬ್ಬಂದಿ ಮತ್ತು ಅಧಿಕಾರಿಗಳ ತಂಡ ಉತ್ತಮವಾಗಿ ಸಂಸ್ಥೆಯನ್ನು ಮುನ್ನಡೆಸುತ್ತಿದೆ ಎಂದು ಅವರು ತಿಳಿದರು.

ನಮ್ಮ ಮೇಲೆ, ಅಧಿಕಾರಿಗಳ ಮೇಲೆ ಸಮಾಜದ ಋಣ ಇದೆ. ನಾವಾಗಲೀ, ಅಧಿಕಾರಿಗಳಾಗಲೀ ಸಮಾಜದ ಹಣದಲ್ಲಿ ಬೆಳೆದಿದ್ದೇವೆ. ಆದ್ದರಿಂದ ಸಮಾಜದ ಋಣ ತೀರಿಸುವ ಕಾಳಜಿಯಿಂದ ಕೆಲಸ ಮಾಡಬೇಕಿದೆ. ನಾವು ಓದುವಾಗ ಊರಲ್ಲಿ ಕರೆಂಟ್ ಇರಲಿಲ್ಲ. ಸೀಮೆಎಣ್ಣೆ ದೀಪದಲ್ಲಿ ಓದಿ ಮೇಲೆ ಬಂದಿದ್ದೇವೆ. ಈಗ ವರ್ಷಕ್ಕೆ 20 ಸಾವಿರ ಕೋಟಿ ರೂಪಾಯಿ ಪಂಪ್ ಸೆಟ್ ಸಬ್ಸಿಡಿ ಹಣವನ್ನು ರೈತರ ಪರವಾಗಿ ಸರಕಾರ ಕೊಡುತ್ತಿದೆ. ಕೆಪಿಸಿ–ಎಲ್ ನೌಕರರ ಶ್ರಮದಿಂದ ವಿದ್ಯುತ್ ರೈತ–ರಿಗೆ ತಲುಪುತ್ತಿದೆ ಎಂದು ಅವರು ತಿಳಿಸಿದರು. ಕಾರ್ಯಕ್ರಮದಲ್ಲಿ ಇಂಧನ ಸಚಿವ ಸಚಿವ ಕೆ.ಜೆ.ಜಾರ್ಜ್, ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರ ನಸೀರ್ ಅಹಮದ್, ಇಂಧನ ಇಲಾಖೆಯ ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಸೇರಿದಂತೆ ಮತ್ತಿತರರು ಇದ್ದರು.

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ: ವಿವಿಧ ಸಮಿತಿಗಳ ಪ್ರಗತಿ ಪರಿಶೀಲನಾ ಸಭೆ

## ಮಹಿಳೆಯರ ರಕ್ಷಣೆಗೆ ಎಲ್ಲ ಇಲಾಖೆಗಳ ಸಮನ್ವಯ ಅಗತ್ಯ: ಜಿಲ್ಲಾಧಿಕಾರಿ

ಬೆಳಗಾವಿ, ಮಹಿಳೆಯರ ಮೇಲಾಗುತ್ತಿರುವ ಕೌಟುಂಬಿಕ ಹಿಂಸೆಯ ಪ್ರಕರಣಗಳನ್ನು ಇತ್ಯಥ–ರ್ಗೊಳಿಸುವಲ್ಲಿ ತಳಮಟ್ಟದಲ್ಲಿ ಸಾಂತ್ವನ ಕೇಂದ್ರಗಳು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾ–ರಿಗಳು ಬಹು ಮುಖ್ಯ ಪಾತ್ರವನ್ನು ವಹಿಸುತ್ತಿದ್ದಾರೆ ಈ ಕುರಿತು ಎಲ್ಲ ಇಲಾಖೆಗಳು ಇನ್ನಷ್ಟೂ ಚುರುಕಾಗಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇರಿ ಸಭಾಂಗಣದಲ್ಲಿ ಬುಧವಾರ (ಜು.23) ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಸಮಿತಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆಗೆ ಸಂಬಂಧಿಸಿದಂತೆ ಪ್ರತಿ ಗ್ರಾಮ ಪಂಚಾಯತ್ ಹಂತದಲ್ಲಿ ಕಾವಲು ಸಮಿತಿಗಳಿದ್ದು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಮಹಿಳೆ ಮತ್ತು ಮಕ್ಕಳ ಅಪಹರಣಗಳು, ಪೋಕ್ಸೋ, ಬಾಲ್ಯ ವಿವಾಹ ಹಾಗೂ ವಿವಾಹೇತರ ಸಂಬಂಧಗಳಂತಹ ಪ್ರಕರಣಗಳು ಕಳ್ಳಸಾಗಾಣಿಕೆಯೊಂದಿಗೆ ಸಹ ಸಂಬಂಧ ಹೊಂದಿರುವುದರಿಂದ ಇಂತಹ ಪ್ರಕರಣಗಳು ಹೆಚ್ಚಿನ



ಸಂಖ್ಯೆಯಲ್ಲಿ ಕಂಡು ಬರುವ ಪ್ರದೇಶಗಳನ್ನು ಗುರುತಿಸಿ ರಕ್ಷಣೆಗೆ ಕ್ರಮ ವಹಿಸಬೇಕು.

ಯಾವುದೇ ಕಾರಣಕ್ಕೂ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆಯಾಗದಂತೆ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕುಸ ಹಾಗೂ ಪ್ರತಿ ತಿಂಗಳು ಈ ಕುರಿತು ಪ್ರಗತಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದರು.

ಇತ್ತೀಚ್ಚಿನ ದಿನಗಳಲ್ಲಿ ಸೈಬರ್ ಅಪರಾಧಗಳಿಂದಾಗಿ ಯುವತಿಯರಲ್ಲಿ ಆತ್ಮಹತ್ಯೆ ಮಾಡಿಕೊಳ್ಳುವ ಹಾಗೂ ಪೋಕ್ಸೋ ಪ್ರಕರಣಗಳು ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಶಾಲಾ–ಕಾಲೇಜುಗಳಲ್ಲಿ ಅರಿವು ಕಾರ್ಯಕ್ರಮಗಳನ್ನು ಹಾಗೂ ಕಾರ್ಯಾಗಾರಗಳನ್ನು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಬೇಕು.

ಮಹಿಳಾ ಅಭಿವೃದ್ಧಿ ನಿಗಮದಡಿ ಅನುಷ್ಠಾನಗೊಳ್ಳುತ್ತಿರುವ ಮಾಜಿ ದೇವದಾಸಿಗಳ ಹಾಗೂ ಲಿಂಗತ್ವ ಅಲ್ಪಸಂಖ್ಯಾತರ ಪನರ್ವಸತಿ ಯೋಜನೆಗಳಿಗೆ ಸಂಬಂಧಿಸಿದಂತೆ ಚರ್ಚಿಸುವುದರೊಂದಿಗೆ ಸ್ಥಾನಿಕವಾಗಿ ಭೇಟಿ ನೀಡಿ ಫಲಾನುಭವಿಗಳ ಸರ್ವೆ ಮಾಡಿ ವರದಿಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಚೇತನ ಕುಮಾರ, ಜಿಲ್ಲಾ ನಿರೂಪಣಾಧಿಕಾರಿ ಎಂ ಎನ್, ಶ್ರೀ ಅಣ್ಣಪ್ಪಾ ಹೆಗಡೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಈಶ್ವರ ಗಡಾದಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಿಬ್ಬಂದಿಗಳು, ವಿವಿಧ ಸಮಿತಿ ಸದಸ್ಯರು ಸಭೆಯಲ್ಲಿ ಉಪಸ್ಥಿತರಿದ್ದರು.

### ತಾಲ್ಲೂಕು ಆಸ್ಪತ್ರೆಗಳು ನಿರಂತರ 24/7 ಕಾರ್ಯನಿರ್ವಹಿಸಲು ಸರ್ಕಾರದ ಚಿಂತನೆ

## ಗುಣಮಟ್ಟದ ಆರೋಗ್ಯಯುತ ಸಮಾಜ ನಿರ್ಮಾಣಕ್ಕೆ ಸರ್ಕಾರದ ಆದ್ಯತೆ : ಸಚಿವ ದಿನೇಶ್ ಗುಂಡುರಾವ್

ಗದಗ: ರಾಜ್ಯದ ಎಲ್ಲ ತಾಲ್ಲೂಕು ಆಸ್ಪತ್ರೆಗಳು ನಿರಂತರ 24/7 ಕಾರ್ಯನಿರ್ವಹಿಸಲು ಸರ್ಕಾರದ ಚಿಂತನೆ ನಡೆಸಿದೆ. ಜೊತೆಗೆ ಗುಣಮಟ್ಟದ ಆರೋಗ್ಯಯುತ ಸಮಾಜ ನಿರ್ಮಾಣಕ್ಕೆ ಸರ್ಕಾರದ ಆದ್ಯತೆ ನೀಡಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡುರಾವ್ ಅವರು ಹೇಳಿದರು.

ತಾಲೂಕ ಆಸ್ಪತ್ರೆ (ನೂತನ ಸ್ಥಳದ ಆವರಣ) ವರವಿ ರೋಡ ಶಿರಹಟ್ಟಿಯಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ ಗದಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂಜಿನೀಯರಿಂಗ್ ಘಟಕ ತಾಲೂಕಾ ಆರೋಗ್ಯಾಧಿಕಾರಿಗಳು ಶಿರಹಟ್ಟಿ, ನಬಾರ್ಡ ಯೋಜನೆಯಡಿಯಲ್ಲಿ 100 ಹಾಸಿಗೆಗಳ ತಾಲೂಕ ಸಾರ್ವಜನಿಕ ಆಸ್ಪತ್ರೆ ನಿರ್ಮಾಣ ಕಾಮಗಾರಿಯ ಶಂಕು ಸ್ಥಾಪನೆ ಸಮಾರಂಭ ಹಾಗೂ ಮುಂಡರಗಿ ತಾಲೂಕ ಆಸ್ಪತ್ರೆಯ ಆವರಣದಲ್ಲಿ ಬಿ.ಪಿ.ಎಚ್.ಯು ಲ್ಯಾಬ್ ಹಾಗೂ ಲಕ್ಷೇಶ್ವರ ತಾಲೂಕ ಬಾಲೇಹೊಸೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ವೈದ್ಯಾಧಿಕಾರಿಗಳ ಮತ್ತು ಸಿಬ್ಬಂದಿಗಳ ವಸತಿ ಗೃಹ ಉದ್ಘಾಟನಾ ಸಮಾರಂಭ ಮತ್ತು ಗೃಹ ಆರೋಗ್ಯ ಯೋಜನೆಗೆ ಚಾಲನೆ ಹಾಗೂ ಆಶಾ ಕೈಪಿಡಿ ಬಿಡುಗಡೆ ಕಾರ್ಯಕ್ರಮ ಉದ್ದೇಶಿಸಿ ಅವರು ಮಂಗಳವಾರ ಮಾತನಾಡಿದರು.

ಶಿರಹಟ್ಟಿ ತಾಲೂಕಿನಲ್ಲಿ ನೂತನ ತಾಲೂಕ ಆಸ್ಪತ್ರೆ ನಿರ್ಮಾಣ ಆಗುತ್ತಿರುವುದು ಒಳ್ಳೆಯ ಬೆಳವಣಿಗೆ ಆಗಿದೆ. ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ವ್ಯವಸ್ಥೆ ನಿರ್ಮಾಣ ಮಾಡುವುದೇ ನಮ್ಮ ಗುರಿಯಾಗಿದೆ. ರಾಜ್ಯದ ಹಳೇ ತಾಲೂಕಗಳನ್ನು ಗುರುತಿಸಿ 100 ಬೆಡ್ ಆಸ್ಪತ್ರೆ ವ್ಯವಸ್ಥೆ ಇರುವ ತಾಲೂಕ ಆಸ್ಪತ್ರೆ ನಿರ್ಮಿಸಲು ತಿರ್ಮಾನ ಕೈಗೋಳ್ಳಲಾಗಿದೆ. ಒಂದೊಂದು ಆಸ್ಪತ್ರೆಗೆ 30 ರಿಂದ 40 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದ್ದು, ಎಲ್ಲ ಅತ್ಯಾಧುನಿಕ ಸುಸಜ್ಜಿತ ಸೌಲಭ್ಯಗಳನ್ನು ಆಸ್ಪತ್ರೆ ಒಳಗೊಳ್ಳಲಿದೆ. ಒಂದು ವರ್ಷದ ಒಳಗೆ ಕಾಮಗಾರಿ ಪೂರ್ಣಗೋಳಿಸಿ ಪುನಃ ನಾವೇ ಆಸ್ಪತ್ರೆಯನ್ನು ಉದ್ಘಾಟಿಸುತ್ತೇವೆ ಅಂತ ಭರವಸೆ ನೀಡಿದರು.

ತ ಗೃಹ ಆರೋಗ್ಯ ಯೋಜನೆಗೆ ಚಾಲನೆ ನೀಡಿದ್ದೇವೆ. ಇತ್ತಿಚೆಗೆ ಕ್ಯಾನ್ಸರ್, ನರರೋಗ, ಚರ್ಮರೋಗ, ಪಾರ್ಶ್ವವಾಯು ಸೇರಿದಂತೆ ಹಲವು ರೋಗಗಳು ಹೆಚ್ಚುತ್ತಿವೆ. ಆಶಾ ಕಾರ್ಯಕರ್ತರು, ವೈದ್ಯರು, ಸಿಬ್ಬಂಧಿಗಳು ಭಾಗವಹಿಸಿ ಈ ರೋಗಗಳನ್ನು ಪತ್ತೆ



ಹಚ್ಚುವುದಕ್ಕಾಗಿ ಗೃಹ ಆರೋಗ್ಯ ಯೋಜನೆಗೆ ಚಾಲನೆ ನೀಡಿದ್ದೇವೆ. ಈ ಯೋಜನೆ ಮೂಲಕ ಶಾಶ್ವತವಾಗಿ ಉಚಿತ ಚಿಕಿತ್ಸೆ ನೀಡಲಾಗುತ್ತದೆ. ಇದರಿಂದ ಅನೇಕ ರೋಗಗಳನ್ನು ನಿರ್ಮೂಲನೆ ಮಾಡಬಹುದಾಗಿದೆ ಎಂದರು.

ತಾಯಿ ಮತ್ತು ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ತಾಲ್ಲೂಕಿನಲ್ಲಿ 24/7 ನಿರಂತರ ಕಾರ್ಯನಿರ್ವಹಿಸಲು ಯೋಜನೆ ರೂಪಿಸಲಾಗುವುದು. ತಾಲೂಕ ಆಸ್ಪತ್ರೆಯನ್ನು ಮೆಲ್ದರ್ಜೆಗೆ ಏರಿಸಿ ಜಿಲ್ಲಾಸ್ಪತ್ರೆಯಲ್ಲಿ ಸಿಗುವ ಸೌಲಭ್ಯ ತಾಲೂಕ ಆಸ್ಪತ್ರೆಯಲ್ಲಿ ಸಿಗುವ ವ್ಯವಸ್ಥೆಯನ್ನು ಹಂತ–ಹಂತವಾಗಿ ಮಾಡಲಾಗುವುದು. ಜನರ ಆರೋಗ್ಯ ಉತ್ತಮವಾಗಿರಬೇಕು ಎನ್ನುವುದೇ ನಮ್ಮ ಉದ್ದೇಶವಾಗಿದೆ.

ಈಗಾಗಲೇ ಲಕ್ಷ್ಮೇಶ್ವರದ 30 ಹಾಸಿಗೆಯ ಸಮುದಾಯ ಆರೋಗ್ಯ ಕೇಂದ್ರವನ್ನು 50 ಹಾಸಿಗೆಯ ಮೇಲ್ದರ್ಜೆಗೆರಿಸಿ 5 ಕೋಟಿ ಅನುದಾನ ನೀಡಲಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ ಪಾಟೀಲ ಅವರು ಮಾತನಾಡಿ, ರಾಷ್ಟ್ರದಲ್ಲೇ ಮೊದಲ ಬಾರಿಗೆ ಬಡತನವನ್ನು ಬೇರು ಮಟ್ಟದಿಂದ ಕಿತ್ತೊಗೆಯಲಾಗಿದೆ. ಒಂದು ಬಡ ಕುಟುಂಬಕ್ಕೆ ಪ್ರತಿ ತಿಂಗಳು ಕನಿಷ್ಠ 5 ಸಾವಿರ ರೂ ನೀಡುವ ಕೇಲಸವನ್ನು ರಾಜ್ಯ ಸರ್ಕಾರ ಶೇ. 99% ಮಾಡಿದೆ. ಇದು ಕ್ರಾಂತಿಕಾರಕ ನಿರ್ಣಯವಾಗಿದೆ ಎಂದರು.

ಮನೆ–ಮನೆಗೆ ಹೋಗಿ ಆರೋಗ್ಯ ವಿಚಾ–ರಿಸುವ ಮಹತ್ವದ ಯೋಜನೆ ಗೃಹ ಆರೋಗ್ಯ ಯೋಜನೆಯಾಗಿದೆ. ದೀರ್ಘ ಕಾಲದ ಕಾಯಿಲೆಗಳಿಗೆ ಜೀವಾತಾವಧಿಯ ಕೊನೆಯವರೆಗೂ ಓಷಧಿ ನೀಡುವ ಕಾರ್ಯವನ್ನು ರಾಜ್ಯ ಸರ್ಕಾರ ಮಾಡುತ್ತಿದೆ ಇದು ನಮ್ಮ ಸರ್ಕಾರದ ಬದ್ದತೆ ಎಂದು ಹೇಳಿದರು.

ಛ ಜಿಲ್ಲಾ ಆರ್ರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಎಸ್. ಎಸ್ ನೀಲಗುಂದ ಪ್ರಾಸ್ತಾವಿಕ ಮಾತನಾಡಿ,ರಾಜ್ಯಾಧ್ಯಂತ ಅಗಷ್ಟ್ 14 ರಿಂದ ಗೃಹ ಆರೋಗ್ಯ ಕಾರ್ಯಕ್ರಮ ನಡೆಸಲು ರಾಜ್ಯ ಸರ್ಕಾರ ತಿರ್ಮಾನಿಸಿದೆ. ಆಶಾ ಕಾರ್ಯಕರ್ತರು ಹಾಗೂ ಆರೋಗ್ಯ ಸಿಬ್ಬಂಧಿಗಳು ಪ್ರತಿ ಮನೆ–ಮನೆಗೆ ತೆರಳಿ 30 ವರ್ಷ ಮೆಲ್ಪಟ್ಟವರಿಗೆ ಕಿಡ್ನಿ ಸಮಸ್ಯೆ ಸೇರಿದಂತೆ ಹಲವು ಆರೋಗ್ಯ ತಪಾಸಣೆ ಮಾಡಲಾಗುತ್ತದೆ. ಆರೋಗ್ಯದಲ್ಲಿ ಸಮಸ್ಯೆ ಇದ್ದಲ್ಲಿ ಉಚಿತ ಚಿಕಿತ್ಸೆ ನೀಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಡಾ. ಚಂದ್ರು ಕೆ ಲಮಾಣಿ ವಹಿಸಿದ್ದರು. ಈ ಸಂದರ್ಭದಲ್ಲಿ ಮುಂಡರಗಿ ಪುರಸಭೆ ಅಧ್ಯಕ್ಷೆ ನಿರ್ಮಲಾ ಕೊರ್ಲಹಳ್ಳಿ, ಶಿರಹಟ್ಟ ಪಟ್ಟಣ ಪಂಚಾಯತ ಅಧ್ಯಕ್ಷೆ ದೇವಕ್ಕ ಗುಡಿಮನಿ, ಉಪಾಧ್ಯಕ್ಷೆ ನೀಲವ್ವ ಹುಬ್ಬಳ್ಳಿ, ಬಾಲೆಹೊಸುವ ಗ್ರಾ ಪಂ ಅಧ್ಯಕ್ಷೆ ಚನ್ನವ್ವ ಮೈಲಾರಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ ಬಿ ಅಸೂಟಿ, ತಾಲ್ಲೂಕಿನ ಅಧ್ಯಕ್ಷರಾದ ವೀರಯ್ಯ ಮಠಪತಿ, ನಾಗರಾಜ ಮಡಿವಾಳರ, ಅಶೋಕ ಮಂದಾಲಿ, ಮಾಜಿ ಶಾಸಕ ರಾಮಣ್ಣ, ಮಾಜಿ ಸಂಸದ ಐ ಜಿ ಸನದಿ, ಸುಜಾತಾ ದೊಡ್ಡಮನಿ, ಸಿ. ಸಿ ನೂರಶೇಟ್ಟರ, ನಾಗರಾಜ ಲಕ್ಕುಂಡಿ, ದೀಪಕ್ ಕಪ್ಪತ್ತನವರ, ಆನಂದಸ್ವಾಮಿ ಗಡ್ಡದೇವರಮಠ, ಹುಮಾಯಾನ್ ಮಾಗಡಿ, ಜಾನು ಲಮಾಣಿ, ನಾಗರಾಜ ಲಕ್ಕುಂಡಿ ಸೇರಿದಂತೆ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ, ಸಿಇಓ ಭರತ್ ಎಸ್, ಎಸ್ಪಿ ರೋಹನ್ ಜಗದೀಶ್, ಆರೋಗ್ಯ ಇಲಾಖೆ ನಿರ್ದೇಶಕ ವಸಂತಕುಮಾರ್ ಕೆ, ಡಿಎಸ್‌ಓ ಡಾ. ವೆಂಕಟೇಶ ರಾಠೋಡ್ ಅನೇಕರು ಉಪಸ್ಥಿತರಿದ್ದರು.

# ಶಾದಿಮಹಲ್ ಕಾಂಕ್ರೀಟ್ ಕಾಮಗಾರಿಗೆ ಪೂಜೆ



ಹಿರೇಬಾಗೇವಾಡಿ: ಹಿರೇಬಾಗೇವಾಡಿ ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಶಾದಿ ಮಹಲ್ (ಕಮ್ಯುನಿಟಿ ಹಾಲ್) ಕಟ್ಟಡಕ್ಕೆ ಕಾಂಕ್ರೀಟ್ (ಸ್ಲ್ಯಾಬ್) ಹಾಕುವ ಕಾಮಗಾರಿಗೆ ಸ್ಥಳೀಯ ಜನ ಪ್ರತಿನಿಧಿಗಳು, ಮುಖಂಡರು ಹಾಗೂ ಯುವ ಕಾಂಗ್ರೆಸ್ ಮುಖಂಡ ಮೃಣಾಲ್ ಹೆಬ್ಬಾಳಕರ್ ಸೇರಿ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ವಿಶೇಷ ಪ್ರಯತ್ನದಿಂದಾಗಿ ಸುಮಾರು 2 ಕೋಟಿ ರೂ. ವೆಚ್ಚದಲ್ಲಿ ಶಾದಿ ಮಹಲ್ ನಿರ್ಮಾಣಗೊಳ್ಳಲಿದೆ. ನಿಗದಿತ ಸಮಯದಲ್ಲಿ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದು ಮೃಣಾಲ ಹೆಬ್ಬಾಳಕರ್ ತಿಳಿಸಿದರು.

ಈ ವೇಳೆ ದರ್ಗಾ ಅಜ್ಜನವರಾದ ಅಶ್ರಫ್ ಪೀರ್ ಖಾದ್ರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಸಿ.ಸಿ.ಪಾಟೀಲ, ಸುರೇಶ ಇಟಗಿ, ನಿಂಗಪ್ಪ ತಳವಾರ, ಗ್ರಾಮದ ಅನೇಕ ಮುಖಂಡರು, ನಾಗರಿಕರು ಉಪಸ್ಥಿತರಿದ್ದರು.

# ಬೆಳವಟ್ಟಿ: ಅಂಬೇಡ್ಕರ್ ಭವನ, ಶಾಲಾ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆ




ಬೆಳಗಾವಿ : ಬೆಳಗಾವಿ ಗ್ರಾಮೀಣ ವಿಧಾನಸಭೆ ಕ್ಷೇತ್ರದ ಬೆಳವಟ್ಟಿ ಗ್ರಾಮದಲ್ಲಿ ಸುಮಾರು 25 ಲಕ್ಷ ರೂ. ಗಳ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಡಾ.ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣದ ಕಾಮಗಾರಿಗೆ ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್ ಉಪಸ್ಥಿತಿಯಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ನಾಗ-ರಿಕರು ಭೂಮಿ ಪೂಜೆ ನೆರವೇರಿಸಿ, ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ನಾನೇಶ್ವರ್ ಚೌಗುಲೆ, ಉಪಾಧ್ಯಕ್ಷರಾದ ಮಯಾರಿ ಅರಗೊಡೆ, ಗ್ರಾಮ ಪಂಚಾಯತ್ ಅಧ್ಯಕ್ಷರಾದ ಮಹಾದೇವಿ ಪರಶುರಾಮ ಮೆದಾರ್, ಮುಖಂಡರಾದ ಮಧು ನಲವಡೆ, ನಿಶಾ ಚಂದಿಲಕರ್, ರಮೇಶ ಕಾಂಬಳೆ, ರಾಜು ಕಾಂಬಳೆ ಉಪಸ್ಥಿತರಿದ್ದರು.

ನಂತರ, ಬೆಳವಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಮಾರು 21.64 ಲಕ್ಷ ರೂ,ಗಳ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ 1 ಹೆಚ್ಚುವರಿ ಕೊಠಡಿಯ ಕಾಮಗಾರಿಗೆ ಸಹ ಭೂಮಿ ಪೂಜೆ ನೆರವೇರಿಸಿ, ಚಾಲನೆ ನೀಡಲಾಯಿತು.

ಈ ವೇಳೆ ಡಿ.ಡಿ.ಗೊರವ್, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಡಿ.ಎನ್.ಚೌಗುಲೆ, ಉಪಾಧ್ಯಕ್ಷರಾದ ಮಯೂರಿ ಹರಗೊಡೆ, ಗ್ರಾಮ ಪಂಚಾಯತ್ ಅಧ್ಯಕ್ಷರಾದ ಮಾದೇವಿ ಮೇದಾರ್,ಉಪಾಧ್ಯಕ್ಷರಾದ ಬಾಬುರಾವ್ ಪಾಟೀಲ, ಮಧು ನಲವಡೆ, ನಾರಾಯಣ ನಲವಡೆ, ಆರ್.ಬಿ.ದೇಸಾಯಿ ಇದ್ದರು.

# ಎಂಎಲ್ ಸಿ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಸ್ಮಶಾನ ಅಭಿವೃದ್ಧಿಗೆ ಚಾಲನೆ



ಮುನವಳ್ಳಿ : 2023-24ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಸವದತ್ತಿ ತಾಲೂಕಿನ ಮುನವಳ್ಳಿ ಪಟ್ಟಣದಲ್ಲಿ ಸ್ಮಶಾನದ ಅಭಿವೃದ್ಧಿ ಕಾಮಗಾರಿಗೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಂಗಳವಾರ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

ಈ ವೇಳೆ ಶಾಸಕ ವಿಶ್ವಾಸ್ ವೈದ್ಯ, ಸಿ.ಬಿ.ಪಾಟೀಲ, ಚಂದ್ರು ಮುದೆನೂರ್, ಡಿ.ಡಿ.ಟೋಪೋಜಿ, ಮಾಜಿದ್ ಬೈರಕದಾರ್, ಗರೀಬ್ ಷಾ ಮಕಾನದಾರ ಮುಂತಾದವರು ಉಪಸ್ಥಿತರಿದ್ದರು.

# ದ್ವಿ ಚಕ್ರ ವಾಹನ ರಿಪೇರಿ ಮಾಡಿ ಕೊಡಲು ಟ್ರೈಯೋ ಗ್ರೂಪ್ಸ್ ಪ್ಯುವರ್ ಎನರ್ಜಿ ಪ್ರೈ.ಲಿ.ಗೆ ಆಯೋಗದ ಆದೇಶ

ಧಾರವಾಡ : ಹುಬ್ಬಳ್ಳಿಯ ಉಣಕಲ್ಲಿನ ನಿವಾಸಿ ರಾಕೇಶ ಮೆಣಸಿನಕಾಯಿ ಎಂಬುವರು ದಿ:13/05/2022 ರಂದು ಎದುರುದಾರರ ಧಾರವಾಡ ಟ್ರೈಯೋ ಗ್ರೂಪ್ಸ್ ಶೋರೂಮನಲ್ಲಿ ರೂ.98,000 ಪಾವತಿಸಿ ಇಲೆಕ್ಟ್ರೀಕ್ ಸ್ಕೂಟರನ್ನು ಖರೀದಿಸಿದ್ದರು. ದೂರುದಾರರು ಎದುರುದಾರರ ಹೇಳಿಕೆಯಂತೆ ವಾಹನವನ್ನು ಉಪಯೋಗಿಸುತ್ತಿದ್ದು ನಂತರ ವಾಹನವು ಎದುರುದಾರರು ಹೇಳಿದಷ್ಟು ಮೈಲೆಜನ್ನು ಕೊಡದೆ ಅತೀ ಕಡಿಮೆ ಮೈಲೆಜ ಕೊಡಲು ಪ್ರಾರಂಭಿಸಿತು. ಈ ವಿಷಯವನ್ನು ದೂರುದಾರರು ಎದುರುದಾರರಿಗೆ ತಿಳಿಸಿದಾಗ ಎದುರುದಾರರ ಸ್ಥಳೀಯ ಡೀಲರಗಳು ತಮ್ಮ ಅಂಗಡಿಯನ್ನು ಖಾಯಂ ಆಗಿ ಬಂದ ಮಾಡಿರುವುದರಿಂದ ದೂರುದಾರರು ಎದುರುದಾರರಿಗೆ ಸಾಕಷ್ಟು ಸಲ ವಿನಂತಿಸಿ ತಮ್ಮ ವಾಹನ ಬ್ಯಾಟರಿಯನ್ನು ಸರಿಪಡಿಸಿಕೊಡಲು ಕೇಳಿಕೊಂಡಿರುತ್ತಾರೆ. ಆದರು ಎದುರುದಾರರು ವಾಹನದ ಬ್ಯಾಟರಿಯನ್ನು ರೀಪೆರಿ ಮಾಡಿಕೊಟ್ಟಿರುವುದಿಲ್ಲ. ಎದುರುದಾರರ ಇಂತಹ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರುದಾರರು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ: 20/09/2024 ರಂದು ದೂರನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಸದಸ್ಯರು, ದೂರುದಾರರು ಎದುರುದಾರರಾದ ಟ್ರೈಯೋ ಗ್ರೂಪ್ಸ್ ಇವರಲ್ಲಿ ರೂ.98,000 ಹಣ ಪಾವತಿಸಿ ಪ್ಯೂವರ್ ಎನರ್ಜಿಯ ಇ-ವಾಹನವನ್ನು ಖರೀದಿಸಿದ್ದರು. ಆದರೆ ವಾಹನ ಖರೀದಿಸಿದ ಕೆಲವೇ ದಿನಗಳಲ್ಲಿ ವಾಹನದ ಮೈಲೆಜ ಬಹಳ ಕಡಿಮೆಕೊಡುತ್ತಿದ್ದರಿಂದ ಮತ್ತು ಬ್ಯಾಟರಿಯಲ್ಲಿ ನ್ಯೂನ್ಯತೆ ಕಂಡು ಬಂದಿದ್ದ-ರಿಂದ ಎದುರುದಾರರಿಗೆ ತಿಳಿಸಿದರು ಅವರು ಅದನ್ನು ಸರಿಪಡಿಸಿ ಕೊಟ್ಟಿರುವುದಿಲ್ಲ ಅಲ್ಲದೇ ತಮ್ಮ ಸ್ಥಳೀಯ ಅಂಗಡಿಗಳನ್ನು ಸಹ ಖಾಯಂ ಆಗಿ ಮುಚ್ಚಿರುವುದು ಗ್ರಾಹಕರ ರಕ್ಷಣಾ ಕಾಯ್ದೆಯಡಿ ಅನುಚಿತ ವ್ಯಾಪಾರ ಪದ್ಧತಿ ಮಾಡಿದ್ದಾರೆಂದು ಆಯೋಗ ಅಭಿಪ್ರಾಯಪಟ್ಟು ತೀರ್ಪು ನೀಡಿದೆ.

ಈ ಎಲ್ಲ ಸಂಗತಿಗಳನ್ನು ಆಧರಿಸಿ ಎದುರುದಾರ ಪ್ಯೂವರ್ ಎನರ್ಜಿ ಟ್ರೈಯೋ ಗ್ರೂಪ್ಸ್ ಕಂಪನಿಗೆ ಆದೇಶವಾದ ಒಂದು ತಿಂಗಳ ಒಳಗಾಗಿ ದೂರುದಾರರ ವಾಹನಕ್ಕೆ ಹೊಸ ಬ್ಯಾಟರಿಯನ್ನು ಅಳವಡಿಸಿ ಕೊಡಬೇಕು ಅಂತಾ ಆಯೋಗ ಅಭಿಪ್ರಾಯಪಟ್ಟಿದೆ. ಒಂದು ವೇಳೆ ಅದನ್ನು ಸರಿಪಡಿಸಿಕೊಡದೇ ಇದ್ದ ಕಾರಣ ದೂರುದಾರರ ಪಾವತಿ ಮಾಡಿದ ಹಣ ರೂ.98,000 ದೂರುದಾರರಿಗೆ ಮರಳಿ ಕೊಡಬೇಕು ಅಂತಾ ಆಯೋಗ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ, ತೊಂದರೆ ಹಾಗೂ ಮಾನಸಿಕ ಹಿಂಸೆಗಾಗಿ ರೂ.50,000 ಪರಿಹಾರ ಮತ್ತು ರೂ.10,000 ಪ್ರಕರಣದ ಖರ್ಚು ವೆಚ್ಚ ನೀಡುವಂತೆ ಆಯೋಗ ಪ್ಯೂವರ್ ಎನರ್ಜಿ ಪ್ರೈ.ಲಿ. ಗೆ ನಿರ್ದೇಶಿಸಿದೆ.

ನÁಕಿಖಾಲಿಯಾದಶುಶ್ರೂಷಾಧಿಕಾರಿಗಳಹುದ್ದೆಗಳಿಗೆ

ಗುತ್ತಿಗೆಆಧಾರದಮೇಲೆನೇಮಕಕ್ಕೆಸಂದರ್ಶ

ಧಾರವಾಡ ಜು.22: 2025-26 ನೇ ಸಾಲಿನ ಸಾಮಾನ್ಯ ವರ್ಗಾವಣೆಯಿಂದ ಖಾಲಿಯಾದ ಶುಶ್ರೂಷಾಧಿಕಾರಿಗಳ ಹುದ್ದೆಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ನೇರ ಸಂದರ್ಶನ ಹಾಗೂ ಯೋಜನೆಯ ನಿಯಮಾನುಸಾರ ಮೆರಿಟ್ ಹಾಗೂ ರೋಷ್ಟರ್ ಪ್ರಕಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಜುಲೈ 25, 2025 ರಂದು ಬೆಳಗ್ಗೆ 10:30 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ನೇರ ಸಂದರ್ಶನವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾ-ರಿಗಳ ಕಚೇರಿ, ಧಾರವಾಡ ಇವರ ಕಾರ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.
ಆಸಕ್ತಿ ಅರ್ಹ ಅಭ್ಯರ್ಥಿಗಳು ಸೂಚಿತ ಅವದಿಯಲ್ಲಿ ಹಾಜರಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಆರ್.ಸಿ.ಹೆಚ್. ಅಧಿಕಾರಿಗಳ ಕಚೇರಿ ಎನ್.ಹೆಚ್.ಎಮ್ ವಿಭಾಗದಲ್ಲಿ **ಸಂಪರ್ಕಿಸಬಹುದುಎಂದುಜಿಲ್ಲಾ ಆರೋಗ್ಯ ಮತ್ತು** ಕುಟುಂಬ ಕಲ್ಯಾಣ ಸೊಸೈಟಿಯು ಪ್ರಕಟಣೆ ತಿಳಿಸಿದೆ.

ಜಮಖಂಡಿ ಶುಗರ್ಸನಿಂದ

ರೈತರಿಗೆ ಸಕ್ಕರೆ ವಿತರಣೆ

ಜಮಖಂಡಿ: ತಾಲೂಕಿನ ಹಿರೇಪಡಸಲಗಿಯ ಜಮಖಂಡಿ ಶುಗರ್ಸ್ 2024-25ನೇ ಸಾಲಿಗೆ ಕಾರ್ಖಾನೆಗೆ ಕಬ್ಬು ಪೂರೈಸಿದ ರೈತ-ರಿಗೆ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ 500 ಗ್ರಾಂದಂತೆ ರಿಯಾಯತಿ ದರದಲ್ಲಿ ಪ್ರತಿ ಕೆ.ಜಿಗೆ ರೂ.22 ರಂತೆ ಸಕ್ಕರೆಯನ್ನು ಜುಲೈ 22 ರಿಂದ 31ರ ವರೆಗೆ ರಜಾ ದಿನಗಳನ್ನು ಹೊರತುಪಡಿಸಿ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4ಗಂಟೆವರೆಗೆ ವಿತರಿಸುಲಾಗುತ್ತಿದೆ ಕಬ್ಬುಪೂರೈಸಿದ ರೈತರು ಸಕ್ಕರೆ ತೆಗೆದುಕೊಳ್ಳಲು ಬರುತಕ್ಕ ಸಂದರ್ಭದಲ್ಲಿ ತಮ್ಮ ಗುರುತಿನ ಚೀಟಿ, ಕಬ್ಬಿನ ತೂಕದ ಪಾವತಿ ಸಹಿತ ಸಕ್ಕರೆ ಪಡೆದುಕೊಳ್ಳಲು ಬ್ಯಾಗ ತರಬೇಕು. ಎಪಿಎಂಸಿ ಮಾರ್ಕೆಟ್ ಯಾರ್ಡ ಸಂಗಮೇಶ ನ್ಯಾಮಗೌಡ ಬಿಲ್ಡಿಂಗ್ ಜಮಖಂಡಿ, ಹಿರೇಪಡಸಲಗಿಯ ಜಮಖಂಡಿ ಶುಗರ್ಸ್ ಕಾರ್ಖಾನೆ ಆವರಣ, ತವನಪ್ಪ ಯಲಿಗೌಡ ಗೋಡಾವನ ಶಿರಹಟ್ಟಿ, ಮಮದಾಪೂರ ಕಛೇರಿ, ಜೈನಾಪೂರ, ಬಲೇಶ್ವರ ಕಛೇರಿ, ಐಗಳಿ ಕಛೇರಿ, ಕೋಲ್ಹಾರ ಕಛೇರಿ, ಗಲಗಲಿ ಕಛೇರಿ, ತಿಕೋಟಾ ಕಛೇರಿ, ಮುಧೋಳ ಸರ್ಕಲ ಕಛೇರಿಗಳಲ್ಲಿ ನಿಗದಿತ ಅವಧಿಯಲ್ಲಿ ವಿತರಣೆ ನಡೆಯ**ಲಿದೆ ಎಂದು ಹಿರೇಪಡಸಲಗಿಯ ಜಮಖಂಡಿ ಶುಗರ್ಸ್ ಮಹಾ**ಪ್ರಬಂಧಕರು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

ದಿ.27ರಂದುಪ್ರತಿಭಾಪುರಸ್ಕಾರ,ಸಾಧಕರಿಗೆಸನ್ಮಾನ

ರಬಕವಿ-ಬನಹಟ್ಟಿ,ಜು23: ತಾಲೂಕಾ ಬಣಜಿಗ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಾ ಪುರಸ್ಕಾರ, ಸಾಧಕರಿಗೆ ಸನ್ಮಾನ ಹಾಗು ವಾರ್ಷಿಕೋತ್ಸವ ಕಾರ್ಯಕ್ರಮವು ಬರುವ ರವಿವಾರ ಬೆಳಿಗ್ಗೆ 10 ಗಂಟೆಗೆ ಬಿದ-ರಿ(ಬಸವೇಶ್ವರ) ಸಮುದಾಯ ಭವನದಲ್ಲಿ ಜರುಗಲಿದೆ ಎಂದು ಸಂಘದ ಅಧ್ಯಕ್ಷ ಈಶ್ವರ ಬಿದರಿ ತಿಳಿಸಿದ್ದಾರೆ.

ಸಾನಿಧ್ಯವನ್ನು ರಬಕವಿ ಬ್ರಹ್ಮಾನಂದ ಆಶ್ರಮದ ಗುರುಸಿದ್ಧೇಶ್ವರಶ್ರೀಗಳು ವಹಿಸಲಿದ್ದು, ಸಂಘದ ಗೌರವಾಧ್ಯಕ್ಷ ಮಲ್ಲಿಕಾರ್ಜುನ ನಾಶಿ ನೇತೃತ್ವದಲ್ಲಿ ಅತಿಥಿಗಳಾಗಿ ಬಣಜಿಗ ಸಮಾಜದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ರೂಡಗಿ, ಜಿಲ್ಲಾಧ್ಯಕ್ಷ ಶರಣಪ್ಪ ಗುಳೇದ, ತಹಶೀಲ್ದಾರ **ಗಿರೀಶ ಸ್ವಾದಿ ವಹಿಸಲಿದ್ದಾರೆ.**

**ಗಣೇಶ ಹಬ್ಬ : ಪರಿಸ**ರ ಸ್ನೇಹಿ ಗಣಪತಿ ವಿಗ್ರಹಗಳ ಪ್ರತಿಷ್ಠಾಪನೆ ಕುರಿತು

ನಾಳೆ ಮಹಾನಗರ ಪಾಲಿಕೆ

ಸಭಾಂಗಣದಲ್ಲಿ ಸಭೆ

ವಿಜಯಪುರ : ಜಿಲ್ಲೆಯಲ್ಲಿ ಆಗಸ್ಟ್ ಮಾಹೆಯಲ್ಲಿ ಆಚ-ರಿಸಲಾಗುವ ಗೌರಿ ಗಣೇಶ ಚತುರ್ಥಿ ಉತ್ಸವದಲ್ಲಿ ಸಾರ್ವಜನಿಕರು ತಮ್ಮ ಮನೆಗಳಲ್ಲಿ ಹಾಗೂ ಬಡಾವಣೆಗಳಲ್ಲಿ ಜೇಡಿ-ಇತರೆ ಮಣ್ಣಿನಿಂದ ತಯಾ-ರಿಸಲಾದ ಪರಿಸರ ಸ್ನೇಹಿ ಗಣಪತಿ ವಿಗ್ರಹಗಳನ್ನು ಪ್ರತಿಷ್ಠಾಪಿಸುವುದು ಹಾಗೂ ವಿಗ್ರಹಗಳನ್ನು ಪಾಲಿಕೆಯಿಂದ ನಿರ್ಮಿಸಲಾದ ಕೃತಕ ಹೊಂಡಗಳು, ಸಂಚಾರಿ ಗಣೇಶ ವಿಸರ್ಜನಾ ವಾಹನಗಳಲ್ಲಿ ವಿಸರ್ಜಿಸುವ ಕುರಿತು ದಿನಾಂಕ : 25-07-2025 ರಂದು ಬೆಳಿಗ್ಗೆ 11 ಗಂಟೆಗೆ ಮಹಾನಗರ ಪಾಲಿಕೆ ಕೇಂದ್ರ ಕಚೇರಿ ಸಭಾಭವನದಲ್ಲಿ ಮಹಾನಗರ ಪಾಲಿಕೆ ಆಯುಕ್ತರ ಅಧ್ಯಕ್ಷತೆಯಲ್ಲಿ ಸಭೆ ಆಯೋಜಿಸಲಾಗಿದೆ.

ಈ ಸಭೆಗೆ ಸಾರ್ವಜನಿಕರು, ಪ್ರತಿನಿಧಿಗಳು, ಗಣೇಶ ಮಹಾಮಂಡಳಿ ಮತ್ತು ಮಂಡಳಗಳ ಅಧ್ಯಕ್ಷರು, ಪದಾಧಿಕಾರಿಗಳು, ಗಣೇಶ ವಿಗ್ರಹ ಮಾರಾಟಗಾರರು ಹಾಗೂ ಸಂಘ-ಸಂಸ್ಥೆಗಳು ಭಾಗವಹಿಸುವಂತೆ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ರಾಷ್ಟ್ರೀಯ ಬಾಯಿ ಆರೋಗ್ಯ ಅಭಿಯಾನ



ರಾಯಬಾಗ: ಬಾಯಿ ಮತ್ತು ಹಲ್ಲಿನ ಆರೋಗ್ಯ ಕಾಪಾಡಿಕೊಂಡರೆ, ಮನುಷ್ಯನ ಆರೋಗ್ಯ ಚೆನ್ನಾಗಿರುತ್ತದೆ ಎಂದು ಶಾಸಕ ಡಿ. ಎಮ್.ಐಹೊಳೆಯವರು ಹೇಳಿದರು.


ಬುಧವಾರ ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ರಾಷ್ಟ್ರೀಯ ಬಾಯಿ ಆರೋಗ್ಯ ಅಭಿಯಾನ ಅಂಗವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಳಗಾವಿಯ ಕೆ.ಎಲ್.ಇ. ವಿಶ್ವನಾಥ ಕತ್ತಿ ಡೆಂಟಲ್ ಕಾಲೇಜಿ ಹಾಗೂ ಮರಾಠಾ ಮಂಡಳ ಕಾಲೇಜಿ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಬಾಯಿ ಮತ್ತು ದಂತ ತಪಾಸಣೆ ಹಾಗೂ ದಂತ ಪಂಕ್ತಿ ಉಚಿತ ಚಿಕಿತ್ಸೆ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ತಾಲೂಕಿನ ಜನರು ಈ ಶಿಬಿರದ ಪ್ರಯೋಜನ ಪಡೆದುಕೊಳ್ಳಬೇಕೆಂದರು.

ಚಿಕ್ಕೋಡಿ ಅಪರ ಜಿ.ಆ.ಮತ್ತು ಕು. ಕಲ್ಯಾಣಾಧಿಕಾರಿ ಡಾ.ಶರಣಪ್ಪ ಗಡೆದ ಪ್ರಾಸ್ತಾವಿಕ ಮಾತನಾಡಿ, ತಂಬಾಕು ಪದಾಥ-ರ್ ಸೇವನೆಯಿಂದ ಹಲ್ಲು ಹುಳುಕು ಆಗಿ ಹಲ್ಲು ಕಿಳಬೇಕಾಗುತ್ತದೆ ಜೊತೆಗೆ ಕ್ಯಾನ್ಸರ್ ರೋಗ ಬರುವ ಸಂಭವ ಇರುವುದ-ರಿಂದ ಸಾರ್ವಜನಿಕರು ಹಲ್ಲು ಮತ್ತು ಬಾಯಿಯನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು. ಉಚಿತ ದಂತ ಪಂಕ್ತಿ ಶಿಬಿರದಲ್ಲಿ 45 ವರ್ಷ ಮೇಲ್ಪಟ್ಟ 50 ಹಿರಿಯರಿಗೆ ದಂತ ಪಂಕ್ತಿ (ಹಲ್ಲಿನ ಸೆಟ್) ಹಾಕಲಾಗುತ್ತಿದೆ, ಮುಂದಿನ ದಿನಗಳಲ್ಲಿ ಇನ್ನುಳಿದವರಿಗೆ ದಂತ ಪಂಕ್ತಿ ಕೂಡ್ರಿಸಲಾಗುವುದು ಎಂದು ತಿಳಿಸಿದರು.

ಜಿ.ಕು.ಕ.ಅಧಿಕಾರಿ ಡಾ.ವಿಶ್ವನಾಥ ಭೋವಿ, ಜಿಲ್ಲಾ ಎನ್.ಒ.ಪಿ.ಎಚ್ ಅಧಿಕಾರಿ ಡಾ.ಚಂದ್ರ ನಾಯಿಕ, ತಾ.ಆ.ಅಧಿಕಾರಿ ಡಾ. ಎಸ್.ಎಮ್.ಪಾಟೀಲ, ಮುಖ್ಯ ವೈದ್ಯಾಧಿಕಾರಿ ಡಾ.ಆರ್.ಎಚ್.ರಂಗಣ್ಣವರ, ಚಿಕ್ಕೋಡಿ ಟಿ.ಎಚ್.ಒ ಡಾ.ಸುಕುಮಾರ ಬಾಗಾಯಿ, ದಂತ ವೈದ್ಯ ಡಾ.ಸಿದ್ದಾರ್ಥ ಮಗದುಮ್ಮ, ಡಾ.ಅಪ್ಪಾಸಾಹೇಬ ಹೆಗಡೆ, ಡಾ.ಶಾಂತಾರಾಮ ಬಾಗೇವಾಡಿ, ಡಾ.ಸದಾಶಿವ ಖನದಾಳೆ, ಡಾ.ಆರತಿ ಚಿನಕೋಟಿ, ಡಾ.ಎಸ್.ಎಮ್. ಕರಗಾಂವೆ, ಡಾ.ಸುರೇಶ ಬೆಳಗಾಂವಕರ, ಡಾ.ಆನಂದ ತೋರೊ, ಡಾ.ವಿಠಲ ಗೊಂಡೆ, ಡಾ.ಆನಂದ ಹೀರೆಮಠ, ಡಾ.ಪ್ರೀತಿ ಕುಸಗಲ, ಡಾ.ವಿವೇಕ ಹೊನ್ನಳ್ಳಿ, ಡಾ.ಡೇವಿಡ್, ಡಾ.ವಿಶ್ವಜೀತ, ಮುಖಂಡರಾದ ಸದಾಶಿವ ಘೋರ್ಪಡೆ, ಅಣ್ಣಾಸಾಹೇಬ ಖೆಮಲಾಪೂರೆ, ಸದಾನಂದ ಹಳಿಂಗಳಿ, ಶ್ರೀಶೈಲ ಶೀರೂರ ಹಾಗೂ ಕೆ.ಎಲ್.ಇ. ವಿಶ್ವನಾಥ ಕತ್ತಿ ಡೆಂಟಲ್ ಕಾಲೇಜ ಹಾಗೂ ಮರಾಠಾ ಮಂಡಳ ಕಾಲೇಜಿನ ದಂತ ವೈದ್ಯರು, ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತೆಯರು ಇದ್ದರು.

ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಶಂಕರಗೌಡ ಪಾಟೀಲ ಸ್ವಾಗತಿಸಿ, ನಿರೂಪಿಸಿದರು.

# ಕವಳೆವಾಡಿ ಶಾಲೆ ಹೆಚ್ಚುವರಿ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆ




ಬೆಳಗಾವಿ : ಕವಳೆವಾಡಿ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ 2 ಹೆಚ್ಚುವರಿ ಕೊಠಡಿಯ ನಿರ್ಮಾಣದ ಕಾಮಗಾರಿಗೆ ಯುವ ಮುಖಂಡ ಮೃಣಾಲ ಹೆಬ್ಬಾಳಕರ್, ಸ್ಥಳೀಯ ಜನ ಪ್ರತಿನಿಧಿಗಳೊಂದಿಗೆ ಸೇರಿ ಭೂಮಿ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ವಿಶಷ ಪ್ರಯತ್ನದ ಫಲವಾಗಿ ಸುಮಾರು 31.79 ಲಕ್ಷ ರೂ. ಮಂಜೂರಾಗಿದ್ದು, 2 ಕೊಠಡಿಗಳು ನಿರ್ಮಾಣಗೊಳ್ಳಲಿವೆ. ಮಕ್ಕಳ ಕಲಿಕೆಗೆ ಯಾವುದೇ ರೀತಿಯ ತೊಂದರೆಂಆಗಬಾರದೆನ್ನುವ ಕಾಳಜಿಯಿಂದ ಹೆಚ್ಚುವರಿ ಕೊಠಡಿ ಒದಗಿಸಲಾಗಿದೆ ಎಂದು ಮೃಣಾಲ ಹೆಬ್ಬಾಳಕರ್ ತಿಳಿಸಿದರು.

ಈ ವೇಳೆ ಯುವರಾಜ ಕದಂ, ಗ್ರಾಮ ಪಂಚಾಯತ್ ಅಧ್ಯಕ್ಷರಾದ ರೇಖಾ ನಾಯ್ಕ್, ಉಪಾಧ್ಯಕ್ಷರಾದ ನಾಮದೇವ್ ಮೊರೆ, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ರಾಜು ಬುರುಡ, ಉಪಾಧ್ಯಕ್ಷರಾದ ಮಲ್ಲಪ್ಪ ಮೊರೆ, ಶಶಿಕಾಂತ ಗಾವಡೆ, ಪ್ರವೀಣ ಮೊರೆ, ಜ್ಯೋತಿಬಾ ಮೊರೆ, ರಘುನಾಥ್ ಮೊರೆ, ಯಲ್ಲಪ್ಪ ಗಾವಡೆ, ಕೇದಾರಿ ಕಣಬರಕರ್, ಕಲ್ಲಪ್ಪ ಯಳ್ಳೂರಕರ್ ಉಪಸ್ಥಿತರಿದ್ದರು.

# ಪೊಲೀಸ್ ಆಯುಕ್ತ ಸಂವಾದ ಕಾರ್ಯಕ್ರಮ



ಬೆಳಗಾವಿ : ಮನೆಮನೆಗೆ ಪೊಲೀಸ್ ವ್ಯವಸ್ಥೆಯ ಹಿಂದಿನ ವ್ಯವಸ್ಥೆಯಾಗಿದೆ. ಪ್ರಸ್ತುತ ನಡೆಯುತ್ತಿರುವ ಅಪರಾಧಗಳ ನಿಯಂತ್ರಣಕ್ಕೆ ಇದು ಸಹಕಾರಿಯಾಗಲಿದೆ ಎಂದು ಬೆಳಗಾವಿ ನಗರ ಪೊಲೀಸ್ ಆಯುಕ್ತ ಭೂಷಣ ಬೋರಸೆ ತಿಳಿಸಿದರು.

ಬುಧವಾರ ನಗರದ ವಾರ್ತಾ ಭವನದಲ್ಲಿ ಬೆಳಗಾವಿ ಪತ್ರಕರ್ತರ ಸಂಘದ ವತಯಿಂದ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮನೆಮನೆಗೆ ಪೊಲೀಸ್ ವ್ಯವಸ್ಥೆಯು ಪೊಲೀಸ್ ಇಲಾಖೆಯ ಕುರಿತು ಜನರ ಮನಸ್ಸಿನಲ್ಲಿರುವ ಭಯವನ್ನು ಹೋಗಲಾಡಿಸಿ, ಭರವಸೆ ಹಾಗೂ ಉತ್ತಮ ಭಾಂದವ್ಯಕ್ಕೆ ಕಾರಣವಾಗುತ್ತದೆ. ಮಹಿಳೆಯರು, ಮಕ್ಕಳು ಹಾಗೂ ಮನೆಯಲ್ಲಿರುವ ಎಲ್ಲರಿಗೂ ಕಾನೂನಿನ ಅರಿವು ಮೂಡಲಿದೆ. ಇದು ಅಪರಾಧಗಳ ನಿಯಂತ್ರಣಕ್ಕೆ ಸಹಕಾ-ರಿಯಾಗಲಿದೆ ಎಂದರು.

*ನನ್ನ ಬೆಳಗಾವಿ ನನ್ನ ಸಲಹೆ*

ಬೆಳಗಾವಿಗರ ಸಮಸ್ಯೆಯನ್ನು ವ್ಯಕ್ತಪಡಿಸಲು ನಗರ ಪೊಲೀಸ್ ಆಯುಕ್ತಾಲಯದ ವತಿಯಿಂದ ನನ್ನ ಬೆಳಗಾವಿ ನನ್ನ ಸಲಹೆ ಎಂಬ ವೆಬ್ಸೈಟ್ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರು ತಮ್ಮ ಸುತ್ತಮುತ್ತಲು ನಡೆಯುವ ಕಾನೂನುಬಾಹಿರ ಚಟುವಟಿಕೆಗಳು, ಅಪರಾಧ ಕೃತ್ಯಗಳು ಹಾಗೂ ಸಮಸ್ಯೆಗಳ ಕುರಿತು ಇಲ್ಲಿ ಹಂಚಿಕೊಳ್ಳಬಹುದು. ಇದರಿಂದ ಸ್ವಸ್ಥ ಸಮಾಜ ನಿರ್ಮಾಣ ಸಾಧ್ಯ. ಸಾರ್ವಜನಿಕರು ಯಾವುದೇ ಭಯವಿಲ್ಲದೇ ತಮ್ಮ ಸಲಹೆಗಳನ್ನು ವೆಬ್ಸೈಟ್ ನಲ್ಲಿ ತಿಳಿಸಬಹುದು ಎಂದು ನಗರ ಪೊಲೀಸ್ ಆಯುಕ್ತ ಭೂಷಣ ಬೊರಸೆ ಮಾಹಿತಿ ನೀಡಿದರು.

ದಂಡ ಭರಿಸಲು ಬೆಳಗಾವಿ ಒನ್ ಬಳಸಿ : ವೇಗವಾಗಿ ಬೆಳೆಯುತ್ತಿರುವ ಬೆಳಗಾವಿ ನಗರದಲ್ಲಿ ಟ್ರಾಫಿಕ್ ನಿಯಮಾವಳಿಗಳ ಉಲ್ಲಂಘನೆಯ ಪ್ರಕರಣಗಳು ಹೆಚ್ಚಿವೆ. ಪ್ರಸ್ತುತ ವಾಹನಗಳನ್ನು ತಡೆದು ತಪಾಸಣೆ ನಡೆಸದಂತೆ ಸಿಬ್ಬಂದಿಗೆ ತಿಳಿಸಿದ್ದೇವೆ. ಅಲ್ಲದೇ ಆನ್ಲೈನ್ ಮೂಲಕವೇ ಸಂಚಾರಿ ನಿಯಮಾವಳಿಗಳ ಉಲ್ಲಂಘನೆಗೆ ದಂಡ ವಿಧಿಸಲಾಗುತ್ತಿದೆ. ಈ ದಂಡವನ್ನು ಬೆಳಗಾವಿ ಒನ್ ನಲ್ಲಿಯೇ ಕಟ್ಟುವ ಯೋಜನೆಗೆ ಸಿದ್ಧತೆ ನಡೆಸಿದ್ದೇವೆ. ಟ್ರಕ್ ಅಸೋಸಿಯೇಷನ್ ಪದಾಧಿಕಾರಿಗಳು, ಕೆಎಸ್ಆರ್ಟಿಸಿ ಸಿಬ್ಬಂದಿಯೊಂದಿಗೆ ಚರ್ಚಿಸಲಾಗಿದ್ದು, ಟ್ರಾಫಿಕ್ ಸಮಸ್ಯೆಯುಂಟು ಮಾಡುವ ಸ್ಥಳಗಳನ್ನು ಗುರುತಿಸಲಾಗಿದ್ದು, ಸಮಸ್ಯೆ ಪರಿಹಾರಕ್ಕೆ ಸಂಬಂಧಿಸಿದ ಇಲಾಖೆಗಳಿಗೆ ಪತ್ರ ಬರೆಯಲಾಗಿದೆ ಎಂದು ಭೂಷಣ ಬೂರಸೆ ತಿಳಿಸಿದರು.

ಯುವತಿಯರು, ವಿದ್ಯಾರ್ಥಿನಿಯರ ಹಾಗೂ ಮಹಿಳೆಯರ ಸುರಕ್ಷತೆಗೆ ಪೊಲೀಸ್ ಇಲಾಖೆಯ ಚನ್ನಮ್ಮ ಪಡೆಯನ್ನು ಮತ್ತಷ್ಟು ಸಕ್ರಿಯಗೊಳ್ಳಲಿದೆ.

# ಬಾಬಾನಗರ ಮಂದಿರದ ನೂತನ ಪದಾಧಿಕಾರಿಗಳ ಆಯ್ಕೆ



ಮೋಳೆ :-ವಿಜಯಪುರ ಜಿಲ್ಲೆಯ ಬಾಬಾನಗರದಲ್ಲಿ ಪರಮ ಪೂಜ್ಯ ಜಗದ್ಗುರು ಸ್ವಸ್ತಿಶ್ರೀ ಜಿನಸೇನ ಭಟ್ಟಾರಕ ಪಟ್ಟಾಚಾರ್ಯ ಮಹಾಸ್ವಾಮೀಜಿ ಅವರ ಅಧ್ಯಕ್ಷತೆಯಲ್ಲಿ ಶ್ರೀ ಪಾರ್ಶ್ವನಾಥ ಸ್ವಾಮಿ ಮಹಾರಾಜ ದರಬಾರ ದಿಗಂಬರ ಜೈನ ಮಂದಿರ ಅತಿಶಯ ಕ್ಷೇತ್ರ ಬಾಬಾನಗರ ಮಂದಿರದ ನೂತನ ಪದಾಧಿಕಾರಿಗಳನ್ನು ಸೋಮವಾರ ಆಯ್ಕೆ ನಡೆಯಿತು.

ಉಪಾಧ್ಯಕ್ಷರಾಗಿ ವಿಜಯಪುರ ಜಿಲ್ಲೆಯ ಕೆಎಂಎಫ್‌ನ ಮಾಜಿ ಅಧ್ಯಕ್ಷರು, ಆಲಗೂರ ಗ್ರಾಮ ಪಿ.ಟಿ.ಪಾಟೀಲ, ಕಾರ್ಯದರ್ಶಿಯಾಗಿ ಮಹಿಷವಾಡಗಿ ಗ್ರಾಮದ ನಿವೃತ್ತ ಇಂಜಿನೀಯರ್ ಅರುಣ ಯಲಗುದ್ರಿ, ಖಜಾಂಚಿಯಾಗಿ ಬಾಬಾನಗರದ ಮಹಾವೀರ ಕುಸನಾಳೆ ಆಯ್ಕೆಯಾದರು. ಈ ಮಂದಿರದ ಅಧ್ಯಕ್ಷರು ಖಾಯಂ ಆಗಿ ಶ್ರೀಕ್ಷೇತ್ರ ನಾಂದಣಿ ಜೈನ ಮಠದ ಜಗದ್ಗುರು ಸ್ವಸ್ತಿಶ್ರೀ ಜಿನಸೇನ ಭಟ್ಟಾರಕ ಸ್ವಾಮೀಜಿ ಇರುತ್ತಾರೆ. ಸಭೆಯಲ್ಲಿ ಶ್ರೀಗಳು ಎಲ್ಲ ಆಡಳಿತ ಮಂಡಳಿ ಸದಸ್ಯರು ಒಂದಾಗಿ, ಒಟ್ಟಾಗಿ ಈ ಪುರಾತನ ಶ್ರೀ ಪಾರ್ಶ್ವನಾಥ ಮಂದಿರದ ಕೆಲಸವನ್ನು ಮಾಡಬೇಕು ಎಂದು ಆಶೀರ್ವದಿಸಿ, ಸರ್ಕಾರದ ಸೌಲತ್ತುಗಳನ್ನು ಪಡೆದು ಮಂದಿರದ ಮೂಲಭೂತ ಅವಶ್ಯಕತೆಗಳನ್ನು ಪೂರೈಸಲು ಸೂಚಿಸಿದರು.

ಸಭೆಯಲ್ಲಿ ಮಂದಿರದ ಜೀರ್ಣೋದ್ಧಾರದ ಬಗ್ಗೆ ಚರ್ಚಿಸಲಾಯಿತು. ಸಭೆಯಲ್ಲಿ ಆಡಳಿತ ಮಂಡಳಿ ಸದಸ್ಯರಾದ ಬಾಬಾನಗರದ ಹಿರಿಯರಾದ ಪಾರೀಸ ಆಯತವಾಡ, ಆದಿನಾಥ ಬಸ್ತಿ, ಇಂಜಿನೀಯರ್ ಸಂ-ಜಯ ಪಾಟೀಲ, ಕೆಜೆಎ ಆಡಳಿತ ಮಂಡಳಿ ಸದಸ್ಯ ಸುಕುಮಾರ ಪಾಟೀಲ, ಕೆಜೆಎ ಮಾಜಿ ಉಪಾಧ್ಯಕ್ಷ ಎ.ಸಿ.ಪಾಟೀಲ, ವಿಜಯಪುರದ ಭರತೇಶ ಯಲಗುದ್ರಿ, ನಂದಾಗಾಂವದ ಭರಾಮು ಪಾಟೀಲ, ಗುಂಡವಾಡದ ಮಲಗೌಡ ಪಾಟೀಲ, ಝುಂಜರವಾಡದ ಜಿನಗೌಡ ಸವದತ್ತಿ ಹಾಗೂ ಮೋಳವಾಡದ ಸತೀಶ ಗುಂಡವಾಡೆ ಉಪಸ್ಥಿತರಿದ್ದರು. ಣಮೋಕಾರ ಮಹಾಮಂತ್ರದೊಂದಿಗೆ ಸಭೆ ಮುಕ್ತಾಯವಾಯಿತು.

ಪಪೂ ಜಗದ್ಗುರು ಸ್ವಸ್ತಿಶ್ರೀ ಜಿನಸೇನ ಭಟ್ಟಾರಕ ಸ್ವಾಮೀಜಿಯವರು ನೂತನ ಪದಾಧಿಕಾ-ರಿಗಳನ್ನು ಸನ್ಮಾನಿಸಿ ಆಶೀರ್ವದಿಸಿದರು.

# ಕೆರೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ



ರಾಯಬಾಗ್ತ ತಾಲೂಕಿನ ಜೋಡಟ್ಟಿ ಗ್ರಾಮದ ಕೆರೆ ಅಭಿವೃದ್ಧಿ ಪಡಿಸುವ 60 ಲಕ್ಷ ರೂ. ವೆಚ್ಚದ ಕಾಮಗಾರಿಗೆ ಶಾಸಕ ಡಿ.ಎಮ್. ಐಹೊಳೆಯವರು ಮಂಗಳವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿ ಜೋಡಟ್ಟಿ ಗ್ರಾಮದ ಜನರ ಬಹುದಿನಗಳ ಕನಸು ಸಣ್ಣ ನೀರಾವರಿ ನಿಗಮದಿಂದ ಈ ಕೆರೆಯನ್ನು ಅಭಿವೃದ್ಧಿಪಡಿಸಿ ಮಳೆಗಾಲದಲ್ಲಿ ಹಿ ಕೆರೆಯಿಂದ ರೈತರಿಗೆ ಬಹಳ ಅನುಕೂಲವಾಗುತ್ತದೆ ಆದ್ದರಿಂದ ಗುತ್ತಿಗೆದಾರರು ಒಳ್ಳೆಯ ಗುಣಮಟ್ಟದ ಕಾಮಗಾರಿಯನ್ನು ಮಾಡಿ ಸದಾ ಜನರ ಮನಸ್ಸಿನಲ್ಲಿ ನಿಮ್ಮ ಹೆಸರು ಇರುವ ಹಾಗೆ ಮಾಡಿರಿ ಎಂದು ಹೇಳಿದರು. ಈ ಸಂದರ್ಭದಲ್ಲಿ ಸದಾಶಿವ ಘೋರ್ಪಡೆ, ಅಪ್ಪು ಬಾನೆ, ಬಸಗೌಡಾ ಪಾಟೀಲ, ಸುರೇಶ ಚೌಗಲಾ, ಶಂಕರ ಕೋಳಿ, ಅಶೋಕ ಬಸ್ತವಾಡೆ, ಅಶೋಕ ಪಾಟೀಲ, ಈಶ್ವರ ಬಸ್ತವಾಡೆ, ಬಸಪ್ಪ ಪಾಟೀಲ, ರೇವಣು ದುಪ್ಪದಾಳೆ, ಶಂಕರ್ ಟಿರಕಿ ಮಹಾದೇವ್ಹಾ ಜಾಲಿಕಟ್ಟಿ ಮಲ್ಲಿಕಾರ್ಜುನ ಬಸ್ತವಾಡೆ, ರವಿ ಮಾಂಗ, ಸುರೇಶ ಪಾಟೀಲ ಸೇರಿ ಅನೇಕರು ಇದ್ದರು.

# ಸಾಮಾಜಿಕವಾಗಿ ಸ್ಪಂದಿಸಲು ರೋಟರಿ ಸಂಸ್ಥೆ ಉತ್ತಮ ವೇದಿಕೆಯಾಗಿದೆ : ಭಂಡಾರೆ

ಬೈಲಹೊಂಗಲ– ಸಾಮಾಜಿಕವಾಗಿ ಜನರ ಸೇವೆ ಮಾಡಲು ರೋಟರಿ ಸಂಸ್ಥೆಯು ಉತ್ತಮ ವೇದಿಕೆಯಾಗಿದ್ದು ಸಮಸ್ಯಗಳಿಗೆ ಸ್ಪಂದಿಸಿ ಪರಿಹಾರ ನೀಡಲು ಪದಾಧಿಕಾರಿಗಳು ಸದಾ ಪ್ರಯತ್ನಿಸಬೇಕೆಂದು ರೋಟರಿ ಗವರ್ನರ್ ಅರುಣ ಭಂಡಾರೆ ಹೇಳಿದರು.

ಅವರು ಪಟ್ಟಣದ ಹೊಸೂರ ರಸ್ತೆಯಲ್ಲಿನ ರೋಟರಿ ಭವನದಲ್ಲಿ ಸೋಮವಾರ ಜರುಗಿದ ರೋಟರಿ ಕ್ಲಬ್ ಹಾಗೂ ಇನ್ನರವಿಲ್ ಕ್ಲಬ್‌ನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ಉದ್ಘಾಟಿಸಿ ಅವರು ಮಾತನಾಡಿದರು. ಸ್ವಾಸ್ಥ್ಯ ಸಮಾಜ ನಿರ್ಮಾಣದ ಜೊತೆಗೆ ಅಸಹಾಯಕ ಜನರಿಗೆ ರೋಟರಿ ಸಂಸ್ಥೆಯು ಸದಾ ಬೆನ್ನಲಬಾಗಿ ನಿಂತಿದೆ. ದೇಶದಲ್ಲಷ್ಟೇ ಅಲ್ಲದೇ ವಿದೇಶದಲ್ಲಿಯೂ ಸಹ ತನ್ನ ಸೇವಾ ಕಾರ್ಯಗಳಿಂದ ಜನಪ್ರೀಯಗೊಂಡಿದೆ ಎಂದರು.

ಇನ್ನರವಿಲ್ ಕ್ಲಬ್‌ನ ಪದಗ್ರಹಣದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಿಲ್ಲಾ ರೋಟರಿ ಗವರ್ನರ್ ಶಾಲಿನಿ ಚೌಗಲೆ ಮಾತನಾಡಿ, ರೋಟರಿ, ಇನ್ನರವಿಲ್ ಸಂಸ್ಥೆಗಳು ಸಮಾಜದಲ್ಲಿ ವಿಧಾಯಕ ಕಾರ್ಯಗಳನ್ನು ಮಾಡುತ್ತಿದ್ದು ಜನತೆಯ ಸಂಕಷ್ಟಗಳಿಗೆ ಸದಾ ಸ್ಪಂದಿಸುತ್ತಿವೆ. ಇನ್ನರವಿಲ್ ಕ್ಲಬ್ ಸಂಸ್ಥೆಯು ಮಹಿಳೆಯರು ಸಮಾಜದಲ್ಲಿ ಮೂಂಚೂಣಿಯಲ್ಲಿ ಬರಲು




ಸಹಕಾರಿಯಾಗಿದೆ. ಆದರೆ ಯಾವದೇ ಹುದ್ದೆ, ಕಾರ್ಯವಾಗಲೀ ಅದನ್ನು ಪ್ರಾಮಾಣಿಕವಾಗಿ ಪ್ರೀತಿಸಿ ಗೌರವಿಸಿದಾಗ ಬದುಕಿನಲ್ಲಿ ಯಶಸ್ಸು ಪಡೆಯಲು ಸಾಧ್ಯವೆಂದರು.

ರೋಟರಿ ಕ್ಲಬ್ ಹಾಗೂ ಇನ್ನರವಿಲ್ ಸಂಸ್ಥೆಗಳ ನೂತನ ಅಧ್ಯಕ್ಷರಾದ ಡಾ.ಮಹಾಂತೇಶ ಕಳ್ಳಿಬಡ್ಡಿ, ವಿಜಯಾ ಕಳ್ಳಿಬಡ್ಡಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಮುಂದಿನ ವಿಧಾಯಕ ಯೋಜನೆಗಳ ಕುರಿತು ವಿವರಣೆ ನೀಡಿದರು. ಇದೇ ಸಂದರ್ಭದಲ್ಲಿ ನೂತನ ಪದಾಧಿಕಾರಿಗಳಿಗೆ ರೋಟರಿಯ ಮಾಜಿ ಅಧ್ಯಕ್ಷ ಮಹಾಂತೇಶ ಜಿಗಜಿನ್ನಿ ಹಾಗೂ ಇನ್ನರವಿಲ್‌ನ ಮಾಜಿ ಅಧ್ಯಕ್ಷ್ಯೆ ಸುಮಂಗಲಾ ಜಿಗಜಿನ್ನಿ ಅವರು ನೂತನ ಅಧ್ಯಕ್ಷರಿಗೆ ಅಧಿಕಾರ ಹಸ್ತಾಂತರಿಸಿದರು.

ರೋಟರಿ ಉಪಾಧ್ಯಕ್ಷ ಅನಿಲ ಚಡಚ್ಯಾಳ, ಕಾರ್ಯದರ್ಶಿ ಆನಂದ ವಾಲಿ, ಜಂಟಿ ಕಾರ್ಯದರ್ಶಿ ಅಯ್ಯನಗೌಡಾ ಪಾಟೀಲ, ಮಹೇಶ ಬೆಲ್ಲದ, ವಿಜಯಕುಮಾರ ಪಾಟೀಲ, ಅರ್ಜುನ ಕಲಕುಟಕರ, ಗೌತಮ ಇಂಚಲ, ಡಾ.ಸಾಗರ ಕುಲಕರ್ಣಿ, ಶಿವಶಂಕರ ತಟವಾಟಿ, ಯುವ ಮುಖಂಡ ಬಸವರಾಜ ಕೌಜಲಗಿ, ಡಾ.ಚಂದ್ರಶೇಖರ ಗಣಾಚಾರಿ, ಡಾ.ಮಹಾಂತೇಶ ಗದಗ, ಡಾ.ನಾಗರಾಜ ಹಲಸಗಿ, ಪ್ರಮೋದಕುಮಾರ ವಕ್ಕುಂದಮಠ, ನಾಗೇಶ ಮರಕುಂಬಿ, ಇನ್ನರವಿಲ್‌ನ ಕಾರ್ಯದರ್ಶಿ ಡಾ.ಗೀತಾ ಪುರಾಣಿಕಮಠ, ಖಜಾಂಚಿ ಸವಿತಾ ಉಡುಪಿ, ವೀಶಾಲಾಕ್ಷಿ ತಟವಾಟಿ, ಶೋಭಾ ಕುಲಕರ್ಣಿ, ಉಶಾ ಬೆಲ್ಲದ, ದೀಪಾ ಹಲಸಗಿ, ಭಾರತಿ ತಟವಾಟಿ, ನೇಹಾ ಘಾನೇಕರ, ಪ್ರೀತಿ ಪಾಟೀಲ ಮುಂತಾದವರು ಉಪಸ್ಥಿತರಿದ್ದರು. ರೋಟರಿ ಹಾಗೂ ಇನ್ನರವಿಲ್‌ನ್ ಮಾಜಿ ಹಾಗೂ ನೂತನ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಡಾ.ಬಸವರಾಜ ಮಹಾಂತಶೆಟ್ಟಿ ಸ್ವಾಗತಿಸಿದರು. ಎಲ್‌ಐಸಿ ಅಧಿಕಾರಿ ಸಂಜಯ ಮಹಾಲೆ ನಿರೂಪಿಸಿದರು. ರೋಟರಿಯನ್ ಸುಜಾತಾ ಮಹಾಲೆ ವಂದಿಸಿದರು.

ಪೋಟೋ ಶೀರ್ಷಿಕೆ– ಬೈಲಹೊಂಗಲದ ರೋಟರಿ ಕ್ಲಬ್‌ದಲ್ಲಿ ಜರುಗಿದ ರೋಟರಿ ಹಾಗೂ ಇನ್ನರವಿಲ್ ಕ್ಲಬ್‌ನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದವನ್ನು ಗಣ್ಯರು ಉದ್ಘಾಟಿಸಿದರು.

ರೋಟರಿ ಕ್ಲಬ್ ಸಂಸ್ಥೆಯ ನಿಯಮ, ಆದೇಶದ ಪ್ರಕಾರ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸಲು ನನ್ನ ಅವಧಿಯಲ್ಲಿ ಬದ್ಧನಾಗಿದ್ದೇನೆ. ಬರುವ ದಿನಗಳಲ್ಲಿ ಆರೋಗ್ಯ ಮತ್ತು ಶಿಕ್ಷಣ ಸೇರಿದಂತೆ ಮಹಿಳಾ ಸಭಲೀಕರಣ, ಕೌಶಲ್ಯ ಅಭಿವೃದ್ದಿಗೆ ಸಂಬಂಧಪಟ್ಟ ಯೋಜನೆಗಳನ್ನು ಅನುಷ್ಠಾನಗೊಳಿಸಿ ಸಮಾಜಕ್ಕೆ ಸಹಕಾರಿಯಾಗಲು ಪ್ರಯತ್ನಿಸುತ್ತೇವೆ. ವಿವಿಧ ಉಪಕಾರಿ ಕೆಲಸಗಳಿಂದ ತಾಲೂಕಿನಲ್ಲಿ ಸಂಸ್ಥೆಯನ್ನು ಮಾದರಿಯಾಗಿಸುವೇವು.

**ಡಾ.ಮಹಾಂತೇಶ ಕಳ್ಳಿಬಡ್ಡಿ**
**ನೂತನ ಅಧ್ಯಕ್ಷ ರೋಟರಿ ಕ್ಲಬ್, ಬೈಲಹೊಂಗಲ**

# ಆರೋಗ್ಯ, ಕ್ಷೇಮ ಕೇಂದ್ರ ಹಾಗೂ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಿದ ಸಚಿವ ಎಚ್ ಕೆ ಪಾಟೀಲ



ಗದಗ: ಸೊರಟೂರಲ್ಲಿ ಆರೋಗ್ಯ, ಕ್ಷೇಮ ಕೇಂದ್ರ ಕಟ್ಟಡ ನಿರ್ಮಾಣ ಹಾಗೂ ವೆಂಕಟಾಪುರ ರಸ್ತೆ ನಿರ್ಮಾಣಕ್ಕೆ ಇನಾಂ ವೆಂಕಟಾಪುರದಲ್ಲಿ ಮಂಗಳವಾರ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಚಾಲನೆ ನೀಡಿದರು.

ಗದಗ ತಾಲೂಕಿನ ಯಲಿಶಿರುಂದ– ವೆಂಕಟಾಪೂರ– ಸೊರಟೂರ ಜಿಲ್ಲಾ ಮುಖ್ಯ ರಸ್ತೆ ಕಿ.ಮೀ. 0.00 ರಿಂದ 0.750, ಕಿ.ಮೀ. 3.50 ರಿಂದ 5.68 ರವರೆಗೆ ಅಭಿವೃದ್ಧಿ ಹಾಗೂ ಕಿ.ಮೀ. 0.850 ರಿಂದ 3.30 ರವರೆಗೆ ಮರುಡಾಂಬರೀಕರಣ ಕಾಮಗಾರಿಗೆ ಸಚಿವ ಎಚ್ ಕೆ ಪಾಟೀಲ ಅವರು ಭೂಮಿಪೂಜೆ ನೆರವೇರಿಸಿದರು. ಕಾಮಗಾರಿಗೆ 3 ಕೋಟಿ ಅನುದಾನ ಒದಗಿಸಲಾಗಿದೆ.

ಅದರಂತೆ ಗದಗ ತಾಲೂಕಿನ ಸೊರಟೂರ– ಮುಳಗುಂದ ವ್ಹಾಯಾ ನೀಲಗುಂದ ಜಿಲ್ಲಾ ಮುಖ್ಯ ರಸ್ತೆ ಕಿ.ಮೀ. 1.50 ರಿಂದ 5.50 ರವರೆಗೆ ಅಭಿವೃದ್ಧಿ ಕಾಮಗಾರಿಗೆ ಅಂದಾಜು 1.50 ಕೋಟಿ ಅನುದಾನ ನೀಡುವ ಮೂಲಕ ಕಾಮಗಾರಿಗೆ ಚಾಲನೆ ನೀಡಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸೊರಟೂರಿನಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರ ಕಟ್ಟಡ ನಿರ್ಮಾಣ ಕಾಮಗಾರಿಗೆ 61 ಲಕ್ಷಗಳು ಒದಗಿಸಿದೆ. ಈ ಎಲ್ಲ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಲಿ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಸಮಿತಿ ತಾಲ್ಲೂಕಿನ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಸೇರಿದಂತೆ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಇದ್ದರು.

## ಸಾಮಾಜಿಕ ಭದ್ರತಾ ವ್ಯಾಪ್ತಿ ವಿಸ್ತರಣೆ ಯೋಜನೆ

ಹಾವೇರಿ ನೌಕರರ ರಾಜ್ಯ ವಿಮಾ ನಿಗಮ(ಇಎಸ್‌ಐಸಿ) ಅನುಮೋದಿಸಿದ ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ(–ಎಸ್‌ಪಿಆರ್‌ಇಇ)–2025 ಇಎಸ್‌ಐ ಕಾಯ್ದೆಯಲ್ಲಿ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸುವ ಗುರಿ ಹೊಂದಿದೆ.

ಈ ಯೋಜನೆ ಜುಲೈ 1 ರಿಂದ 31 ಡಿಸೆಂಬರ್ 2025ರವರೆಗೆ ಸಕ್ರಿಯಾಗಿರುತ್ತದೆ ಮತ್ತು ನೋಂದಾಯಿಸದ ಉದ್ಯೋಗದಾತರು ಮತ್ತು ಉದ್ಯೋಗಿಗಳು– ಗುತ್ತಿಗೆ ಮತ್ತು ತಾತ್ಕಾಲಿಕ ಕೆಲಸಗಾರರು ಸೇರಿದಂತೆ ತಪಾಸಣೆ ಅಥವಾ ಹಿಂದಿನ ಬಾಕಿಗಳ ಬೇಡಿಕೆಗಳನ್ನು ಎದುರಿಸದೇ ನೋಂದಾಯಿಸಿಕೊಳ್ಳಲು ಒಂದು ಬಾರಿ ಅವಕಾಶ ಒದಗಿಸಲಾಗಿದೆ.

ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಖುಖಅ ಪೋರ್ಟಲ್, ಶ್ರಮ ಸುವಿಧಾ ಮತ್ತು ಒಅಂ ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು. ಉದ್ಯೋಗದಾತರು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಮಾನ್ಯವೆಂದು ಪರಿಗಣಿಸಲಾಗುತ್ತದೆ. ನೋಂದಣಿಗೆ ಮುಂಚಿನ ಅವಧಿಗಳಿಗೆ ಯಾವುದೇ ಕೊಡುಗೆ ಅಥವಾ ಪ್ರಯೋಜನ ಅನ್ವಯಿಸುವುದಿಲ್ಲ. ನೋಂದಣಿ ಪೂರ್ವ ಅವಧಿಗೆ ಯಾವುದೇ ತಪಾಸಣೆ ಅಥವಾ ಹಿಂದಿನ ದಾಖಲೆಗಳಿಗೆ ಬೇಡಿಕೆಯನ್ನು ಮಾಡಲಾಗುವುದಿಲ್ಲ.

ಹಿಂದಿನ ದಂಡಗಳ ಭಯವನ್ನು ತೆಗೆದುಹಾಕುವ ಮೂಲಕ ಮತ್ತು ನೋಂದಣಿ ಪ್ರಕ್ರಿಯೆಯನ್ನು ಸರಾಗಗೊಳಿಸುವ ಮೂಲಕ ಈ ಯೋಜನೆಯು ಸ್ವಯಂಪ್ರೇರಿತ ಅನುಸರಣೆಯನ್ನು ಪ್ರೋತ್ಸಾಹಿಸುತ್ತದೆ. ಖಕಖಇಇ ಗಿಂತ ಮೊದಲು, ನಿರ್ದಿಷ್ಟ ಸಮಯದ ಚೌಕಟ್ಟಿನೊಳಗೆ ನೋಂದಣಿ ಮಾಡದಿರುವುದು ಕಾನೂನು ಕ್ರಮ ಮತ್ತು ಹಿಂದಿನ ಬಾಕಿಗಳ ಬೇಡಿಕೆಗೆ ಕಾರಣವಾಗಬಹುದು. ಖಕಖಇಇ 2025 ಈ ಅಡೆತಡೆಗಳನ್ನು ಪರಿಹರಿಸುತ್ತದೆ. ಬಿಟ್ಟುಹೋದ ಸಂಸ್ಥೆಗಳು ಮತ್ತು ಕಾರ್ಮಿಕರನ್ನು ಇಖಖ ವ್ಯಾಪ್ತಿಗೆ ತರುವ ಮತ್ತು ವಿಶಾಲವಾದ ಸಾಮಾಜಿಕ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ.

**SPREE** 2025 ಅನ್ನು ಪ್ರಾರಂಭಿಸುವುದು ನೌಕರರ ರಾಜ್ಯ ವಿಮಾ ನಿಗಮವು ಎಲ್ಲರನ್ನೂ ಒಳಗೊಳ್ಳುವ ಮತ್ತು ಪ್ರವೇಶಿಸಬಹುದಾದ ಸಾಮಾಜಿಕ ಭದ್ರತೆಯ ಕಡೆಗೆ ಇಟ್ಟಿರುವ ಪ್ರಗತಿಪರ ಹೆಜ್ಜೆಯಾಗಿದೆ. ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸುವ ಮೂಲಕ ಮತ್ತು ಹಿಂದಿನ ಹೊಣೆಗಾರಿಕೆಗಳಿಂದ ವಿನಾಯಿತಿ ನೀಡುವ ಮೂಲಕ, ಈ ಯೋಜನೆಯು ಉದ್ಯೋಗದಾತರು ತಮ್ಮ ಕಾರ್ಯಪಡೆಯನ್ನು ಕ್ರಮಬದ್ಧಗೊಳಿಸಲು ಪ್ರೋತ್ಸಾಹಿಸುವುದಲ್ಲದೆ, ಹೆಚ್ಚಿನ ಕಾರ್ಮಿಕರು, ವಿಶೇಷವಾಗಿ ಗುತ್ತಿಗೆ ವಲಯಗಳಲ್ಲಿರುವವರು, ಇಖಖ ಕಾಯ್ದೆಯಡಿಯಲ್ಲಿ ಅಗತ್ಯ ಆರೋಗ್ಯ ಮತ್ತು ಸಾಮಾಜಿಕ ಪ್ರಯೋಜನಗಳನ್ನು ಪಡೆಯುವುದನ್ನು ಖಚಿತಪಡಿಸುತ್ತದೆ.

ಭಾರತದಲ್ಲಿ ಕಲ್ಯಾಣಿ ಕೇಂದ್ರಿತ ಕಾರ್ಮಿಕ ಪರಿಸರ ವ್ಯವಸ್ಥೆಯ ದೃಷ್ಟಿಕೋನಕ್ಕೆ ಅನುಗುಣವಾಗಿ, ತನ್ನ ವ್ಯಾಪ್ತಿಯನ್ನು ಬಲಪಡಿಸಲು ಮತ್ತು ಸಾರ್ವತ್ರಿಕ ಸಾಮಾಜಿಕ ರಕ್ಷಣೆಯ ಆದೇಶವನ್ನು ಪೂರೈಸಲು **ESIC** ಬದ್ಧವಾಗಿದೆ ಎಂದು ಕಾರ್ಮಿಕರ ರಾಜ್ಯ ವಿಮಾ ನಿಗಮ ಪ್ರಕಟಣೆಯಲ್ಲಿ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಮೊ.8310355990 ಸಂಪರ್ಕಿಸಲು ಕೋರಲಾಗಿದೆ.

# ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ : ಎಣ್ಣೆಕಾಳು ಯೋಜನೆ

ಬಾಗಲಕೋಟೆ, : ದೇಶದಲ್ಲಿ ಎಣ್ಣೆಕಾಳು ಬೆಳೆಗಳ ಕ್ಷೇತ್ರವನ್ನು ಹೆಚ್ಚಿಸುವ ಸಲುವಾಗಿ ಕೇಂದ್ರ ಸರ್ಕಾರವು ಖಾದ್ಯ ತೈಲಗಳಲ್ಲಿ ಆತ್ಮನಿರ್ಭರ (ಸ್ವಾವಲಂಬನೆ) ಯೋಜನೆಯನ್ನು ರೂಪಿಸಿದೆ. ರಾಜ್ಯ, ಜಿಲ್ಲೆ ಮತ್ತು ಕ್ಷೇತ್ರ ಮಟ್ಟದಲ್ಲಿ ಎಣ್ಣೆಕಾಳು ಬೆಳೆಗಳ ಕ್ಷೇತ್ರ ವಿಸ್ತರಣೆ, ಅಧಿಕ ಇಳುವರಿ, ರೈತರ ಆದಾಯ ದ್ವಿಗುಣ ಮಾಡುವುದು ಮತ್ತು ಆಮದು ಅವಲಂಬನೆಯನ್ನು ಕಡಿಮೆ ಮಾಡಿ, ರಫ್ತು ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ 2024–25 ರಿಂದ 2030–31 ಗಳವರೆಗೆ ಯೋಜನೆಯನ್ನು ರೂಪಿಸಲಾಗಿದೆ.

ಜಿಲ್ಲೆಗೆ ನಿಗದಿಪಡಿಸಿರುವ ಎಣ್ಣೆಕಾಳು ಬೆಳೆಗಳಾದ ಸೂರ್ಯಕಾಂತಿ, ಸೋಯಾಅವರೆ ಮತ್ತು ಶೇಂಗಾ ಬೆಳೆಗಳ ಕ್ಷೇತ್ರ, ಉತ್ಪಾದನೆ ಮತ್ತು ಇಳುವರಿ ಹೆಚ್ಚಿಸುವುದು ಮುಖ್ಯ ಗುರಿಯಾಗಿರುತ್ತದೆ. 2025–26 ನೇ ಸಾಲಿನ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಎಣ್ಣೆಕಾಳು ಯೋಜನೆಯಡಿ ಕೋಯ್ಲಿನ ನಂತರದ ನಿರ್ವಹಣೆಯಲ್ಲಿ ರೈತರ ಸಾಮರ್ಥ್ಯವನ್ನು ನಿರ್ಮಿಸಲು ಪ್ರಥಮ ಹಾಗೂ ದ್ವಿತೀಯ ಎಣ್ಣೆಕಾಳು ಕೋಯ್ಲೋತ್ತರ ಮೂಲ ಸೌಕರ್ಯ ಸೌಲಭ್ಯ ಒದಗಿಸುವಂತೆ ಸ್ಥಳೀಯವಾಗಿ ಉದ್ಯೋಗಾವಕಾಶ ಕಲ್ಪಿಸಲು, ಎಣ್ಣೆಕಾಳು ಸಂಸ್ಕರಣ ಘಟಕಗಳಿಗೆ ಅವಶ್ಯವಿರುವ ಯಂತ್ರೋಪಕರಣಗಳನ್ನು ಸರ್ಕಾರ/ ಸರ್ಕಾರೇತರ ಸಂಸ್ಥೆಗಳು, ರೈತ ಉತ್ಪಾದಕ ಸಂಘಗಳು ವಿಸ್ತೃತ ಯೋಜನಾ ವರದಿಯೊಂದಿಗೆ ಅರ್ಜಿ ಸಲ್ಲಿಸಬಹುದು. ಸದರಿ ಯೋಜನೆಯಡಿ ಯೋಜನಾ ವರದಿಯ ಶೇ. 33 ರಷ್ಟು ಅಥವಾ ರೂ.9.99 ಲಕ್ಷಕ್ಕೆ ಮೀರದಂತೆ ಸಹಾಯಧನ ಒದಗಿಸಲಾಗುವುದು.

ಈ ಘಟಕದಲ್ಲಿ ಕಟ್ಟದ ವೆಚ್ಚ ಹಾಗೂ ಭೂಮಿ ಬಾಡಿಗೆ ಪರಿಗಣಿಸಲಾಗುವುದಿಲ್ಲ. ತೈಲ ತೆಗೆಯುವ ಘಟಕಗಳಿಗೆ ಯಂತ್ರೋಪಕರಣಗಳು, ಸಲಕರಣೆಗಳು (10 ಟನ್ ಸಾಮರ್ಥ್ಯ) ಮತ್ತು ಎಣ್ಣೆಕಾಳುಗಳ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಜಿಲ್ಲೆಗೆ ಗುರಿ ಹಂಚಿಕೆಯಾಗಿರುತ್ತದೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಎಸ್. ಕಳ್ಳೆನ್ನವರ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಅಸ್ಕಿ ಪೌಂಡೇಶನ್‌ದಿಂದ ಪಂಚಮಸಾಲಿ ಜಗದ್ಗುರುಗಳಿಗೆ ಸನ್ಮಾನ



ತಾಳಿಕೋಟೆ, ಲಿಂಗಾಯತ ಪಂಚಮಸಾಲಿ ಸಮಾಜದ ಕೂಡಲಸಂಗಮ ಪೀಠದ ಪ್ರಥಮ ಜಗದ್ಗುರುಗಳಾದ ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳನ್ನು ಬೆಟ್ಟಿಯಾದ ಅಸ್ಕಿ ಪೌಂಡೇಶನ್ ಅಧ್ಯಕ್ಷ ಕಾಂಗ್ರೇಸ್ ಮುಖಂಡ ಸಿ.ಬಿ.ಅಸ್ಕಿ ಅವರು ಜಗದ್ಗುರುಗಳ ಆರೋಗ್ಯ ಕ್ಷೇಮವನ್ನು ವಿಚಾರಿಸಿದರಲ್ಲದೇ ಅವರನ್ನು ಸನ್ಮಾನಿಸಿ ಗೌರವಿಸಿ ಆಶೀರ್ವಾದ ಪಡೆದುಕೊಂಡರು.


ಈ ಸಮಯದಲ್ಲಿ ಮಾತನಾಡಿದ ಅಧ್ಯಕ್ಷ ಸಿ.ಬಿ.ಅಸ್ಕಿ ಅವರು ಇತ್ತೀಚಗೆ ಜಗದ್ಗುರುಗಳಾದ ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳವರಿಗೆ ಆರೋಗ್ಯದಲ್ಲಿ ಏರುಪೇರಾಗಿ ಆಸ್ಪತ್ರೆಗೆ ದಾಖಲಾಗಿದ್ದರು ಅವರನ್ನು ಬೆಟ್ಟಿಯಾಗಲು ಆಗಿದ್ದಿಲ್ಲಾ ಅವರು ಸದ್ಯ ಆಸ್ಪತ್ರೆಯಿಂದ ಡಿಸ್ಚಾರ್ಜಆಗಿದ್ದಾರೆ ಅವರು ಪಂಚಮಸಾಲಿ ಸಮಾಜದ ಜಗದ್ಗುರುಗಳಾಗಿದ್ದರೂ ಕೂಡಾ ಎಲ್ಲ ಸಮೂದಾಯದ ಜನರನ್ನು ಪ್ರೀತಿಯಿಂದ ಕಾಣುವದರೊಂದಿಗೆ ಒಳ್ಳೆಯ ರೀತಿಯಿಂದ ಎಲ್ಲ ಸಮಾಜದ ಜನರನ್ನೂ ಸಹ ಭಕ್ತರಂತೆ ಕಾಣುತ್ತಾ ಅವರ ಏಳಿಗೆಗೆ ಸಾಕಷ್ಟು ಸಲಹೆಯನ್ನು ನೀಡುತ್ತಾ ಬಂದಿದ್ದಾರೆ ಅವರಿಗೆ ದೇವರು ನೂರಾರು ಕಾಲ ಆಯುಷ್ಯ ಆರೋಗ್ಯ ಕರುಣಿಸಲಿ ಇನ್ನಷ್ಟು ಸಮಾಜದ ಶ್ರೇಯೋಭಿವೃದ್ದಿಗಾಗಿ ಕಾರ್ಯಗಳನ್ನು ಮಾಡುವ ಶಕ್ತಿ ಅವರಲ್ಲಿ ಬರಲಿ ಎಂದು ಆಶಿಸಿದರು.

ಇದೇ ಸಮಯದಲ್ಲಿ ಜಗದ್ಗುರುಗಳು ಅಸ್ಕಿ ಪೌಂಡೇಶನ್ ಅಧ್ಯಕ್ಷ ಸಿ.ಬಿ.ಅಸ್ಕಿ ಅವರನ್ನೂ ಸಹ ಸನ್ಮಾನಿಸಿ ಗೌರವಿಸಿದರು.

ಈ ಸಮಯದಲ್ಲಿ ಮುದ್ದೇಬಿಹಾಳ ಪುರಸಭಾ ಅಧ್ಯಕ್ಷ ಮೈಹಿಬೂಬ ಗೊಳಸಂಗಿ, ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ, ಮುದ್ದೇಬಿಹಾಳ ತಾಲೂಕಾ ಪಂಚಮಸಾಲಿ ಸಮಾಜದ ಅಧ್ಯಕ್ಷ ಅಮರೇಶ ಗೂಳಿ, ಕೆಯುಸಿ ಬ್ಯಾಂಕ್ ನಿರ್ದೇಶಕ ರವಿ ಗೂಳಿ, ಸಮಾಜದ ಮುಖಂಡರಾದ ಬಸಲಿಂಗಪ್ಪ ರಕ್ಕಸಗಿ, ಟಿ.ವಿಜಯಭಾಸ್ಕರ, ಹುಸೇನ ಮುಲ್ಲಾ, ಮಲ್ಲು ಢವಳಗಿ, ಮೊದಲಾದವರು ಉಪಸ್ಥಿತರಿದ್ದರು.

## ಶ್ರೀ ಸ. ಸ. ಮಾಧವಾನಂದ ಪ್ರಭೂಜಿಯವರ ಮಂದಿರ ಲೋಕಾರ್ಪಣೆ

# ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ಉದ್ಘಾಟನೆ



ಮೂಡಲಗಿ : ತಿರುಪತಿ ತಿಮ್ಮಪ್ಪ ಹೊನ್ನ ಬ್ರಹ್ಮ, ಧರ್ಮಸ್ಥಳದ ಮಂಜುನಾಥ ಅನ್ನ ಬ್ರಹ್ಮ, ಪಂಡರಪೂರದ ವಿಠ್ಠಲ ನಾದಬ್ರಹ್ಮ ಹೀಗೆ ದೇಶದಲ್ಲಿ ಹಲವಾರು ಸಂಪ್ರದಾಯಗಳಿದ್ದು ಅದೇ ರೀತಿ ಇಂಚಗೇರಿಯ ಮಾಧವಾನಂದ ಪ್ರಭುಗಳ ಸಂಪ್ರದಾಯವೂ ಕೂಡ ಗ್ರಾಮಾಂತರ ಪ್ರದೇಶದಲ್ಲಿ ಹೆಚ್ಚು ಪ್ರಚಲಿತವಿದೆ. ಇದು ಆಧ್ಯಾತ್ಮ ಸಂಪ್ರದಾಯಿಗಳ ಸಂಘಟನೆಯಾಗಿದ್ದು, ಆತ್ಮ ಎಂಬ ಪರಮಾತ್ಮನ ನೆಮ್ಮದಿಗಾಗಿ ಆಧ್ಯಾತ್ಮ ಕ್ಷೇತ್ರದಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಿರುವ ಇಂಚಗೇರಿ ಸಂಪ್ರದಾಯವು ರಂಗಾಪೂರದಂತಹ ಸಣ್ಣ ಗ್ರಾಮದಲ್ಲಿ ಪ್ರಾರಂಭವಾಗಿದ್ದು ಪ್ರಶಂಸನೀಯ ಎಂದು ರಾಜ್ಯಸಭೆ ಸಂಸದ ಈರಣ್ಣ ಕಡಾಡಿ ಹೇಳಿದರು.

ತಾಲೂಕಿನ ರಂಗಾಪೂರ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಶ್ರೀ ಸ. ಸ. ಮಾಧವಾನಂದ ಪ್ರಭೂಜಿಯವರ ಮಂದಿರ ಲೋಕಾರ್ಪಣೆ ಹಾಗೂ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂಚಗೇರಿ ಸಂಪ್ರದಾಯ ಕೂಡ ಮೊದಲಿನಿಂದ ಬಹಳ ದೊಡ್ಡ ಪ್ರಮಾಣದಲ್ಲಿ ಬೆಳದು ಬಂದಿದೆ. ಮತ್ತು ಆಧ್ಯಾತ್ಮದ ಹಸಿವನ್ನು ತನಿಸುವಂತಹ ಕೆಲಸ ಕೂಡ ಅವರು ಮಾಡುತ್ತಿದ್ದಾರೆ. ಹೀಗಾಗಿ ಇಂಚಗೇರಿ ಮಠದ ಪರಂಪರೆ, ಪಂಡರಪುರದ ವಾರಕರಿ ಪರಂಪರೆ, ಸಾಯಿ ಬಾಬಾ ಈ ರೀತಿ ಮಾನವ ದೇವರ ಸಲುವಾಗಿ ಎಲ್ಲಿ ಬೆನ್ನು ಹತ್ತುತ್ತಾನೋ ಅಲ್ಲಿ ಆಧ್ಯಾತ್ಮಕ ಪರಂಪರೆ ಇದೆ. ಹೀಗಾಗಿ ರಂಗಾಪೂರ ಒಂದು ಸಣ್ಣ ಗ್ರಾಮವಾದರು ಕೂಡ ಇಂಚಗೇರಿ ಮಠದ ಮಾದವಾನಂದ ಪ್ರಭೂಜಿಯವರ ಆಶ್ರಮವನ್ನು ಸ್ಥಾಪನೆ ಮಾಡಿರುವುದು ಅವರ ಭಕ್ತಿ ಪರಂಪರೆಗೆ ಸಾಕ್ಷಿಯಾಗಿದೆ ಎಂದರು.

ರಂಗಾಪೂರ ಗ್ರಾಮದ ಶ್ರೀ ಸ. ಸ. ಮಾಧವಾನಂದ ಆಶ್ರಮದ ಆವರಣದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣಕ್ಕೆ ಮುಜರಾಯಿ ಇಲಾಖೆಯಿಂದ 5 ಲಕ್ಷ ರೂ.ಗಳು ಮತ್ತು ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 5 ಲಕ್ಷ ರೂ.ಗಳ ನೀಡಿದ ಅನುದಾನವನ್ನು ಗ್ರಾಮಸ್ಥರು ಸದ್ಬಳಕೆ ಮಾಡಿಕೊಂಡಿದ್ದಾರೆ ಎಂದರು.

ಇಂಚಗೇರಿ ಮಠದ ಪೀಠಾಧಿಪತಿಗಳಾದ ಶ್ರೀ ಸ.ಸ ರೇವಣಸಿದ್ದೇಶ್ವರ ಮಹಾರಾಜರ ದಿವ್ಯ ಸಾನ್ನಿಧ್ಯ ವಹಿಸಿ ಆರ್ಶಿವಚನ ನೀಡಿದರು. ಶಂಕ್ರೆಪ್ಪ ಮಹಾರಾಜರು, ನಾಮದೇವ ಮಹಾರಾಜರು, ರಾಮಣ್ಣ ಮಹಾರಾಜರು, ಭೀಮಣ್ಣ ಮಹಾರಾಜರು, ತಮ್ಮಣ್ಣ ಮಹಾರಾಜರು, ಕೆಂಚಪ್ಪಾ ಮಹಾರಾಜರು, ಮಹಾದೇವ ಮಸರಗುಪ್ಪಿ, ರಮೇಶ ಜಿರಗನ್ನವರ, ಮಹಾಂತೇಶ ತೇರದಾಳ, ನಿಜಗುಣಿ ಮಸರಗುಪ್ಪಿ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಸದ್ಭಕ್ತರು ಉಪಸ್ಥಿತರಿದ್ದರು.

# ಮಹಿಳಾ ಒಕ್ಕೂಟದ ಅಕ್ಕ ಕ್ಯಾಂಟಿನ್; ಉಸ್ತುವಾರಿ ಸಚಿವರ ಮೆಚ್ಚುಗೆ




ಧಾರವಾಡ : ಶಿವಳ್ಳಿ ಗ್ರಾಮ ಪಂಚಾಯತ ಒಕ್ಕೂಟದ ಮಹಿಳೆಯರ ಸ್ವ ಉದ್ಯೋಗವಾದ ಹೆಮ್ಮೆಯ ಬ್ರ್ಯಾಂಡ್ "ಅಕ್ಕ" ಸಿಹಿ ತಿನಿಸುಗಳನ್ನು ಕಾರ್ಮಿಕ ಸಚಿವ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅವರು ನಿನ್ನೆ (ಜು.21) ಸಿಹಿ ತಿನಿಸುವ ಮೂಲಕ ಮಹಿಳೆಯರಿಗೆ ಪ್ರಶಂಸೆ ನೀಡಿ, ಬೆಂಬಲಿಸಿದರು.

ಧಾರವಾಡ ರುಡಸೆಟನ ಗ್ರಾಮೀಣ ಅಭಿವೃದ್ಧಿ ಮತ್ತು ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ಸಹಯೋಗದೊಂದಿಗೆ ಗ್ರಾಮ ಪಂಚಾಯತ್ ಮಟ್ಟದ ಸಂಜೀವಿನಿ ಮಹಿಳಾ ಒಕ್ಕೂಟದ ಸದಸ್ಯರ ಆರು ದಿನಗಳ ಕಾಲ ಧಾರವಾಡ ಪೇಡಾ, ದೂದ್ ಪೇಡಾ, ಕುಂದಾ ಹಾಗೂ ಇತರೆ ಸಿಹಿ ತಿನಿಸುಗಳ ತರಬೇತಿ ನೀಡಲಾಗಿತ್ತು.

ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್ ಪಾಟೀಲ್, ಜಿ.ಪಂ. ಉಪಕಾರ್ಯದರ್ಶಿ ಬಿ.ಎಸ್.ಮೂಗನೂರುಮಠ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನ್, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.




ಬೈಲಹೊಂಗಲ– ಚೆನ್ನಮ್ಮನ ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ ಅವರ 53 ನೇ ಜನ್ಮ ದಿನಾಚಾರಣೆ ಅಂಗವಾಗಿ ತಾಲೂಕಿನ ನೇಗಿನಹಾಳ ಗ್ರಾಮದ ಸ್ವಗೃಹದಲ್ಲಿ ಮತಕ್ಷೇತ್ರದ ನಾಗರಿಕರಿಂದ ಹಮ್ಮಿಕೊಂಡ ಅಭಿನಂದನಾ ಸಮಾರಂಭದಲ್ಲಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಉಪವಿಭಾಗಾಧಿಕಾರಿ ಅಧ್ಯಕ್ಷತೆಯಲ್ಲಿ ಮಳಿಗೆಗಳ ಬಹಿರಂಗ ಲಿಲಾವು




ಜಮಖಂಡಿ: ನಗರದ ತಾಲೂಕಾ ಕ್ರೀಡಾಂಗಣ ಆವರಣದಲ್ಲಿರುವ ಸೋಮವಾರ 7 ಮಳಿಗೆಗಳ ಸಾರ್ವಜನಿಕ ಬಹಿರಂಗ ಲಿಲಾವು ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯಿತು.

ಒಂದು ಮಳಿಗೆಗೆ ಸರಕಾರಿ ಲಿಲಾವು 5700 ರೂ.ಗಳಿಂದ ಪ್ರಾರಂಭಗೊಳ್ಳುವ ಬಹಿರಂಗ ಲಿಲಾವಿನಲ್ಲಿ 100ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. 7 ಮಳಿಗೆಗಳ ಲಿಲಾವು ತುರುಸಿನಿಂದ ನಡೆಯಿತು. ಸರಕಾರಿ ಲಿಲಾವು 5700 ರೂ.ಗಳಿಗೆ ಹೆಚ್ಚುವರಿ ಬೇಡಿಕೆ ಸಲ್ಲಿಸುವ ಮೂಲಕ ಗಮನ ಸೆಳೆಯುವ ಮೂಲಕ 20 ಸಾವಿರವರೆಗೆ ಬಿಡ್ ನಡೆಯಿತು.

ವೇದಿಕೆಯಲ್ಲಿ ಉಪವಿಭಾಗಾಧಿಕಾರಿ ಶ್ವೇತಾ ಬಿಡಕರ, ನಗರಸಭೆ ಪೌರಾಯುಕ್ತ ಜ್ಯೋತಿಗಿರೀಶ, ಕಂದಾಯ ಅಧಿಕಾರಿಗಳಾದ ಯಲ್ಲಪ್ಪ ಮಾಂಗ, ಎಸ್.ಎಸ್.ದೇವರಮನಿ ಸಹಿತ ಹಲವರು ಇದ್ದರು.

# ಪತ್ರಿಕಾ ದಿನಾಚರಣೆ: ಸಾಧಕರಿಗೆ ವಾರ್ಷಿಕ ಪ್ರಶಸ್ತಿ ಪ್ರಧಾನ- ಪ್ರತಿಭಾ ಪುರಸ್ಕಾರ ಸಮಾರಂಭ

ಇಂಡಿ: ವಿಜಯಪುರ ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಜುಲೈ 19 ರಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ವಿಜಯಪುರ ವತಿಯಿಂದ ಹಮ್ಮಿಕೊಂಡ ಪತ್ರಿಕಾ ದಿನಾಚರಣೆ, ಸಾಧಕರಿಗೆ ವಾರ್ಷಿಕ ಪ್ರಶಸ್ತಿ ಪ್ರಧಾನ, ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಇಂಡಿ ತಾಲೂಕು ರವಿವಾಣಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆಯ ಹಿರಿಯ ಪತ್ರಕರ್ತ ಭೀರಪ್ಪ ಹೊಸೂರ ಅವರಿಗೆ ಜಿಲ್ಲಾ ಪತ್ರಕರ್ತರ ಪ್ರಶಸ್ತಿಯನ್ನು ಸಚಿವ ಎಂ ಬಿ ಪಾಟೀಲ ಸಚಿವ ಶಿವಾನಂದ ಪಾಟೀಲ ಪ್ರಧಾನ ಮಾಡಿದರು.



ಈ ಸಂದರ್ಭದಲ್ಲಿ ಜಿಲ್ಲಾ ಪೋಲೀಸ್ ವ-ರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಡಿವೈಎಸ್ಪಿ ಬಸವರಾಜ ಯಲಿಗಾರ,ಕೆಯುಡಬ್ಲೂಜೆ ರಾಜ್ಯ ಘಟಕದ ಅಧ್ಯಕ್ಷ ಶಿವಾನಂದ ತಗಡೂರು, ಸಂಘದ ಪ್ರಧಾನ ಕಾರ್ಯದರ್ಶಿ ಜಿ ಲೋಕೇಶ, ಭವಾನಿಸಿಂಗ್ ಠಾಕೂರ,ಹಿರಿಯ ಪತ್ರಕರ್ತ ಗೋಪಾಲ ನಾಯಕ,ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ,

ಕಾನಿಪ ಜಿಲ್ಲಾಧ್ಯಕ್ಷ ಪ್ರಕಾಶ ಬೆಣ್ಣೂರ,ಕಾನಿಪ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರ್ಣಿ, ಕಾನಿಪ ರಾಷ್ಟ್ರೀಯ ಮಂಡಳಿ ಸದಸ್ಯ ಮಹೇಶ ಶೆಟಗಾರ, ಕೆ.ಕೆ. ಕುಲಕರ್ಣಿ, ಕೌಶಲ್ಯ ಪನಾಳಕರ ಇರಫಾನ ಶೇಖ್,ಗುರು ಲೋಕೋರೆ,ಹಿರಿಯ ಪತ್ರಕರ್ತ ಇಂದುಶೇಖರ ಮಣ್ಣೂರ ಕಾನಿಪ ಸಂಘದ ಸದಸ್ಯರು ಭಾಗವಹಿಸಿದ್ದರು

****

# ಸರ್ಕಾರಿ ಆಸ್ಪತ್ರೆ ಪರಿಶೀಲಿಸಿದ ಜಿಲ್ಲಾಧಿಕಾರಿ

ರಬಕವಿ-ಬನಹಟ್ಟಿ,ಜು23: ತಾಲೂಕಾ ಕೇಂದ್ರವಾಗಿರುವ ಅವಳಿ ನಗರದ ಜನತೆಗೆ ಚಿಕಿತ್ಸೆ ಸಮಸ್ಯೆಯಾಗುತ್ತಿರುವ ಹಿನ್ನಲೆ ಜಿಲ್ಲಾಧಿಕಾರಿ ಸಂಗಪ್ಪ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೆಟ್ಟಿ ನೀಡಿ ಪರಿಶೀಲನೆ ನಡೆಸಿದರು. ಪ್ರಸಕ್ತ ಜನಸಂಖ್ಯೆಗೆ ಈ ಆಸ್ಪತ್ರೆ ಸಾಕಾಗುತ್ತಿಲ್ಲ. ಈಗಾಗಲೇ 8 ಎಕೆರೆಯಷ್ಟು ವಿಶಾಲ ಪ್ರದೇಶದಲ್ಲಿ ತಾಲೂಕಾ ಆರೋಗ್ಯ ಕೇಂದ್ರ ಸ್ಥಾಪನೆಗೊಳ್ಳಲಿದೆ. ಈ ಕು-ರಿತಾಗಿ ಸರ್ಕಾರ ಮಟ್ಟದಲ್ಲಿ ಕಾರ್ಯ ಪ್ರಗತಿಯಲ್ಲಿದೆಯೆಂದರು.

ಇದಕ್ಕೂ ಪೂರ್ವ ತಾಲೂಕಿಗೆ ಅವಶ್ಯವಿರುವ ಪ್ರಜಾಸೌಧಕ್ಕೆ ಜಾಗೆ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿ, ರಬಕವಿಯ ಜಿಎಲ್‌ಬಿಸಿ ಆವರಣ ಹಾಗು ಸರ್ವೆ ನಂ. 63 ರಲ್ಲಿನ ಸರ್ಕಾರಿ ಜಾಗೆಯನ್ನು ವೀಕ್ಷಿಸಿದರು.



ಪ್ರಜಾಸೌಧ ನಿರ್ಮಾಣದ ಕುರಿತಾಗಿ ನಿಗದಿತ ಪ್ರದೇಶವನ್ನು ಗುರ್ತಿಸಿಲ್ಲ. ಮುಂದಿನ ದಿನಗಳಲ್ಲಿ ಸೂಕ್ತ ನಿರ್ಧಾರಗಳೊಂದಿಗೆ ಸ್ಥಳ ಗುರ್ತಿಸುವ ಕಾರ್ಯ ನಡೆಯಲಿದೆ ಎಂದು ಸ್ಪಷ್ಟಪಡಿಸಿದರು.

ಇದೇ ಸಂದರ್ಭ ಇನ್ನೂ ಪ್ರಾರಂಭಗೊಳ್ಳದ ಇಂದಿರಾ ಕ್ಯಾಂಟೀನ್, ಕೆಎಚ್‌ಡಿಸಿ ಕಚೇರಿಗೆ ಭೆಟ್ಟಿ ನೀಡಿದರು. ಉಪವಿಭಾಗಾಧಿಕಾರಿ ಶ್ವೇತಾ ಬೀಡಕರ, ತಹಸೀಲ್ದಾರ ಗಿರೀಶ ಸ್ವಾದಿ, ಕಂದಾಯ ಅಧಿಕಾರಿ ಪ್ರಕಾಶ ಮಠಪತಿ, ಪೌರಾಯುಕ್ತ ರಮೇಶ ಜಾಧವ, ಗ್ರಾಮಲೆಕ್ಕಾಧಿಕಾರಿ ಸದಾಶಿವ ಕುಂಬಾರ ಸೇರಿದಂತೆ ಅನೇಕ-ರಿದ್ದರು.

# ಅಂಬಾಭವಾನಿ ದೇವಿಯ ಜಾತ್ರಾ ಮಹೋತ್ಸವು



ಮುಧೋಳ: ಆಷಾಢ ಮಾಸದ ನಿಮಿತ್ಯ ಮುಧೋಳ ನಗರದ ಸೈದಾಪುರ ಗಲ್ಲಿಯಲ್ಲಿ ಇರುವ ಅಂಬಾಭವಾನಿ ದೇವಿಯ ಜಾತ್ರಾ ಮಹೋತ್ಸವು ತಾಲೂಕಿನ ಅಂಬಾಭವಾನಿ ಅಲೆಮಾರಿ ಗೋಂಧಳಿ ಸಮಾಜ ಸೇವಾ ಸಂಘದ ವತಿಯಿಂದ ಅದ್ದೂ-ರಿಯಾಗಿ ಜರುಗಿತು.

ಗ್ರಾಮದೇವತೆ ದುರ್ಗಾ-ದ್ಯಾಮವ್ವ ಮಂದಿರದಿಂದ ಅಂಬಾಭವಾನಿ ಭಾವಚಿತ್ರ ಹೊತ್ತ ವಾಹನ ಜೊತೆ ಕುಂಭ ಮೇಳ, ಗೋಂಧಳಿ ಸಮಾಜದ ವಿಶೇಷ ವೇಶಭೂಷನ, ವಿವಿಧ ವಾದ್ಯ ಮೇಳದೊಂದಿಗೆ ಯುವಕರ, ಮಹಿಳೆ ಮತ್ತು ಪುರುಷರ ದೇವಿಯ ಘೋಷಣೆ ಮೂಲಕ ದೇವಿಯ ಸನ್ನಿಧಿವರೆಗೆ ಭವ್ಯ ಮೆರವಣಿಗೆ ಜರುಗಿತು.

ಸಂಘದ ಅಧ್ಯಕ್ಷ ವಿಠ್ಠಲ ಅಡೇಕಾರ, ಉಪಾಧ್ಯಕ್ಷ ಗಣಪತಿ ಕಾಳೆ, ಪ್ರಮುಖ ನಾರಾಯಣ ಅಡೇಕಾರ, ಸುರೇಶ ಗಾಯಕವಾಡ, ಸುಬಾನ ಕಾಳೆ, ಬಾಲಚಂದ್ರ ಅಡೇಕರ, ಸಂತೋಷ ಗಾಯಕವಾಡ, ವಿಜಯ ಅಡೇಕರ, ಕುಮಾರ ದವಡೆಕರ, ಮಾರುತಿ ಶಿರಸಂಗಿಕರ, ರಮೇಶ ವಾಗ್ಮೋಡೆ, ರಾಜು ಅಡೆಕರ ಹಾಗು ಸಮಾಜದ ಸಮಸ್ಥ ಬಾಂಧವರು ಪಾಲ್ಗೊಂಡಿದ್ದರು.




**ಗೋಕಾಕ: ಭಾರತೀಯ ವೈದ್ಯಕೀಯ ಸಂಘದ ಗೋಕಾಕ ಶಾಖೆಯ ಕಾರ್ಯದರ್ಶಿ ಡಾ. ವಿಶ್ವನಾಥ ಶಿಂಧೋಳಿಮಠ ಅವರು ಮದುಮೇಹ, ರಕ್ತದೊತ್ತಡ, ಬೊಜ್ಜು ಕುರಿತು ನಗರದ ಗೋಕಾ ಏಜ್ಯುಕೇಶನ ಸೋಸೈಟಿಯ ಬಿಇಡಿ ಕಾಲೇಜಿನಲ್ಲಿ ವಿಶೇಷ ಉಪನ್ಯಾಸ ನೀಡಿದರು. ಕಾರ್ಯದರ್ಶಿ ಜಿ ಎಮ್ ವಾಲಿ, ಪ್ರಾಚಾರ್ಯ ಡಾ.ವೀರಾಜ ಮೋದಿ, ಉಪನ್ಯಾಸಕ ಸುರೇಶ ಮುದ್ದಾರ ಇದ್ದರು.**

# ಪ್ರಭುಲಿಂಗ ಕಾಲೇಜಿನಲ್ಲಿ ವಿವಿಧ ಕಾರ್ಯಕ್ರಮ
# ಎಷ್ಟೇ ಎತ್ತರಕ್ಕೆ ಬೆಳೆದರು ದೇಶದ ಸಂಸ್ಕೃತಿ ಮರೆಯಬೇಡಿ




ತೇರದಾಳ-ಬದುಕಿನಲ್ಲಿ ನೀವು ಎಷ್ಟೇ ಎತ್ತರಕ್ಕೆ ಬೆಳೆದರು ಸಾಧಿಸಿದರು ದೇಶದ ಸಂಸ್ಕೃತಿ ಅಭಿಮಾನ ಮರೆಯಬೇಡಿ. ಕಾರಣ ಭಾರತ ದೇಶದಂತಹ ಪುಣ್ಯದ ಭೂಮಿಯಲ್ಲಿ ಜನ್ಮ ತಾಳುವುದೆ ಒಂದು ಸೌಭಾಗ್ಯ ಎಂದು ಹುಬ್ಬಳ್ಳಿ ವೀರಭಿಕ್ಷಾವರ್ತಿ ನೀಲಕಂಠಮಠದ ಜಗದ್ಗುರು ಶಿವಶಂಕರ ಶಿವಾಚಾರ್ಯರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಬಿಎಲ್‌ಡಿಇ ಸಂಸ್ಥೆಯ ಸ್ಥಳೀಯ ಪ್ರಭುಲಿಂಗ ಪಿಯು ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಪ್ರಸಕ್ತ ಸಾಲಿನ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಚಾಲನೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಜೀವನದಲ್ಲಿ ಸಾಧಿಸುವ ಛಲ ಇಟ್ಟುಕೊಂಡು ಹೆಜ್ಜೆ ಹಾಕಿ ಸಮಸ್ಯೆಗಳನ್ನು ಸವಾಲುಗಳನ್ನಾಗಿ ಸ್ವೀಕರಿಸಿ ಎಂದು ಕಿವಿಮಾತು ಹೇಳಿದರು. ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಂಡಲೀಕ ಕಾಂಬಳೆ ಮಾತನಾಡಿ ಜನ್ಮ ನೀಡಿದ ತಂದೆ-ತಾಯಿಯ ಋಣ ತೀರಿಸಲು ಸಾಧ್ಯ ಇಲ್ಲ. ಮೊದಲು ಅವರನ್ನು ಗೌರವದಿಂದ ಕಾಣಿರಿ. ಅವರ ಹಾರೈಕೆಯೇ ನಿಮ್ಮ ಸಾಧನೆಗೆ ಆಶೀರ್ವಾದ ಆಗುತ್ತದೆ ಎಂದು ಹೇಳಿದ ಅವರು, ಸಾಧಕರ ಪಟ್ಟಿಯಲ್ಲಿ ನೀವು ಸೇರುವ ದೃಢ ಸಂಕಲ್ಪದೊಂದಿಗೆ ಪಯಣ ನಡೆಸಿ ಎಂದು ಹೇಳಿದರು. ಪ್ರಾಚಾರ್ಯ ವಿ.ಎಲ್. ನಾರಾಯಣ-ಕರ ಅಧ್ಯಕ್ಷತೆ ವಹಿಸಿದ್ದರು. ಡಾ.ಪಿ.ಎಸ್. ಬಟವಾಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಎನ್.ಹತ್ತಿ, ರೇವನೇಶ ಹಿರೇಮಠ ಸೇರಿದಂತೆ ಕಾಲೇಜಿನ ಹಳೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಕೃಷಿ ಸಿಂಚಾಯ ಯೋಜನೆ: ತುಂತುರು ನೀರಾವರಿ ಘಟಕಗಳಿಗೆ ಅರ್ಜಿ ಆಹ್ವಾನ

ಕೊಪ್ಪಳ : ಕೃಷಿ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯ ಯೋಜನೆಯಡಿಯಲ್ಲಿ ತುಂತುರು ನೀರಾವರಿ ಘಟಕಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕೊಪ್ಪಳ ತಾಲೂಕಿನ ರೈತ ಭಾಂದವರು ಪ್ರಧಾನಮಂತ್ರಿ ಕೃಷಿ ಸಿಂಚಾಯ ಯೋಜನೆಯಡಿ ತುಂತುರು ನೀರಾವರಿ ಘಟಕಗಳಿಗಾಗಿ ಅರ್ಜಿ ಸಲ್ಲಿಸಿ, ಯೋಜನೆಯ ಸದಪಯೋಗ ಪಡೆದುಕೊಳ್ಳಬೇಕು. ಅರ್ಜಿ ನಮೂನೆ, ಆಧಾರ ಕಾರ್ಡ, ನೀರಾವರಿ ಪ್ರಮಾಣ ಪತ್ರ, ಪಹಣಿ, ಪರಿಶಿಷ್ಟ ಜಾತಿ ಮತ್ತು ಪರಿಷ್ಟ ಪಂಗಡದವರಿದ್ದಲ್ಲಿ ಜಾತಿ ಪ್ರಮಾಣ ಪತ್ರ, ನೋಟ್ರಿಯೊಂದಿಗೆ ರೂ. 20 ಛಾಪಕಾಖದ (ಬಾಂಡ್), ಬ್ಯಾಂಕ ಪಾಸ್ ಬುಕ್ ಹಾಗೂ ಆರ್.ಟಿ.ಜಿ. ಎಸ್. ಪತ್ರ, ಈ ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ರೈತ ಸಂಪರ್ಕ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಂತೆ ಹಾಗೂ ರೈತರು ಕಡ್ಡಾಯವಾಗಿ ಎಫ್.ಐ.ಡಿ.ಯನ್ನು ಹೊಂದಿರಬೇಕಾಗಿದ್ದು, ರೈತರು ಈಗಾಗಲೇ ಎಫ್.ಐ.ಡಿ.ಯನ್ನು ಹೊಂದಿದ್ದಲ್ಲಿ ಅಥ-ವಾ ಹೊಂದಿರದೆ ಇದ್ದಲ್ಲಿ ತಮ್ಮ ಎಲ್ಲಾ ಪಹಣಿಗಳನ್ನು ಎಫ್.ಐ.ಡಿ.ಗೆ ಜೋಡಣೆ ಮಾಡಿಕೊಳ್ಳಬೇಕು ಎಂದು ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಜನಜಾಗೃತಿ ವೇದಿಕೆಯ ಅಧ್ಯಕ್ಷರಾಗಿ ವಕೀಲರಾದ ಜಿ. ಆರ್ ಸೋನೆರ ರವರು ಆಯ್ಕೆ



ಬೆಳಗಾವಿ ; ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆಯವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಕರ್ನಾಟಕ ರಾಜ್ಯಾದ್ಯಂತ ಆರ್ಥಿಕವಾಗಿ ಹಿಂದುಳಿದ ಜನರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ನಿಟ್ಟಿನಲ್ಲಿ ಯೋಜನೆಯು ಅತ್ಯುತ್ತಮ ಕೆಲಸವನ್ನು ಮಾಡುತ್ತಿದೆ ಬೆಳಗಾವಿ ಜಿಲ್ಲೆಯಲ್ಲಿ ಯೋಜನೆಯ ಮೂಲಕ ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿಯನ್ನು ಮಾಡಲುಗುತ್ತಿದ್ದು , ದೇವಸ್ಥಾನಗಳ ಜೀರ್ಣೋದ್ಧಾರ, ಕೃಷಿಕರ ಅಭಿವೃದ್ಧಿ, ಮಹಿಳೆಯರಿಗೆ ಕೌಶಲ್ಯಾದಾರಿತ ತರಬೇತಿ, ಆರ್ಥಿಕ ಸಹಕಾರ , ಶಾಲಾ ಕಾಲೇಜುಗಳಿಗೆ ಸಹಕಾರ ಇತ್ಯಾದಿ ಕೆಲಸಗಳನ್ನು ಇದರ ಜೊತೆಗೆ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಮೂಲಕ ಮದ್ಯವ್ಯಸನಿಗಳನ್ನು ಮದ್ಯ ಮುಕ್ತರನ್ನಾಗಿ ಮಾಡಲಾಗುತ್ತಿದೆ ಇದರ ಮೂಲಕ ಮದ್ಯವರ್ಜನ ಶಿಬಿರಗಳ ಅಯೋಜನೆ ಮಾಡಲಾಗುತ್ತಿದೆ ಇಂತಹ ಮಹತ ಕಾರ್ಯಕ್ರಮಗಳನ್ನು ಇನ್ನೂ ಅಭಿವೃದ್ಧಿಯತ್ತ ಕೊಂಡೊಯ್ಯಲು ಬೆಳಗಾವಿಯ ಖ್ಯಾತ ವಕೀಲರು ಆದ ಜಿ ಆರ್ ಸೋನೆರ ರವರನ್ನು ಜಿಲ್ಲಾ ಜನಜಾಗೃತಿ ವೇದಿಕೆಯ ಅಧ್ಯಕ್ಷರಾಗಿ ಆಯ್ಕೆ ಮಾಡಲಾಗಿರುತ್ತದೆ ಎಂದು ತಿಳಿಸಲು ಸಂತೋಷವಾಗುತ್ತದೆ ಇವರ ಅದ್ಯಕ್ಷತೆಯಲ್ಲಿ ಜನ ಜಾಗೃತಿ ವೇದಿಕೆ ಉತ್ತಮವಾಗಿ ಕಾರ್ಯಗಳನ್ನು ಮುಂದುವರಿಸಲಿ

## ತಾಡಪತ್ರಿಗಳ ಬೇಡಿಕೆಗಾಗಿ ಅರ್ಜಿ ಆಹ್ವಾನ

ಗದಗ : ಕೃಷಿ ಸಂಸ್ಕರಣೆ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ರೈತರಿಗೆ ತಾಡಪತ್ರಿಗಳ ವಿತರಣೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ರೈತರು ಆಧಾರ ಕಾರ್ಡ, ಜಮೀನಿನ ಉತಾರ ಹಾಗೂ ಜಾತಿ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸಬೇಕು. ಸದರ ಅರ್ಜಿ ಸಲ್ಲಿಸಲು ಅಗಸ್ಟ 14 ಕೊನಯ ದಿನವಾಗಿರುತ್ತದೆ. ನಿಗದಿತ ಅವಧಿಯೊಳಗೆ ಅರ್ಜಿಯನ್ನು ಸಂಬಂಧಪಟ್ಟ ಹೋಬಳಿಯ ರೈತ ಸಂಪರ್ಕ ಕೇಂದ್ರದಲ್ಲಿ ಸಲ್ಲಿಸಲು ಕೋರಲಾಗಿದೆ.

ಈ ಹಿಂದಿನ ಮೂರು ವರ್ಷಗಳಲ್ಲಿ ತಾಡಪತ್ರಿಗೆ ಸಹಾಯಧನ ಪಡೆದ ರೈತರ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಗಳ ಪರಿಶೀಲನೆ ನಂತರ ದಿ:20-08-2025 ರಂದು ಅವಶ್ಯಕತೆ ಅನುಸಾರ ಲಾಟರಿ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಗದಗ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಗದಗ : 2025-26 ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ ಬಾಲಕಿಯರ ವಸತಿ ನಿಲಯಗಳಲ್ಲಿ ಪಿ.ಯು.ಸಿ. ಮತ್ತು ಪಿ.ಯು.ಸಿ. ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ **SHP ( State Hostel Portal )** ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪೋಷಕರು/ ವಿದ್ಯಾರ್ಥಿಗಳು ವೆಬ್ ಸೈಟ್ ವಿಳಾಸ **https://shp.karnataka.gov.in** ಮೂಲಕ ಅಗಸ್ಟ 2 ರೊಳಗೆ ಆನ್ ಲೈನ್ ಅರ್ಜಿಗಳನ್ನು ಸಲ್ಲಿಸಲು ಜಿಲ್ಲಾ ಅಧಿಕಾ-ರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

## ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿನ ಸಾರ್ವಜನಿಕರ ಗಮನಕ್ಕೆ

ಗದಗ ಜುಲೈ 22: ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿನ ಸಾರ್ವಜನಿಕ-ರಿಗೆ ತಿಳಿಯಪಡಿಸುವುದೇನೆಂದರೆ 2025-26 ನೇ ಸಾಲಿನ ಎಸ್.ಎಫ್.ಸಿ. 5 % ಹಾಗೂ ಸಾಮಾನ್ಯ ನಿಧಿ ಶೇ 24.10 ಹಾಗೂ ಶೇ 5 ಘಟಕದ ವೈಯಕ್ತಿಕ ಕಾರ್ಯಕ್ರಮದಡಿ ಅನುದಾನವನ್ನು ಕಾಯ್ದಿರಿಸಲಾಗಿದ್ದು ಈ ಅನುದಾನಕ್ಕನುಗುಣವಾಗಿ ಕಾರ್ಯಕ್ರಮಗಳಿಗೆ ವೈಯಕ್ತಿಕ ಸವಲತ್ತುಗಳನ್ನು ಪಡೆಯಲು ಅರ್ಹ-ರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಅಗಸ್ಟ 10 ಸಂಜೆ 5 ಗಂಟೆಯೊಳಗಾಗಿ ಭರ್ತಿ ಮಾಡಿದ ನಮೂನೆಯೊಂದಿಗೆ ಅವಶ್ಯಕ ದೃಢೀಕರಿಸಿದ ದಾಖಲೆಗಳೊಂದಿಗೆ ಅರ್ಜಿಯನ್ನು ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ಸಲ್ಲಿಸಿ ಸ್ವೀಕೃತಿ ಪಡೆಯಬಹುದಾಗಿದೆ. ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

# ಬೀದಿ ನಾಯಿಗಳ ನಿಯಂತ್ರಣಕ್ಕೆ ಮುಂದಾದ ನಗರಸಭೆ

ರಬಕವಿ-ಬನಹಟ್ಟಿ,ಜು23: ಕಳೆದ ವಾರವಷ್ಟೇ 'ಬೀದಿ ನಾಯಿಗಳ ಹಾವಳಿಗೆ ತತ್ತರಿಸಿದ ಜನತೆ' ಎಂಬ ಶೀರ್ಷಿಕೆಯಡಿ ಪ್ರಕಟಗೊಂಡ ವರದಿಗೆ ಎಚ್ಚೆತ್ತ ನಗರಸಭೆ ಅವಳಿ ನಗರಾದ್ಯಂತವಿರುವ ಬೀದಿ ನಾಯಿಗಳ ನಿಯಂತ್ರಣಕ್ಕೆ ಮುಂದಾಗಿರುವದು ಜನತೆಯಲ್ಲಿ ನಿರಾಳತೆ ತರುವಲ್ಲಿ ಕಾರಣವಾಗಿದೆ.

ಪೌರಾಯುಕ್ತ ರಮೇಶ ಜಾಧವ ಮಾತನಾಡಿ, ಬೀದಿ ನಾಯಿಗಳ ನಿಯಂತ್ರಣಕ್ಕೆ ಸಂತಾನ ಶಕ್ತಿ ಹರಣ ಶಸ್ತ್ರ ಚಿಕಿತ್ಸೆ ಮಾಡಿಸಲು ಉದ್ದೇಶಿಸಿದ್ದು, ನಗರಸಭೆ ನಿಧಿಯಿಂದ ಹಣ ಭರಿಸಿ ಬೀದಿ ನಾಯಿಗಳನ್ನು ನಿಯಂತ್ರಣ-ಕ್ಕೆ ಕಾರ್ಯಪ್ರವರ್ತರಾಗಿದ್ದು, ಇದೀಗ ಬನಹಟ್ಟಿಯಲ್ಲಿನ ಕೆಲ ಭಾಗಗಳಲ್ಲಿ ಯಶಸ್ವಿಯಾಗಿದ್ದು, ಇನ್ನುಳಿದ ರಬಕವಿ-ಹೊಸೂರು-ರಾಮಪೂರ ಸೇರಿದಂತೆ ನಗರಸಭೆ ವ್ಯಾಪ್ತಿಯಲ್ಲಿನ ಇನ್ನೂ ನೂರಾರು ಬೀದಿನಾಯಿಗಳ ನಿಯಂತ್ರಣ-ಕ್ಕೆ ಮುಂದಾಗುವಲ್ಲಿ ಹಂತ-ಹಂತವಾಗಿ ಸಿಬ್ಬಂದಿಗಳು ಸನ್ನದ್ಧರಾಗಿ ದ್ದಾರೆಂದರು. ಬೀದಿ ನಾಯಿಗಳಿಗೆ ರೇಬೀಸ್ ಚುಚ್ಚು ಮದ್ದು ಹಾಕುವ ಮೂಲಕ ನಾಯಿ ಕಡಿತದ ಪರಿಣಾಮವನ್ನು ತಗ್ಗಿಸುವ ಕ್ರಮವನ್ನು ನಗರಸಭೆ ಕೈಗೊಂಡಿದೆಯೆಂದರು.



'ನಗರಾದ್ಯಂತ ಕತ್ತೆಗಳ ಹಾವಳಿಯೂ ಇದ್ದು, ಆಯಾ ಮಾಲಿಕರಿಗೆ ಈಗಾಗಲೇ ತಾಕೀತು ಮಾಡಲಾಗಿದೆ. ನಿರ್ಲಕ್ಷಿಸಿದ್ದಲ್ಲಿ ಅವುಗಳ ಮೇಲೂ ನಿಯಂತ್ರಣ ಹೇರಲಾಗುವದು'.-

**-ರಮೇಶ ಜಾಧವ, ಪೌರಾಯುಕ್ತರು, ರಬಕವಿ-ಬನಹಟ್ಟಿ.**

# ನಾಳೆ ಶ್ರಾವಣ ಮಾಸದಂಗವಾಗಿ ಬಸವ ಸಂಸ್ಕೃತಿ ಪ್ರವಚನ ಆರಂಭ

ಬಸವನಬಾಗೇವಾಡಿ, ; ಪಟ್ಟಣದ ಸಿಬಿಎಸ್‌ಇ ಶಾಲಾ ಆವರಣದಲ್ಲಿರುವ ನಂದೀಶ್ವರ ರಂಗಮಂದಿರದಲ್ಲಿ ಶ್ರಾವಣ ಮಾಸದಂಗವಾಗಿ ಹಾಗೂ ಪಟ್ಟಣದ ಆರಾಧ್ಯದೈವ ಮೂಲನಂದೀಶ್ವರ(ಬಸವೇಶ್ವರ) ಜಾತ್ರಾಮಹೋತ್ಸವದಂಗವಾಗಿ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ, ಬಸವೇಶ್ವರ ಜಾತ್ರಾ ಉತ್ಸವ ಸಮಿತಿ ಹಾಗೂ ಬಸವೇಶ್ವರ ಸೇವಾ ಸಮಿತಿಯ ಸಹಯೋಗದಲ್ಲಿ ಮೋಟಗಿ ಮಠದ ಪ್ರಭು ಚನ್ನಬಸವ ಸ್ವಾಮೀ-ಜಿಯವರಿಂದ ಒಂದು ತಿಂಗಳ ಕಾಲ ಹಮ್ಮಿಕೊಂಡಿರುವ ಬಸವ ಸಂಸ್ಕೃತಿ ಪ್ರವಚನದ ಉದ್ಘಾಟನೆ ಕಾರ್ಯಕ್ರಮ ಜು. 25 ರಂದು ಸಂಜೆ 6 ಗಂಟೆಗೆ ನಡೆಯಲಿದೆ ಎಂದು ಬಸವೇಶ್ವರ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ರವಿ ರಾಠೋಡ ಹೇಳಿದರು.

ಪಟ್ಟಣದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಯಕ್ರಮವನ್ನು ಸಚಿವ ಶಿವಾನಂದ ಪಾಟೀಲ ಉದ್ಘಾಟಿಸುವರು. ಕಾರ್ಯಕ್ರಮದ ಸಾನಿಧ್ಯವನ್ನು ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ, ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ, ಪ್ರವಚನಕಾರ ಪ್ರಭು ಚನ್ನಬಸವ ಸ್ವಾಮೀಜಿ ವಹಿಸುವರು. ನೇತೃತ್ವವನ್ನು ಶಿವಾನಂದ ಈರಕಾರ ಮುತ್ಯಾ ವಹಿಸುವರು. ಅಧ್ಯಕ್ಷತೆಯನ್ನು ಬಸವೇಶ್ವರ ಸೇವಾ ಸಮಿತಿಯ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ ವಹಿಸುವರು. ಮುಖ್ಯ ಅತಿಥಿಗಳಾಗಿ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಗುರುನಾಥ ದಡ್ಡಿ, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಬಸವೇಶ್ವರ ಅರ್ಬನ್ ಬ್ಯಾಂಕಿನ ಅಧ್ಯಕ್ಷ ಲೋಕನಾಥ ಅಗರವಾಲ, ನ್ಯಾಯವಾದಿ ಬಿ.ಕೆ.ಕಲ್ಲೂರ, ವಿಮಾ ಸಹಕಾರ ಮಹಾ ಮಂಡಳ ಅಧ್ಯಕ್ಷ ಶಿವನಗೌಡ ಬಿರಾದಾರ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಸುರೇಶ ಹಾರಿವಾಳ, ಬಸವೇಶ್ವರ ಅರ್ಬನ ಬ್ಯಾಂಕಿನ ನಿರ್ದೇಶಕ ಜಗದೀಶ ಕೊಟ್ರಶೆಟ್ಟಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜನಪದ ಗಾಯಕ ಬಸವರಾಜ ಹಾ-ರಿವಾಳ, ಬಸವೇಶ್ವರ ಅರ್ಬನ ಬ್ಯಾಂಕಿನ ಉಪಾಧ್ಯಕ್ಷ ಬಸವರಾಜ ಗೊಳಸಂಗಿ, ಬಸವೇಶ್ವರ ಸೇವಾ ಸಮಿತಿ ನಿರ್ದೇಶಕ ಸಂಗಣ್ಣ ಕಲ್ಲೂರ, ಟಿಎಪಿಸಿಎಂ-ಎಸ್ ಅಧ್ಯಕ್ಷ ಶೇಖರಗೌಡ ಪಾಟೀಲ ಆಗಮಿಸುವರು. ಪ್ರವಚನದಲ್ಲಿ ಗದಗ ವೀರೇಶ್ವರ ಪುಣ್ಯಾಶ್ರಮದ ಸಂಗಮೇಶ ಪಾಟೀಲ ಸಂಗೀತ ಸೇವೆ, ತೋಟೇಂದ್ರ ಗದಗ ಅವರು ತಬಲಾ ಸೇವೆ ನೀಡುವರು. ಪ್ರವಚನವು ಪ್ರತಿನಿತ್ಯ ಸಂಜೆ 6.30 ರಿಂದ 8 ಗಂಟೆಯವರೆಗೆ ನಡೆಯಲಿದೆ. ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಸದ್ಭಕ್ತರು ಪ್ರವಚನದ ಸದುಪಯೋಗ ಪಡೆದುಕೊಂಡು ಪುನೀತರಾಗಬೇಕೆಂದರು.



ಬಸವೇಶ್ವರ ಸೇವಾ ಸಮಿತಿಯ ಎಂ.ಜಿ.ಆದಿಗೊಂಡ, ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಮಾತನಾಡಿ, ನಾಡಿನ ಖ್ಯಾತ ಪ್ರವಚನಕಾರರಾಗಿರುವ ಮೋಟಗಿ ಮಠದ ಪ್ರಭು ಚನ್ನಬಸವ ಸ್ವಾಮೀಜಿಯವರು ಒಂದು ತಿಂಗಳ ಕಾಲ ಬಸವ ಸಂಸ್ಕೃತಿ ಕು-ರಿತು ಪ್ರವಚನ ನೀಡಲಿದ್ದಾರೆ. ಶ್ರಾವಣ ಮಾಸದಲ್ಲಿ ಪ್ರತಿನಿತ್ಯ ಸಂಜೆ ನಡೆಯುವ ಈ ಪ್ರವಚನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸದ್ಭಕರು ಆಗಮಿಸಿ ಪ್ರವಚನವನ್ನು ಆಲಿಸಬೇಕು. ಅ.11 ರಿಂದ ಐದು ದಿನಗಳ ಕಾಲ ನಡೆಯಲಿರುವ ಪಟ್ಟಣದ ಆರಾಧ್ಯದೈವ ಮೂಲನಂದೀಶ್ವರ(ಬಸವೇಶ್ವರ) ಜಾತ್ರಾಮಹೋತ್ಸವದ ಸಿದ್ಧತೆ ನಡೆದಿದೆ. ಜಾತ್ರಾಮಹೋತ್ಸವದಂಗವಾಗಿ ಬರುವ ವಿವಿಧ ಮನರಂಜನಾ ಸಾಮಾನುಗಳನ್ನು ಹಾಕಲು ಮುದ್ದೇಬಿಹಾಳ ರಸ್ತೆಯಲ್ಲಿರುವ ಕಾಳಹಸ್ತೇಶ್ವರಮಠದ ಜಮೀನನಲ್ಲಿ ವ್ಯವಸ್ಥೆ ಮಾಡಲಾಗುತ್ತಿದೆ. ಜಾತ್ರಾಮಹೋತ್ಸವದಂಗವಾಗಿ ಧಾರ್ಮಿಕ ಕಾರ್ಯಕ್ರಮ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತದೆ ಎಂದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಶೇಖರ ಗೊಳಸಂಗಿ, ಡಾ.ಬಸವರಾಜ ಕೋಟಿ, ಉಮೇಶ ಹಾರಿವಾಳ, ಸಂಕನಗೌಡ ಪಾಟೀಲ, ಎಸ್.ಆರ್.ಕಲ್ಲೂರ,ಬಸವರಾಜ ಗೊಳಸಂಗಿ, ಜಾತ್ರಾ ಉತ್ಸವ ಸಮಿತಿಯ ಪದಾಧಿಕಾರಿಗಳಾದ ನಂದೀಶ ಪಾಟೀಲ, ಮಂಜು ಜಾಲಗೇರಿ, ಲಾಳೇಸಾ ಕೊರಬು, ಮಹೇಶ ಹಿರೇಕುರಬರ ಇತರರು ಇದ್ದರು.

# ಹಳೆ ಪಿಂಚಣಿ ಮುಂದುವರಿಸಲು ನಿವೃತ್ತ ನೌಕರರ ಆಗ್ರಹ



ಯರಗಟ್ಟಿ: ಹೊಸ ಪಿಂಚಣಿಯಿಂದ ನಿವೃತ್ತ ನೌಕರರ ಪಿಂಚಣಿ ಸೌಲಭ್ಯಕ್ಕೆ ಅನ್ಯಾಯವಾಗಲಿದೆ. ಹಳೆ ಪಿಂಚಣಿ ಪದ್ಧತಿಯನ್ನೇ ಮುಂದುವರಿಸಬೇಕು ಉಪ ತಹಶೀಲ್ದಾರ್ ಎಸ್. ಬಿ. ಕುಲರ್ಕಣಿ ಮೂಲಕ ಪ್ರಧಾನ ಮಂತ್ರಿಗಳಿಗೆ ಮನವಿ ಸಲ್ಲಿಸಿ ನಿವೃತ್ತ ನೌಕರರು.

ಮನವಿ ಸಲ್ಲಿಸಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಆರ್. ಎಲ್. ಜೂಗನವರ ಮಾತನಾಡಿದ ಅವರು ಕೇಂದ್ರ ಸರ್ಕಾರ 2004ರಲ್ಲಿ ಹೊಸ ಪಿಂಚಣಿಯನ್ನು ಜಾರಿಗೆ ತರಲಾಯಿತು. ಅದೇ ರೀತಿ ದೇಶದ ಎಲ್ಲಾ ರಾಜ್ಯಗಳು ಕೇಂದ್ರ ಸರ್ಕಾರದ ಮಾದರಿಯಲ್ಲಿ ಹೊಸದಾಗಿ ಸರ್ಕಾರಿ ಸೇವೆಗೆ ನೇಮಕಗೊಳ್ಳುವ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿದೆ. ಇದರಿಂದ ಸರ್ಕಾರಿ ನೌಕರರು, ನಿವೃತ್ತಿ ಹೊಂದುವ ಸಂಧರ್ಭದಲ್ಲಿ ಬರಬೇಕಾದ ಆರ್ಥಿಕ ಸೌಲಭ್ಯಗಳಿಂದ ವಂಚಿತವಾಗಿರುವುದು ತಮಗೆಲ್ಲಾ ತಿಳಿದಿರುವ ವಿಚಾರ. ಹಲವಾರು ಸರ್ಕಾರಿ ನೌಕರರ ಒಕ್ಕೂಟಗಳು ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರಬೇಕೆಂದು ಸಾಕಷ್ಟು ಹೋರಾಟಗಳನ್ನು ಮಾಡಿದರೂ ಸರ್ಕಾರ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿರುವುದಿಲ್ಲ. ಮುಂದಿನ ದಿನಗಳಲ್ಲಿ ಸರ್ಕಾರಿ ಸೇವೆಯಿಂದ ನೌಕರರು ನಿವೃತ್ತಿ ಹೊಂದಿದಾಗ ಅವರಿಗೆ ಹಳೆ ಪಿಂಚಣಿಯ ಆರ್ಥಿಕ ಸೌಲಭ್ಯಗಳು ದೊರೆಯುವುದಿಲ್ಲದಿರುವುದು ಈಗಾಗಲೇ ತಮ್ಮ ಗಮನಕ್ಕೆ ಬಂದಿರುತ್ತದೆ. ನೌಕರರು ಮತ್ತು ಅವಲಂಬಿತರು, ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಸೌಲಭ್ಯ ಕಡಿತ-ಗೊಳಿಸಬಾರದು ಎಂದರು.

ಪ್ರಧಾನ ಕಾರ್ಯದರ್ಶಿ ಎಸ್. ಎಚ್. ನಾಯ್ಕರ ಮಾತನಾಡಿದ ಅವರು ಹಳೆ ಪಿಂಚಣಿ ಪದ್ಧತಿಯನ್ನೇ ಮುಂದುವ-ರಿಸಬೇಕು ಇಲ್ಲದಿದ್ದರೆ ಕೇಂದ್ರ ಸರ್ಕಾರದ ವಿರುದ್ಧ ರಾಜ್ಯದಾದ್ಯಂತ ಹೋರಾಟ ಮಾಡಲಾಗುವುದು ಎಂದು ಹೇಳಿದರು.

ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷ ಮಲ್ಲಪ್ಪ ಆನಿಗೋಳ, ಪಿ. ಎಚ್. ಪಾಟೀಲ, ಎ. ಎಂ. ಚವಡಪ್ಪನ್ನವರ, ಅಪ್ಪಣ್ಣ ಜರಗು, ಎಚ್. ಎಲ್. ವಜ್ರಮಟ್ಟಿ, ಟಿ. ಎನ್. ಭರಮನ್ನವರ, ಎಚ್. ಎಲ್. ಪಗಡಿ, ಕೆ. ಬಿ. ಬಡಿಗೇರ, ಎಂ. ಬಿ. ಘೋಡಗೇರಿ, ಜಿ. ಎಸ್. ಪೂಜೇರ ಭಾಗವಹಿಸಿದ್ದರು.

ಜನನ ಮತ್ತು ಮರಣ ನೊಂದಣಿ ಪದ್ಧತಿ ಕುರಿತು ಜಿಲ್ಲಾ ಮಟ್ಟದ ಸಮನ್ವಯಸಮಿತಿ ಸಭೆ

# ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ತ್ವರಿತಗತಿಯಲ್ಲಿ ಸಾಗಲಿ : ಜಿಲ್ಲಾಧಿಕಾರಿ

ಗದಗ : ಜಿಲ್ಲೆಯಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ವಿಳಂಬ ಮಾಡದೇ ತ್ವರಿತಗತಿಯಲ್ಲಿ ಸಾಗಲಿ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಬುಧವಾರ ಜರುಗಿದ ಜನನ ಮತ್ತು ಮರಣ ನೊಂದಣಿ ಪದ್ಧತಿ ಕುರಿತು ಜರುಗಿದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿ ಜನನ ಮತ್ತು ಮರಣ ನೊಂದಣಿ ಪ್ರಕ್ರಿಯಲ್ಲಿ ಸರಿಯಾಗಿ ಮಾಹಿತಿದಾರರ ಹೆಸರು ಮತ್ತು ಸಹಿಯನ್ನು ಸಂಗ್ರಹಿಸಿತಕ್ಕದ್ದು ಮತ್ತು ಅರ್ಜಿದಾರರ ಶುಲ್ಕವನ್ನು ನಿಯಮಿತವಾಗಿ ಸರಕಾರಕ್ಕೆ ವಿಳಂಬ ಮಾಡದೇ ಜಮೆ ಮಾಡಬೇಕು. ನೋಂದಣಿ ಪ್ರಮಾಣ ಪತ್ರದಲ್ಲಿ ನೋಂದಣಾಧಿಕಾರಿಗಳ ರುಜು ಕಡ್ಡಾಯವಾಗಿರಬೇಕು ಹಾಗೂ ತಾಲೂಕ ಮಟ್ಟದ ಜನನ ಮತ್ತು ಮರಣ ಸಮನ್ವಯ ಸಮಿತಿ ಸಭೆಗಳು ಕಡ್ಡಾಯವಾಗಿ ಜರುಗಿಬೇಕು ಎಂದು ಸೂಚಿಸಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ ಮಾತನಾಡಿ ಜಿಲ್ಲೆಯಲ್ಲಿ ಏಪ್ರಿಲ್ 2025 ರಿಂದ ಜೂನ್ 2025 ರವರೆಗೆ 2505 ಜನನ ಘಟನೆಗಳು ನಿಗದಿತ ಸಮಯದಲ್ಲಿ ನೋಂದಣಿಯಾಗಿದ್ದು ಶೇ 55.38 ರಷ್ಟು ಹಾಗೂ 1925 ಮರಣ ಘಟನೆಗಳು ನಿಗದಿತ ಸಮಯದಲ್ಲಿಯೇ ನೋಂದಣಿಯಾಗಿ ಶೇ 78 ರಷ್ಟು ಪ್ರಗತಿ ಸಾಧಿಸಲಾಗಿದೆ. ಪ್ರಾಧಿಕಾರದ ಅನುಮತಿಯಿಲ್ಲದೆ ನೋಂದಣಿ ಪ್ರಕ್ರಿಯೆಲ್ಲಿ ವಿಳಂಬವಾಗಬಾರದು. ಸರ್ಕಾರಕ್ಕೆ ಹಣ ಜಮೆ ಮಾಡಿದ ಚಲನ್ ಪ್ರತಿಗಳನ್ನು ಈ ಜನ್ಮ ತಂತ್ರಾಂಶದಲ್ಲಿ ಅಪ್ಲೋಡ್ ಮಾಡಬೇಕು ಎಂದ ಅವರು 2025 ರಲ್ಲಿ ತಾಲೂಕು ಮಟ್ಟದ ಸಮನ್ವಯ ಸಮಿತಿ ಸಭೆ ಜರುಗಿಸಿದ ವಿವರ ಹಾಗೂ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ವಿಭಾಗದ ಮಾಹಿತಿಯನ್ನು ಸಭೆಗೆ ನೀಡಿದರು.


ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿದೇಶಕ ಬಸನಗೌಡ ಕೊಟ್ಟೂರು, ಜಂಟಿ ಕೃಷ ನಿರ್ದೇಶಕಿ ತಾರಾಮಣಿ ಜಿ.ಎಚ್, ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡಾ.ಸೋನಾವಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ಡಿಡಿಎಲ್ಆರ್ ರುದ್ರಣ್ಣಗೌಡ ಜಿ.ಜೆ. ವಾರ್ತಾಧಿಕಾರಿ ವಸಂತ ಮಡ್ಲೂರ, ಎಲ್ಲಾ ತಾಲೂಕಿನ ತಹಶಿಲಾರ್ದರು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ವಿವಿಧ ಅಧಿಕಾರಿಗಳು ಹಾಜರಿದ್ದರು.

# ಯೋಗದಾ ಸತ್ಯಂಗ ಧ್ಯಾನ ಮಂಡಳಿಯಿಂದ ಬಾಬಾಜಿ ಅವರ ಸ್ಕೃತಿ ದಿವಸ ಆಚರಣೆ

ಬೆಳಗಾವಿ: ನಗರದಲ್ಲಿ ಯೋಗದಾ ಸತ್ಯಂಗ ಧ್ಯಾನ ಮಂಡಳಿಯ ವತಿಯಿಂದ ಮಹಾ ಅವತಾರ ಬಾಬಾಜಿ ಅವರ ಸ್ಮೃತಿ ದಿವಸದ ನಿಮಿತ್ಯ ಸೋಮವಾರ ಒಂದು ದಿನ ದೀರ್ಘ ಧ್ಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಸಹಸ್ರಾರು ಭಕ್ತರು ಈ ಧ್ಯಾನದ ಕಾರ್ಯಕ್ರಮದಲ್ಲಿ ಭಾಗವಹಿಸಿ ಗುರುಗಳ ಆಶೀರ್ವಾದವನ್ನು ಪಡೆದುಕೊಂಡರು.

ಈ ವೇಳೆ "ಬಾಬಾಜಿ ಅವರ ಹೆಸರನ್ನು ಯಾರು ಭಕ್ತಿಯಿಂದ ಉಚ್ಚರಿಸುತ್ತಾರೋ, ಅಂಥವರು ಕ್ಷಣದಲ್ಲೇ ಅವರ ಆಧ್ಯಾತ್ಮಿಕ ಕೃಪೆಗೆ ಪಾತ್ರರಾಗುತ್ತಾರೆ." ಎಂದು ಶ್ರೀ ಶ್ರೀ ಲಾಹಿರಿ ಮಹಾಶಯರು ತಿಳಿಸಿದ್ದಾರೆ.

ಮಹಾನ್ಗುರು ಗಳಾದ ಶ್ರೀ ಶ್ರೀ ಲಾಹಿರಿ ಮಹಾಶಯರ ಈ ಮಹತ್ತರವಾದ ಭಕ್ತಿಯನ್ನು, ಪರಮ ಹಂಸ ಯೋಗಾನಂದರು ತಮ್ಮ 'ಯೋಗಿಯ ಆತ್ಮಕಥೆ' **(Autobiography of a Yogi)** ಕೃತಿಯಲ್ಲಿಉಲ್ಲೇಖಿಸಿದ್ದಾರೆ.



ಮಹಾವತಾರ ಬಾಬಾಜಿ ಅವರು ಎಲ್ಲಾ ಪ್ರಾಮಾಣಿಕ ಅನುಯಾಯಿಗಳ ಜೀವನದ ಮೇಲೆ ಅವರು ಬೀರುವ ಶುದ್ಧ, ಅತೀಂದ್ರಿಯ ಮಹತ್ವವುಳ್ಳ, ಶಾಶ್ವತ ಪ್ರಭಾವವನ್ನು ಪ್ರಬಲವಾಗಿ ವಿವರಿಸುತ್ತದೆ. ಭಕ್ತಾಧಿಗಳು ಧ್ಯಾನದಿಂದ ಸಕಲವನ್ನು ಪಡೆದುಕೊಳ್ಳಬಹುದು ಎಂದು ತಿಳಿಸಿದ್ದಾರೆ.

ಶ್ರೀ ಶ್ರೀ ಲಾಹಿರಿ ಮಹಾಶಯರ ಪ್ರಮುಖ ಶಿಷ್ಯರಾದ, ಸ್ವಾಮಿ ಶ್ರೀಯುಕ್ತೇಶ್ವರ ಗಿರಿ ಅವರು ಹೇಳಿದಂತೆ, ಬಾಬಾಜಿ ಅವರ ಆಧ್ಯಾತ್ಮಿಕ ಸ್ಥಿತಿಯು ಮಾನವನ ಗ್ರಹಿಕೆಗೆ ಮೀರಿದ್ದು. ಮಹಾನ್ಗುರುಗಳ ಪ್ರೇರಣೆ ಮತ್ತು ಬೋಧನೆಗಳೊಂದಿಗೆ ಸಾಮಾನ್ಯ ಜನರು ತಮ್ಮನ್ನು ತಾವು ಸಮನ್ವಯಗೊಳಿಸಲು ಪ್ರಯತ್ನಿಸಿದರೆ, ಅವರು ತಮ್ಮಆಧ್ಯಾತ್ಮಿಕ ಪಯಣದಲ್ಲಿಅಪಾರ ಪ್ರಯೋಜನ ಪಡೆಯುತ್ತಾರೆ. ಧ್ಯಾನವು ಮನುಷ್ಯನನ್ನು ಸದೃಢಗೊಳಿಸುತ್ತದೆ, ಮನಸ್ಸಿಗೆ ಸುಖ, ನೆಮ್ಮದಿ ದೊರಕುತ್ತದೆ ಎಂದು ತಿಳಿಸಿದರು.

ಉತ್ತರದಲ್ಲಿ ಹಿಮಾಯಲದ ಮಡಿಲಲ್ಲಿ ದ್ವಾರಪಟ ಎಂಬ ಸ್ಥಳದಲ್ಲಿ ಬಾಬಾಜಿಯರ ಸಾಧನೆ ಮಾಡಿದ ಗುಹೆ ಇದೆ. ಜನಸಾಮಾನ್ಯರೂ ಕೂಡ ತಮ್ಮ ಗ್ರಹಸ್ಥ ಜೀವನವನ್ನು ನಡೆಸುತ್ತ, ಮೋಕ್ಷದ ದಾರಿಯನ್ನು, ಕ್ರೀಯಾಯೋಗದ ಜಲದಿಂದ ಸಾದಿಸಬಹುದು, ಅಂತ ತೋರಿಸಲಿಕ್ಕೆ ಜನಸಾಮಾನ್ಯರ ನಡುವೆ ಇದ್ದುಕೊಂಡು ತಮ್ಮ ಗ್ರಹಸ್ಥ ಜೀವನ ನಡೆಸುತ್ತಿದ್ದ ಭಕ್ತರಾದ ಲಾಹರಿ ಮಹಾಶಯರಿಗೆ ಕ್ರೀಯಾಯೋಗವನ್ನು ಕಲಿಸಿಕೊಟ್ಟರು. ಮತ್ತು ಅದನ್ನು ಶ್ರದ್ಧೆಯುಳ್ಳ ಭಕ್ತರಿಗೆ ಕಲಿಸಲು ಆದೇಶಿಸಿದರು. ಬೆಳಗಾವಿಯ ಹಲವಾರು ಭಕ್ತರಿಗೆ ಈ ಪುಣ್ಯದ ದಿವಸ ಧ್ಯಾನದಲ್ಲಿ ಕ್ರೀಯಾಯೋಗವನ್ನು ಮಾಡಿ ಪಾವನಗೊಳ್ಳಬೇಕು ಶಶಿಕಾಂತ ಚುನಮರಿ ಅವರು ಹರಸಿದರು.

ಶಶಿಕಾಂತ ಚುನಮರಿ, ಶ್ರೀನಿವಾಸ್ ಖೋಪರ್ಡೆ, ಮಾರನ ಬಸರಿ, ಶೈಲಜಾ ಕೋಡಿಶೆಟ್ಟಿ ಮತ್ತು ಮಂಜುಳಾ ಚುನಮರಿ ಹಾಗೂ ಇತರರು ಇದ್ದರು.

ಮುಧೋಳ ತಾಲೂಕಾ ಮಟ್ಟದ ಪತ್ರಿಕಾ ದಿನಾಚರಣೆ

# ಸಾರ್ವಜನಿಕರ ನಂಬಿಕೆ, ವಿಶ್ವಾಸ ಉಳಿಸಿಕೊಳ್ಳಿ : ಸುಶೀಲೇಂದ್ರ




ಮುಧೋಳ: ಸಾರ್ವಜನಿಕರು ಪತ್ರಕರ್ತರ ಹಾಗೂ ಮಾಧ್ಯಮದವರ ಮೇಲೆಟ್ಟಿರುವ ನಂಬಿಕೆ ಮತ್ತು ವಿಶ್ವಾಸವನ್ನು ಉಳಸಿಕೊಳ್ಳಲು ಸಮಾಜಮುಖಿ ಕಾರ್ಯದ ಜೊತೆ ಉತ್ತಮ ಸಮಾಜವನ್ನು ನಿರ್ಮಿಸಬೇಕಾಗಿದೆ. ಎಂದು ಹಿರಿಯ ಪತ್ರಕರ್ತ ಸುಶೀಲೇಂದ್ರ ಕುಂದರಗಿ ಹೇಳಿದರು.

ನಗರದ ಕಾನಿಪ. ಸಂಘದ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಸನ್ಮಾನ ಸ್ವಿಕರಿಸಿ ಅವರು ಮಾತನಾಡಿ, ಇಂದು ಪೈಪೋಟಿಯ ದಾವಂತದಲ್ಲಿ ಸುದ್ದಿಗಳ ಸತ್ಯಾಸತ್ಯತೆ ಪರಿಶೀಲಿಸದೇ ಸುದ್ದಿಗಳನ್ನು ಪ್ರಕಟಿಸಲಾಗುತ್ತಿವೆ, ಸಾಮಾಜಿಕ ಜಾಲತಾಣಗಳಲ್ಲಿ ಕೆಲವೊಂದು ಸುಳ್ಳ ಸುದ್ದಿಗಳು ಪ್ರಸಾರವಾಗುತ್ತಿರುತ್ತವೆ ಹಾಗಾಗಿ ಪತ್ರಕರ್ತರು ತಮ್ಮನ್ನು ತಾವೇ ವಿಮರ್ಶೆಗೆ ಒಳಪಡಿಸಿಕೊಂಡು ತಮ್ಮಕರ್ತವ್ಯ ಮತ್ತು ಜವಾಬ್ದಾರಿಯನ್ನು ನಿರ್ವಹಿಸಬೇಕಾಗಿದೆ ಎಂದರು.

ಕಾನಿಪ. ಸಂಘದ 'ರಾಜ್ಯ ಸಮಿತಿ ಸದಸ್ಯ ಮಹೇಶ ಅಂಗಡಿ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪತ್ರಕರ್ತರು ತಮ್ಮ ಜವಾಬ್ದಾರಿ ಮತ್ತು ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಣೆ, ಆಳವಾದ ಅಧ್ಯಯನ ಮಾಡಿಕೊಳ್ಳಬೇಕು. ಪತ್ರಿಕೆಗಳನ್ನು ಜನರು ದುಡ್ಡು ಕೊಟ್ಟು ಓದುವ ಹವ್ಯಾಸ ಬೆಳಸಿಕೊಂಡರೆ ಪತ್ರಿಕೆಗಳ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಂಘದ ಜಿಲ್ಲಾ ಅಧ್ಯಕ್ಷ ಆನಂದದ ಲಬಂಜನ, ಹಿರಿಯ ಪತ್ರಕರ್ತ ಅಶೋಕ ಕುಲಕರ್ಣಿ ಪ್ರಾಸತಾವಿಕವಾಗಿ, ಹಿರಿಯ ನಾಗರಿಕರ ವೇದಿಕೆ ಅಧ್ಯಕ್ಷ ಕಲ್ಲಪ್ಪ ಸಬರದ ಓದುಗರ ಪರ ಮಾತನಾಡಿ, ದೃಶ್ಯ ಮಾದ್ಯಮಗಳಿಗಿಂತ ಮುದ್ರಣ ಮಾಧ್ಯಮಗಳಲ್ಲಿ ಬರುವ ಸುದ್ದಿ ಸಮಾಚಾರಗಳು ವಿಶ್ವಾಸಾರ್ಹತೆಯಾಗಿವೆ ಹೀಗಾಗಿ ಕಾರ್ಯಕ್ರಮಕ್ಕೆ ಆಗಮಿಸಿರುವ ಎಲ್ಲರೂ ಪತ್ರಿಕೆಗಳನ್ನು ಕೊಂಡು ಓದಬೇಕು ಎಂದು ಸಬರದ ಹೇಳಿದರು.

ತಾಲೂಕಾ ಅಧ್ಯಕ್ಷ ಬಿ.ರತ್ನಾಕರ ಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು, ಪತ್ರಕರ್ತ ಹಿರಿಯ ಪತ್ರಕರ್ತ ಬಿ.ಎಚ್. ಬೀಳಗಿ, ಗಣೇಶ ಮೇತ್ರಿ, ಗೋವಿಂದಪ್ಪ ತಳವಾರ, ಸಲೀಂ ಕೊಪ್ಪದ, ಹಸನಡೊಂಗ್ರಿ ಮಹಾಲಿಂಗಪೂರ, ಎಂ.ಸಿ. ಗೋವಿಂದಪೂರಮಠ, ಬಂದೇನವಾಜ ರಾಮದುರ್ಗ, ಈರಣ್ಣ ಸಾಲಗುಂದಿ, ಫೀರಸಾಬ ನದಾಫ್(ಲೋಕಾಪುರ) ಜಗದೀಶ ಜೀರಗಾಳ ಹಾಗೂ ಪತ್ರಿಕಾ ವಿತಕರು ಇತರರಿದ್ದರು.

ಕು.ಪೃಥ್ವಿ ದೇಶಪಾಂಡೆ ಪ್ರಾರ್ಥಿಸಿದರು, ಎಂ. ಎಚ್. ನದಾಫ ಸ್ವಾಗತಿಸಿದರು.ವಿಶ್ವನಾಥ ಮುನವಳ್ಳಿ, ವೆಂಕಟೇಶ ಗುಡೆಪ್ಪನವರ ಹಾಗೂ ಸಿದ್ದು ಹೂಗಾರ ನಿರುಪಿಸಿದರು, ಶ್ರೀನಿವಾಸ ಬಬಲಾದಿ ವಂದಿಸಿದರು.

# ನಾಡು ಕಂಡ ಶ್ರೇಷ್ಠ ವೈದ್ಯ ವಿಜ್ಞಾನಿ ಡಾ.ಸಜನಾ



ರಬಕವಿ-ಬನಹಟ್ಟಿ, ಡಾ.ಸ.ಜ.ನಾಗಲೋಟಿಮಠರು ನಾಡು ಕಂಡ ಶ್ರೇಷ್ಠ ವೈದ್ಯ ವಿಜ್ಞಾನಿಯಾಗಿದ್ದರು. ಅವರೊಬ್ಬ ಶ್ರೇಷ್ಠ ಉಪನ್ಯಾಸಕ, ವಾಗ್ಮಿ, ಸಂಶೋಧಕ, ಆಡಳಿತಗಾರ, ಸಂಘಟಕಾರ, ವೈದ್ಯ ಸಾಹಿತಿಯಾಗಿದ್ದರು. ಅಂಥವರು ನಮ್ಮ ಜನತಾ ಶಿಕ್ಷಣ ಸಂಘದ ಎಸ್ ಆರ್ ಎ ಪ್ರೌಢ ಶಾಲೆಯ ವಿದ್ಯಾರ್ಥಿಯಾಗಿದ್ದರು ಎಂಬುದು ನಮ್ಮೆಲ್ಲರ ಹೆಮ್ಮೆ ಎಂದು ಇಲ್ಲಿನ ಎಸ್ ಆರ್ ಎ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಬಿ.ಆರ್. ಗೊಡ್ಡಾಳೆ ತಿಳಿಸಿದರು.

ಅವರು ಸೋಮವಾರ ಸ್ಥಳೀಯ ಎಸ್ಆರ್ಎ ಪದವಿಪೂರ್ವ ಕಾಲೇಜಿನಲ್ಲಿ ಡಾ.ಸಜನಾ ಅವರ 85ನೇ ಜನ್ಮ ದಿನಾಚರಣೆಯ ಸಂದರ್ಭದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಕನ್ನಡ ಉಪನ್ಯಾಸಕ ಸಿದ್ಧರಾಮ ಖಾನಾಪುರ ಮಾತನಾಡಿ, ಅವರು ರಚಿಸಿದ ಬಿಚ್ಚಿದ ಜೋಳಿಗೆ ಕನ್ನಡ ಶ್ರೇಷ್ಠ ಆತ್ಮ ಚರಿತ್ರೆಯಾಗಿದೆ. ವೈದ್ಯ ಸಾಹಿತಿಯಾಗಿ ಗಮನ ಸೆಳೆದ ಅವರ ಎರಡು ಕೃತಿಗಳಿಗೆ ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ನೀಡಿತ್ತು. ಸರಳವಾಗಿ ಎಲ್ಲರಿಗೂ ತಿಳಿಯುವ ರೀತಿಯಲ್ಲಿ ವೈದ್ಯಕೀಯ ಸಾಹಿತ್ಯವನ್ನು ಕನ್ನಡದಲ್ಲಿ ಬರೆದ ಶ್ರೇಯಸ್ಸು ಡಾ.ಸಜನಾ ಅವರದು ಎಂದರು.

ಶಿವಕುಮಾರ ಬಿರಾದಾರಪಾಟೀಲ, ಎಫ್.ಬಿ.ತಳವಾರ, ಮಧ್ವಾನಂದ ಗುಟ್ಲಿ, ಶಂಕರ ಸೊಲ್ಲಾಪುರ, ಜಯಶ್ರೀ ಹಳ್ಯಾಳ, ಪ್ರವೀಣ ಪೂಜಾರಿ, ರವಿ ಧಡೂತಿ, ಕಾಡು ಆಲಗುಂಡಿ, ವಾಣಿಶ್ರೀ ಆಚನೂರ, ದಾನೇಶ್ವರಿ ಬೀಳಗಿ, ಶ್ರೇಯಾ ಪತ್ತಾರ, ಅಥಣಿ ಇದ್ದರು.

## ಕೃಷಿ ಪ್ರಶಸ್ತಿ ಕಾರ್ಯಕ್ರಮ: ಮುಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಅರ್ಜಿ ಆಹ್ವಾನ

ಕೊಪ್ಪಳ ಜುಲೈ 22 (ಕರ್ನಾಟಕ ವಾರ್ತೆ): ಕೃಷಿ ಇಲಾಖೆಯಿಂದ 2025-26 ನೇ ಸಾಲಿನ ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಮುಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕೃಷಿ ಪ್ರಶಸ್ತಿ ಕಾರ್ಯಕ್ರಮವು ಚಾಲ್ತಿ ಯೋಜನೆಯಾಗಿದ್ದು, ಸರ್ಕಾರಿ ಆದೇಶದನ್ವಯ 2025-26ನೇ ಸಾಲಿನಲ್ಲಿಯೂ ಮುಂದುವರಿಸಲಾಗಿದ್ದು, ಕೃಷಿ ಪ್ರಶಸ್ತಿ ಮಾರ್ಗಸೂಚಿಯ ಕೆಲವು ಮಾನದಂಡಗಳನ್ನು ಪರಿಷ್ಕರಿಸಿ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು. **K-Kisan Portal** ರಡಿ **Citizen Login** ಅಥವಾ **RSK Login** ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ /ನಾಗರಿಕ ಸೇವಾ ಕೇಂದ್ರ/ ಸ್ವತಃ ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಅಗತ್ಯ ದಾಖಲಾತಿಗಳೊಂದಿಗೆ ರೈತರ ಎಫ್.ಐ.ಡಿ **(Farmer's Identification Number)** ಯನ್ನು ಬಳಸಿಕೊಂಡು ಔಟಟುಟಜ ಮೂಲಕ 30 ನೇ ಆಗಷ್ಟ್-2025 ರೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.


ಮುಂಗಾರು ನೀರಾವರಿ ಭತ್ತ ಹಾಗೂ ಮುಂಗಾರು ಮಳೆಯಾಶ್ರಿತ ಶೇಂಗಾ, ತೊಗರಿ ಪೂರ್ಣ ಬೆಳೆ, ಮುಸುಕಿನ ಜೋಳ, ನವಣೆ ಮತ್ತು ಸಜ್ಜೆ ಬೆಳೆಗಳನ್ನು ಕೃಷಿ ಪ್ರಶಸ್ತಿ ಯೋಜನೆಯಡಿ ರಾಜ್ಯ, ಜಿಲ್ಲಾ, ತಾಲ್ಲೂಕು ಮಟ್ಟದ ಬೆಳೆ ಸ್ಪರ್ಧೆಗೆ ಆಯ್ಕೆ ಮಾಡಲಾಗಿರುತ್ತದೆ.

ಈ ಹಿಂದೆ ಕೃಷಿ ಪ್ರಶಸ್ತಿ ಪಡೆದವರು ಮತ್ತೆ ಸ್ಪರ್ಧಿಸುವಂತಿಲ್ಲ. ಕೇಂದ್ರ ಅಥವಾ ರಾಜ್ಯ ಸರ್ಕಾರಿ ಸೇವಯಲ್ಲಿರುವ ಯಾವುದೇ ಇಲಾಖೆ, ವಿಶ್ವವಿದ್ಯಾಲಯ, ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ನೌಕರರು ಮತ್ತು ಅವರ ಕುಟುಂಬದ ಸದಸ್ಯರು ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ. ಆದರೆ ಕೃಷಿ ಮತ್ತು ಕೃಷಿ ಸಂಬಂಧಿತವಾದ ಜಲಾನಯನ ಅಭಿವೃದ್ದಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ ಮತ್ತು ಪಶು ವೈದ್ಯಕೀಯ ಇಲಾಖೆ, ವಿಶ್ವವಿದ್ಯಾಲಯ, ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ತಾಂತ್ರಿಕ ಹುದ್ದೆಗಳಲ್ಲಿ ಕೆಲಸ ನಿರ್ವಹಿಸಿ ನಿವೃತ್ತರಾದ ನೌಕರರು ಮತ್ತು ಅವರ ಕುಟುಂಬವರ್ಗದವರನ್ನು ಹೊರತುಪಡಿಸಿ ಈ ಇಲಾಖೆಗಳಲ್ಲಿನ ನಿವೃತ ತಾಂತ್ರಿಕೇತರ ನೌಕರರು ಮತ್ತು ಈ ಇಲಾಖೆಗಳನ್ನು ಹೊರತುಪಡಿಸಿ ಉಳಿದ ಇಲಾಖೆಗಳ ನಿವೃತ್ತ ನೌಕರರು ಮತ್ತು ಅವರ ಕುಟುಂಬದವರು ಭಾಗವಹಿಸಬಹುದಾಗಿದೆ ಎಂದು ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೈಮಗ್ಗ ನೇಕಾರರ ಏಳ್ಗೆಗಾಗಿ ಶ್ರಮಿಸಿದ್ದ ಬಾಂಗಿ

ರಬಕವಿ ಬನಹಟ್ಟಿ, : ದಿ. ಪಿ.ಎಂ. ಬಾಂಗಿಯವರು ನೇಕಾರರ ಜೀವಾಳವಾಗಿದ್ದರು. ಕೈಮಗ್ಗ ನೇಕಾರರ ಅಭಿವೃದ್ಧಿಗಾಗಿ ತಮ್ಮ ಜೀವನವನ್ನೆ ಮುಡಿಪಾಗಿಟ್ಟಿದ್ದರು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಜಮಖಂಡಿಯ ಶಾಸಕರಾಗಿದ್ದ ದಿ. ಪಿ.ಎಂ. ಬಾಂಗಿಯವರ 42ನೇ ಪುಣ್ಯ ಸ್ಮರಣೋತ್ಸವದ ಅಂಗವಾಗಿ ಕೆಎಚ್‌ಡಿಸಿ ಕಾಲೊನಿಯಲ್ಲಿನ ಅವರ ಪುತ್ಥಳಿಗೆ ಪೂಜೆ ಸಲ್ಲಿಸಿ ಮಾತನಾಡಿದರು. ಕ ' - ಎಚ್‌ಡಿಸಿ ನಿಗಮವನ್ನು ಉಳಿಸುವ ನಿಟ್ಟಿನಲ್ಲಿ ಸರ್ಕಾರದ ಗಮನವನ್ನು ಸೆಳೆಯುತ್ತೇನೆ. ಈ ಕುರಿತು ಅಧಿವೇಶನದಲ್ಲಿ ಚರ್ಚೆ ಮಾಡಲಾಗುವುದು. ದಿ.ಬಾಂಗಿಯವರು ಸಾಮಾಜಿಕ ಕಳಕಳಿಯ ಶಾಸಕರಾಗಿದ್ದುಕೊಂಡು ಜಮಖಂಡಿ ಮತಕ್ಷೇತ್ರದ ಅಭಿವೃದ್ಧಿಗಾಗಿ ಸಾಕಷ್ಟು ಶ್ರಮಿಸಿದ್ದರು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು. ಆಕಾಶವಾಣಿ ಧಾರವಾಡ ಕೇಂದ್ರದ ನಿವೃತ್ತ ಅಧಿಕಾರಿ ಚಾಮರಾಜ ಬಾಂಗಿ ಮಾತನಾಡಿ, ಪಿ.ಎಂ. ಬಾಂಗಿಯವರು ಕೈಮಗ್ಗ ವೃತ್ತಿಯನ್ನು ಬೆಳೆಸುವ ನಿಟ್ಟಿನಲ್ಲಿ ರಾಜ್ಯದಲ್ಲಿ ಕೆಎಚ್‌ಡಿಸಿ ನಿಗಮವನ್ನು ಸ್ಥಾಪಿಸಿದರು. ಅವರ ಪ್ರಯತ್ನದಿಂದಾಗಿ ಇಲ್ಲಿಯವರೆಗೂ ರಾಜ್ಯದಲ್ಲಿ ಕೈಮಗ್ಗ ನೇಕಾರರು ಉಳಿದುಕೊಂಡು ಬಂದಿದ್ದಾರೆ. ಬಾಂಗಿಯವರು 1970ರ ದಶಕದಲ್ಲಿ ಉಂಟಾದ ಬರಗಾಲದ ಸಂದರ್ಭದಲ್ಲಿಇಲ್ಲಿಯ ಜನರಿಗೆ ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಬೆಳೆಗಳಿಗೆ ನೀರಿನ ಅನುಕೂಲವಾಗುವ ನಿಟ್ಟಿನಲ್ಲಿ ಬನಹಟ್ಟಿ ಹತ್ತಿರದಲ್ಲಿ ಬೃಹತ್ ಕೆರೆ ನಿರ್ಮಾಣ ಮಾಡಿದ್ದು ಬಾಂಗಿಯವರು. ಅವರು ಜಾರಿಗೆ ತಂದ ಯೋಜನೆಗಳು ಇಂದಿಗೂ ಉಳಿದುಕೊಂಡು ಬಂದಿವೆ ಎಂದರು.




ಮುಖಂಡರಾದ ಭೀಮಶಿ ಮಗುದಮ್, ಬಸವರಾಜ ಕೊಕಟನೂರ, ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ಅಧ್ಯಕ್ಷ ಶಿವಲಿಂಗ ಟಿರಕಿ, ರಾಜು ಹೂಗಾರ, ಶಂಕರ ಕುರಂದವಾಡ, ಸದಾಶಿವ ಗೋಂದಕರ, ಮಹಾದೇವ ಹುನ್ನೂರ, ರುದ್ರೇಶ ಶೆಟ್ಟೆಪ್ಪನವರ, ಶಿವಪ್ಪ ಬುದ್ನಿ ಸೇರಿದಂತೆ ಕೆಎಚ್‌ಡಿಸಿಯ ನೇಕಾರ ಬಾಂಧವರು ಇದ್ದರು.

## ತಂತ್ರಾಂಶದ ನಿರ್ವಹಣೆ: ಕೊಪ್ಪಳ ಜೆಸ್ಕಾಂ ವಿಭಾಗದ ಆನ್‌ಲೈನ್ & ಆಫ್‌ಲೈನ್ ಸೇವೆಯಲ್ಲಿ ವ್ಯತ್ಯಯ

ಕೊಪ್ಪಳ : ಕೊಪ್ಪಳ ಜೆಸ್ಕಾಂ ವಿಭಾಗದ ವ್ಯಾಪ್ತಿಯಲ್ಲಿ ಆರ್.ಎ.ಪಿ.ಡಿ.ಆರ್.ಪಿ (ಐಪಿಡಿಎಸ್) ತಂತ್ರಾಂಶದ ನಿರ್ವಹಣೆಯ ನಿಮಿತ್ಯ ಜು. 25ರ ರಾತ್ರಿ 8.30 ಗಂಟೆಯಿಂದ ಜು. 27ರ ರಾತ್ರಿ 10 ಗಂಟೆಯವರೆಗೆ ಆನ್‌ಲೈನ್ ಮತ್ತು ಆಫ್‌ಲೈನ್ ಸೇವೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಾದ ಮೋಟ್ಲಾ ನಾಯ್ಕ್ ಅವರು ತಿಳಿಸಿದ್ದಾರೆ. ಕೊಪ್ಪಳ ಜೆಸ್ಕಾಂ ವಿಭಾಗದ ವ್ಯಾಪ್ತಿಯಲ್ಲಿ ಜು. 25ರ ರಾತ್ರಿ 8.30 ಗಂಟೆಯಿಂದ ಜು. 27ರ ರಾತ್ರಿ 10 ಗಂಟೆಯವರೆಗೆ ಆರ್.ಎ.ಪಿ.ಡಿ.ಆರ್.ಪಿ (ಐಪಿಡಿಎಸ್), ತಂತ್ರಾಂಶದ ನಿರ್ವಹಣೆಯ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುತ್ತಿರುವುದರಿಂದ ಈ ಅವಧಿಯಲ್ಲಿ ಜೆಸ್ಕಾಂ ಇಲಾಖೆಯ ಆನ್‌ಲೈನ್, ಆಫ್‌ಲೈನ್ ಸೇವೆಗಳಾದ ವಿದ್ಯುತ್ ಬಿಲ್ ಭರಿಸುವುದು, ಹೊಸ ಅರ್ಜಿಗಳ ನೋಂದಣಿ ಮತ್ತು ಇತರೆ ಆನ್‌ಲೈನ್ ಸೇವೆಗಳಲ್ಲಿ ವ್ಯತ್ಯಯ ಉಂಟಾಗಲಿದ್ದು, ಕೊಪ್ಪಳ ಮತ್ತು ಭಾಗ್ಯನಗರ ವ್ಯಾಪ್ತಿಯ ಗ್ರಾಹಕರು ಸಹಕರಿಸಬೇಕೆಂದು ಈ ಮೂಲಕ ಕೋರಲಾಗಿರುತ್ತದೆ.

# ಹಡಪದ ಅಪ್ಪಣ್ಣ ಜಯಂತಿ : ಬಲಿಷ್ಠ ಸಮಾಜದ ನಿರ್ಮಾಣಕ್ಕೆ ಶಿಕ್ಷಣ ಬಹಳ ಮುಖ್ಯ- ಅಮ್ಜದ್ ಪಟೇಲ್




ಕೊಪ್ಪಳ : ಒಂದು ಸಮಾಜ ಬಲಿಷ್ಠವಾಗಿ ಬೆಳೆಯಲು ಶಿಕ್ಷಣ ಎಂಬುದು ಬಹಳ ಮುಖ್ಯವಾಗಿದ್ದು, ಮಕ್ಕಳನ್ನು ಉತ್ತಮ ಶಿಕ್ಷಣವಂತರನ್ನಾಗಿಸಿ ಸಮಾದಲ್ಲಿ ಅವರನ್ನು ಉನ್ನತ ಮಟ್ಟದಲ್ಲಿ ಬೆಳೆಸಬೇಕು ಎಂದು ಕೊಪ್ಪಳ ನಗರ ಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಹೇಳಿದರು.

ಅವರು ಸೋಮವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಡಪದ ಅಪ್ಪಣ್ಣ ನವರು 12ನೇ ಶತಮಾನದ ಬಸವಣ್ಣನವರ ಜೊತೆಯಲ್ಲಿ ಅವರ ಆತ್ಮಿಯ ಸಹಾಯಕರಾಗಿ ಅವರೊಂದಿಗೆ ಸೇರಿ ಜಾತಿ ಬೇದ ಹಾಗೂ ಮೌಢ್ಯತೆಗಳನ್ನ ತೊಡೆದುಹಾಕಲು ಹೋರಾಡಿದ್ದರು. ಎಲ್ಲಾ ಜಾತಿ ಧರ್ಮಗಳಿಗೆ ಸಮಾನತೆ ಕೊಡಲು ಸಹ ಹಗಳಿರುಳು ಶ್ರಮಿಸಿ, ಹಡಪದ ಸಮಾಜವನ್ನು ಒಂದು ಬಲಿಷ್ಠ ಸಮಾಜವನ್ನಾಗಿಸಿದ್ದಾರೆ. ತಮ್ಮ ವಚನಗಳ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದಲು ಶ್ರಮಿಸಿದ್ದರು. ಅವರು ಹಾಕಿಕೊಟ್ಟಿರು ಹಾದಿಯಲ್ಲಿ ನಾವೂ ಕೂಡ ಸಾಗಬೇಕಾಗಿದೆ. ನಮ್ಮ ಮಕ್ಕಳಿಗೆ ಬಸವಣ್ಣನವರ ಮತ್ತು ಹಡಪದ ಅಪ್ಪಣ್ಣನವರ ಚಿಂತನೆಗಳನ್ನು ಕಲಿಸಿ ಅವರನ್ನು ಈ ಸಮಾಜಕ್ಕೆ ಒಂದು ಒಳ್ಳೆ ನಾಗರಿಕರನ್ನಾಗಿ ಮಾಡಬೇಕು ಎಂದರು.

ಈ ವಿಶ್ವದಲ್ಲಿ ಅನೇಕ ರಾಷ್ಟ್ರಗಳು ಒಂದೆ ಧರ್ಮಕ್ಕೆ ಸಿಮಿತವಾಗಿರುವುದನ್ನು ನಾವೂ ಕಾಣುತ್ತೇವೆ. ಆದರೆ, ಸಾವಿರಾರು ಧರ್ಮ, ಜಾತಿಗಳನ್ನು ಹೊಂದಿರುವ ನಮ್ಮ ದೇಶದಲ್ಲಿ ಸಹೋದರತ್ವದ ಗುಣಗಳು ನೋಡಲು ಸಿಗುತ್ತವೆ ಅಂದರೆ ಅದಕ್ಕೆ ಮುಖ್ಯ ಕಾರಣ ಬಸವಣ್ಣನವರು ಮತ್ತು ಹಡಪದ ಅಪ್ಪಣ್ಣನವರು ಎನ್ನುವುದನ್ನು ನಾವು ಮರೆಯಲಾಗದು. ಇಂತಹ ಮಹನಿಯರ ಹಾದಿಯಲ್ಲಿ ಎಲ್ಲರೂ ಸಾಗಬೇಕು. ಯಾವುದೇ ಭೇದವಿಲ್ಲದೆ ಎಲ್ಲರೂ ಅನ್ಯೋನ್ಯವಾಗಿ ಬಾಳಬೇಕು. ಒಗ್ಗಟ್ಟಿನಿಂದ ಮುನ್ನೆಡೆದರೆ ಎಲ್ಲರೂ ಆ ಸಮಾಜವನ್ನ ಗೌರವದಿಂದ ಕಾಣುತ್ತಾರೆ. ಹಡಪದ ಅಪ್ಪಣ್ಣನವರು ಯಾವ ರೀತಿಯಲ್ಲಿ ತುಳಿತಕ್ಕೆ ಒಳಗಾದವರನ್ನು ಮೇಲಕ್ಕೆ ಎತ್ತುವ ಕೆಲಸ ಮಾಡಿದರು, ಅವರ ಹಾದಿಯಲ್ಲಿ ನಾವೆಲ್ಲರೂ ಸಮಾಜದಲ್ಲಿ ತುಳಿತಕ್ಕೊಳಗಾದವರನ್ನು ಮುಖ್ಯವಾಹಿನಿಗೆ ಕರೆತರುವಂತಹ ಕೆಲಸ ಮಾಡಿದರೆ, ಸಮಾಜವು ಬಲಿಷ್ಠವಾಗುತ್ತದೆ. ಹಾಗಾಗಿ ನಾವು ನೀವೆಲ್ಲರೂ ಬಸವಣ್ಣ ಮತ್ತು ಹಡಪದ ಅಪ್ಪಣ್ಣನವರ ಹಾದಿಯಲ್ಲಿ ನಡೆಯೋಣ ಎಂದು ಹೇಳಿದರು.

ಕೊಪ್ಪಳದ ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ ಅವರು ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಹಡಪದ ಅಪ್ಪಣ್ಣನವರು ಬಸವಣ್ಣನವರ ಕಾಲದಲ್ಲಿ ಬಹಳ ಪ್ರಸಿದ್ದಿಯನ್ನು ಪಡೆದ ಶರಣರಾಗಿದ್ದರು. ವಿಶ್ವದ ಮೊದಲ ಸಂಸತ್ತು ಎಂದು ಕರೆಯಲ್ಪಡುವ ಬಸವಣ್ಣನವರು ಸ್ಥಾಪಿಸಿದ ಅನುಭವ ಮಂಟಪದಲ್ಲಿ ಹಡಪದ ಅಪ್ಪಣ್ಣನವರು ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ಮಾಡಿದವರು ಎಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಅಂದಿನ ಕಾಲದಲ್ಲಿ ಹಳ್ಳಿಗಳಲ್ಲಿ ಹಡಪದ ಅಪ್ಪಣ್ಣನವರ ಮೂಖ ನೋಡಬಾರದು ಎನ್ನುವ ವದಂತಿಯು ಹರಿದಾಡುತಿತ್ತು, ಹಾಗಾಗಿ ಬಸವಣ್ಣನವರು ನನ್ನ ನೋಡಲು ಬರುವವರು ಮೊದಲು ಹಡಪದ ಅಪ್ಪಣ್ಣನವರ ಮುಖ ನೋಡಿಕೋಂಡು ಬರುವಂತೆ ಆದೇಶಿಸಿದ್ದರು. ಬಸವಣ್ಣನವರಿಗೆ ಅಪ್ಪಣ್ಣನವರು ಬಹಳಷ್ಟು ಆತ್ಮಿಯವಾಗಿದ್ದರು. ಅಪ್ಪಣ್ಣನವರು 250ಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದು, ಅವರು ಪ್ರತಿಯೊಂದು ವನಚನಗಳಲ್ಲಿ ವಿಭಿನ್ನವಾದ ಸಂದೇಶಗಳನ್ನು ಕೊಟ್ಟಿದ್ದಾರೆ. ಈ ದಿನ ನಾವು ನಮ್ಮ ಮಕ್ಕಳಿಗೆ ಹಡಪದ ಅಪ್ಪಣ್ಣನವರ ಜೀವನ ಸಾರಾಂಶವನ್ನ ತಿಳಿಸಿಕೊಡಬೇಕು ಮತ್ತು ಅವರಂತೆ ಪ್ರಮಾಣಿಕವಾಗಿ ನಮ್ಮ ಕೆಲಸದಲ್ಲಿ ಅವರನ್ನು ಕಾಣಬೇಕು ಎಂದು ಹೇಳಿದರು.



ಗಂಗಾವತಿಯ ಶ್ರೀ ಕೊಲ್ಲಿ ನಾಗೇಶ್ವರ ರಾವ್ ಗಂಗಯ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಮುಮ್ತಾಜ್ ಬೇಗಂ ಅವರು ಹಡಪದ ಅಪ್ಪಣ್ಣನವರ ಕುರಿತು ವಿಶೇಷ ಉಪನ್ಯಾಸ ನೀಡಿ, ಮಾನವ ಚರಿತ್ರೆಯಲ್ಲಿ 12ನೇ ಶತಮಾನವು ಸುವರ್ಣ ಅಕ್ಷರಗಳಲ್ಲಿ ಬರೆದಿಡುವ ಕಾಲವಾಗಿದೆ. ಆ ಕಾಲದಲ್ಲೇ ಬಸವಣ್ಣನವರೊಂದಿಗೆ ಹಡಪದ ಅಪ್ಪಣ್ಣನವರು ಸಮ ಸಮಾಜದ ನಿರ್ಮಾಣಕ್ಕಾಗಿ ದುಡಿದಿದ್ದರು. ಜಾತಿರಹಿತ ಸಮಾಜ ನಿರ್ಮಾಣಕ್ಕೆ ಕರೆ ಕೊಟ್ಟಿದ್ದರು. ಇಂದು ಅಂತಹ ಅಪ್ಪಣ್ಣನವರ ಕುರಿತಾದ ಅಧ್ಯಯನಗಳು ಕಡಿಮೆಯಾಗಿವೆ. ಅವರ ತತ್ವ ಮತ್ತು ಚಿಂತನೆಗಳ ಬಗ್ಗೆ ಹೆಚ್ಚಾಗಿ ಅಧ್ಯಯನಗಳು ಆಗಬೇಕು. ಇದರಿಂದ ಹಡಪದ ಅಪ್ಪಣ್ಣನವರ ಬಗ್ಗೆ ಯುವಜನತೆಗೆ ಇನ್ನೂ ಹೆಚ್ಚಾಗಿ ತಿಳಿಯಲು ಸಹಾಯವಾಗುತ್ತದೆ ಎಂದರು.

ಹಡಪದ ಅಪ್ಪಣ್ಣನವರ 250ಕ್ಕೂ ಹೆಚ್ಚು ವಚನಗಳು ದೊರೆತಿವೆ. ಅವರು ಹೆಚ್ಚಾಗಿ ಬೆಳಗಿನ ವಚನಗಳನ್ನು ರಚಿಸಿದ್ದಾರೆ. ಅವರ ವಚನಗಳ ತಾತ್ವಿಕತೆಯ ಹಿನ್ನೆಲೆಯಲ್ಲಿ ಅಪ್ಪಣ್ಣನವರನ್ನು ಅರ್ಥೈಸಿಕೊಲ್ಲಬೇಕು. ಅವರು ವೈಚಾರಿಕ ಪ್ರಜ್ಞೆಯುಳ್ಳವರಾಗಿದ್ದರು. ಸಮಾಜವು ಉತ್ತಮ ರೀತಿಯಲ್ಲಿ ಅಭಿವೃದ್ಧಿ ಹೊಂದಲು ವೈಚಾರಿಕ ಪ್ರಜ್ಞೆ ಬಹಳ ಮುಖ್ಯ, ಹಾಗಾಗಿ ಅಪ್ಪಣ್ಣನವರ ವಚನಗಳನ್ನು ಹೆಚ್ಚಾಗಿ ಓದಬೇಕು ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಕೊಪ್ಪಳ ನಗರಸಭೆಯ ಆಯುಕ್ತರಾದ ಸುರೇಶ ಬಬಲಾದಿ, ತಾಲ್ಲೂಕು ಪಂಚಾಯತ ಸಹಾಯಕ ನಿರ್ದೇಶಕ ಮಹೇಶ್ ಹಡಪದ, ಕೊಪ್ಪಳ ನಗರಸಭೆ ಸದಸ್ಯರಾದ ಬಸವಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಶಂಕರ್ ಮಾಮನಿ, ಮುತ್ತಣ್ಣ ಚಲವಾದಿ ಹಾಗೂ ಹಡಪದ ಸಮಾಜದ ಮುಖಂಡರಾದ ಹನುಮಂತಪ್ಪ ಸರಿಗಮ, ಈಶಪ್ಪ ಮುದ್ದಬಳ್ಳಿ, ಅಂದಪ್ಪ, ಬಸವರಾಜ, ಗವಿಸಿದ್ದಪ್ಪ ಮಾದಿನೂರ, ಮೌನೇಶ ಹಡಪದ, ಶಿವಕುಮಾರ ಕಾರಟಗಿ, ಮುತ್ತಣ್ಣ ಮಾದಿನೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮಹಿಳಾ ಅಭಿವೃದ್ಧಿ ನಿಗಮ: ಪ್ರಗತಿ ಪರಿಶೀಲನಾ ಸಭೆ

# ಶೀಘ್ರದಲ್ಲಿಯೇ 1 ಲಕ್ಷವರೆಗೆ ಕಿರು ಸಾಲ ಸೌಲಭ್ಯ : ಜಿ.ಪದ್ಮಾವತಿ



ಬಾಗಲಕೋಟೆ: : ಮಹಿಳೆಯರ ಆರ್ಥಿಕ ಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮಹಿಳಾ ಅಭಿವೃದ್ಧಿ ನಿಗಮದಿಂದ ಶೀಘ್ರದಲ್ಲಿಯೇ 1 ಲಕ್ಷ ರೂ.ಗಳವರೆಗೆ ಕಿರು ಸಾಲ ಸೌಲಭ್ಯವನ್ನು ಪ್ರಾರಂಭಿಸಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಅಬಿವೃದ್ದಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಹೇಳಿದರು. ಜಿಲ್ಲಾ ಪಂಚಾಯತ ಸಭಾಭವದಲ್ಲಿ ಮಂಗಳವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಅಭಿವೃದ್ಧಿ ನಿಗಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷೆ ವಹಿಸಿ ಮಾತನಾಡಿದ ಅವರು ಸರಕಾರ ಮಹಿಳಾ ಸಬಲೀಕರಣ–ಕ್ಕಾಗಿ ಅನೇಕ ಯೋಜನೆಗಳನ್ನು ರೂಪಿಸಿದ್ದು, ಲಕ್ಷ ರೂ.ಗಳ ಕಿರು ಸಾಲ ಯೋಜನೆಯಿಂದ ಮತ್ತಷ್ಟು ಆರ್ಥಿಕವಾಗಿ ಸಬರಾಗಲು ಅನುಕೂಲವಾಗಲಿದೆ. ಮಹಿಳೆಯರು ಈ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲೆಯ ಅಧಿಕಾರಿ ವರ್ಗದ ಆಸಕ್ತಿ ಮತ್ತು ಕಾಳಜಿ ಸಕರಾತ್ಮಕವಾಗಿದ್ದು, ಮುಂದಿನ ದಿನಗಳಲ್ಲಿ ಈ ಭಾಗಕ್ಕೆ ಇನ್ನೂ ಹೆಚ್ಚಿನ ಅನುಕೂಲ ಮಾಡಿಕೊಡಲಾಗುವದೆಂದು ತಿಳಿಸಿದರು.

ಮಹಿಳೆಯರ ಸ್ವಾವಲಂಬಿ ಬದುಕು ನಡೆಸಲು ಸರಕಾರ ಹಲವು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಕರ್ನಾಟಕ ರಾಜ್ಯ ಮಹಿಳಾ ಅಬಿವೃದ್ದಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ದೇವದಾಸಿ ಪುನರ್ವಸತಿ ಯೋಜನೆಯಡಿ, ದೇವದಾಸಿಯರ ಮಕ್ಕಳ ಶಿಕ್ಷಣಕ್ಕಾಗಿ ಸಹಾಯಧನವನ್ನು ಸರ್ಕಾರ ನೀಡುತ್ತಿದೆ. ಮಾಜಿ ದೇವದಾಸಿಯರಿಗೆ ನೀಡುವ ಮಾಸಿಕ ಪಿಂಚಣಿ ಮೊತ್ತವನ್ನು 1500 ರೂ.ಗಳಿಂದ 2 ಸಾವಿರ ರೂ.ಗಳವರೆಗೆ ಹೆಚ್ಚಿಸಲಾಗಿದೆ. ಹಾಗೆಯೇ ದೇವದಾಸಿಯರ ಸಮಗ್ರ ಸಮೀಕ್ಷೆಯನ್ನು ಸರ್ಕಾರ ಕೈಗೊಳ್ಳುತ್ತಿದ್ದು, ಇದರಿಂದ ವಂಚಿತ ದೇವದಾಸಿಯರಿಗೂ ಸರಕಾರದ ಯೋಜನೆಗಳು ತಲುಪಿಸುವ ಕಾರ್ಯ ಆಗಲಿದೆ ಎಂದರು.

ದೇವದಾಸಿಯರು ಮತ್ತು ತೃತೀಯ ಲಿಂಗಿಗಳು ಯಾವುದೇ ಹಿಂಜರಿಕೆ ಇಲ್ಲದೆ ತಮ್ಮ ಹೆಸರನ್ನು ಸಂಬಂಧಪಟ್ಟ ಸಮೀಕ್ಷೆಯಲ್ಲಿ ನೋಂದಾಯಿಸಬೇಕು. ಅಂದಾಗ ಮಾತ್ರ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಅರ್ಹರಾಗುತ್ತಾರೆ. ಸಮೀಕ್ಷೆಗಳಿಂದ ಇನ್ನು ಹೆಚ್ಚಿನ ಯೋಜನೆಗಳನ್ನು ರೂಪಿಸಲು ಸಹಾಯವಾಗುತ್ತದೆ ಎಂದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಜ–ಕುಮಾರ್ ಹೂಗಾರ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳು ಸಾಕಷ್ಟಿದ್ದು, ನೀವಷ್ಟೇ ಯೋಜನೆಗಳನ್ನು ಪಡೆಯದೇ ಇತರರಿಗೂ ಅದರ ಮಾಹಿತಿ ಹಂಚಬೇಕು. ಸೂಕ್ತ ದಾಖಲೆ ಸಹಿತ ನೀವು ಒಂದು ಹೆಜ್ಜೆ ಮುಂದಿಟ್ಟರೇ ನಾವು ಕೂಡ ಒಂದು ಹೆಜ್ಜೆ ಮುಂದೆ ಬಂದು ನಿಮಗೆ ಸಾಲ ಕೊಡುತ್ತೇವೆ ಎಂದರು. ಇದೇ ಸಂದರ್ಭದಲ್ಲಿ ಉದ್ಯೋಗಿನಿ ತರಬೇತಿ ಪಡೆದ ಮಹಿಳೆಯರಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಧಾನ ವ್ಯವಸ್ಥಾಪಕರಾದ ಅಕ್ಕಮಹಾದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಕೆ.ಪ್ರಭಾಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಸುಮಲತಾ ಹಿರೇಮನಿ, ಮಂಜುನಾಥ್ ಪರಸನ್ನವರ್ ಮತ್ತು ಎಲ್ಲ ತಾಲೂಕು ಸಿಡಿಪಿಓಗಳು ಸೇ–ರಿದಂತೆ ಇತರರು ಉಪಸ್ಥಿತರಿದ್ದರು.

## ಭೂಕುಸಿತ- ಕಡಲುಕೊರೆತ ತಡೆಗೆ 800 ಕೋಟಿ ಅನುದಾನ; ಸಚಿವ ಕೃಷ್ಣ ಬೈರೇಗೌಡ



ಕಾರವಾರ : ಉತ್ತರ ಕನ್ನಡ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ಭೂಕುಸಿತ, ಕಡಲ ಕೊರೆತ ಸಮಸ್ಯೆ ಎದು–ರಿಸುತ್ತಿರುವ ಜಿಲ್ಲೆಗಳಲ್ಲಿ ತುರ್ತು ಕಾಮಗಾರಿ ಕೈಗೊಳ್ಳಲು 800 ಕೋಟಿ ಅನುದಾನಕ್ಕೆ ಶೀಘ್ರವೇ ಅನುಮೋದನೆ ನೀಡಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ತಿಳಿಸಿದರು.

ಅವರು ಮಂಗಳವಾರ ಉತ್ತರ ಕನ್ನಡ ಜಿಲ್ಲೆಯ ಭೂ ಕುಸಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕುಮಟಾದಲ್ಲಿ ಮಾತನಾಡಿ. ರಾಜ್ಯದ 6 ಜಿಲ್ಲೆಗಳಲ್ಲಿ ಭೂಕುಸಿತ ಸಮಸ್ಯೆ ತೀವ್ರವಾಗಿದ್ದು, ಈ ಭಾಗದಲ್ಲಿ ತಡೆಗೋಡೆ ನಿರ್ಮಿಸುವ ಕಾಮಗಾರಿಗಾಗಿ 500 ಕೋಟಿ ಮೀಸಲಿಡಲಾಗುತ್ತಿದೆ ಎಂದರು.

ರಾಜ್ಯದ ಕರಾವಳಿಯ ಮೂರು ಜಿಲ್ಲೆಗಳಲ್ಲಿ ಕಡಲು ಕೊರೆತ ಸಮಸ್ಯೆ ತಡೆಗೆ ಪ್ರತಿ ಜಿಲ್ಲೆಗೆ ನೂರು ಕೋಟಿಯಂತೆ 300 ಕೋಟಿ ಒದಗಿಸಲಾಗುವುದು, ತಡೆಗೋಡೆ ನಿರ್ಮಾಣ ಸೇರಿದಂತೆ ಪ್ರಕೃತಿ ವಿಕೋಪ ತಡೆಗೆ ಕೇಂದ್ರ ಸರ್ಕಾರದ ಹಣಕಾಸು ಇಲಾಖೆಯಿಂದ ಅನುದಾನ ಬಿಡುಗಡೆಯಾಗಲು ವಿಳಂಬವಾಗಿದೆ. ಈ ಕುರಿತಂತೆ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ. ಕೇಂದ್ರದ ಅನುದಾನ ಬಿಡುಗಡೆ ವಿಳಂಬವಾಗಿರುವುದ–ರಿಂದ ತಡೆಗೋಡೆ ಹಾಗೂ ಪ್ರಕೃತಿ ವಿಕೋಪದ ಕಾಮಗಾರಿ ನಡೆಸಲು ವಿಳಂಬವಾಗಿದೆ ಎಂದರು. ಉತ್ತರ ಕನ್ನಡ ಜಿಲ್ಲೆಯಲ್ಲಿನ 136 ಕ್ಕೂ ಹೆಚ್ಚು ಮಳೆಮಾಪನ ಯಂತ್ರಗಳು ಹಾಳಾಗಿದೆ. ರಾಜ್ಯದ ಸುಮಾರು 1,500 ಸ್ಥಳಗಳಲ್ಲಿ ಮಳೆ ಮಾಪನ ಕೇಂದ್ರಗಳು ದುಸ್ಥಿತಿಯಲ್ಲಿವೆ. ಅವುಗಳನ್ನು ದುರಸ್ತಿ ಮಾಡಿಸುವ ಕೆಲಸ ನಡೆಯಲಿದೆ. ಯಂತ್ರಗಳು ಸಂಪೂರ್ಣ ಹಾಳಾಗಿದ್ದರೆ ಹೊಸ ಯಂತ್ರಗಳ ಅಳವಡಿಕೆ ನಡೆಯಲಿದೆ ಎಂದರು.

ಕಂದಾಯ ದಾಖಲೆಗಳನ್ನು ಗಣಕೀಕರಣ ಮಾಡಲಾಗುತ್ತಿದೆ. ಜನರಿಗೆ ದಾಖಲೆಗಳು ಸುಲಭವಾಗಿ ಸಿಗುವಂತೆ ಮಾಡಲಾಗುತ್ತಿದೆ. ಮುಂದಿನ 6 ತಿಂಗಳ ಒಳಗೆ ರಾಜ್ಯದ ಎಲ್ಲ ಕಂದಾಯ ದಾಖಲೆಗಳನ್ನು ಸಂಪೂರ್ಣ ಗಣಕೀಕರಣ ಮಾಡುವ ಗುರಿ ಹೊಂದಲಾಗಿದೆ ಎಂದ ಅವರು ರಾಜ್ಯದಲ್ಲಿ ಪೌತಿ ಖಾತೆ ಆಂದೋಲನ ನಡೆಸಲಾಗುತ್ತಿದ್ದು ಮೃತರ ಅಧಿಕೃತ ವಾರಿಸುದಾರರಿಗೆ ಪಹಣಿ ದಾಖಲೆಗಳನ್ನು ವರ್ಗಾವಣೆ ಮಾಡಲಾಗುವುದು ಎಂದರು.

ಕಂದಾಯ ಸಚಿವರು ಶಿರಸಿ ತಾಲ್ಲೂಕಿನ ಬೆಣ್ಣೆಹೊಳೆ ಸೇತುವೆ, ಭೂಕುಸಿತ ಸಂಭವಿಸಿರುವ ಕುಮಟಾ ತಾಲ್ಲೂಕಿನ ದೇವಿಮನೆ ಘಟ್ಟ ಪ್ರದೇಶದಲ್ಲಿ ಪರಿಶೀಲನೆ ನಡೆಸಿದರು. ದೇವಿಮನೆ ಘಟ್ಟದಲ್ಲಿ ತಡೆಗೋಡೆ ನಿರ್ಮಿಸದೆ ಹೆದ್ದಾರಿ ಕಾಮಗಾರಿ ಕೈಗೆತ್ತಿಕೊಂಡಿದ್ದಕ್ಕೆ ಆರ್.ಎನ್.ಎಸ್ ಇನ್‌ಫ್ರಾಸ್ಟ್ರಕ್ಚರ್ ಕಂಪನಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಕಳೆದ ಬಾರಿ ಶಿರೂರಿನಲ್ಲಿ ಭೂ ಕುಸಿತ ಉಂಟಾಗಿ ಗಂಗಾವಳಿ ನದಿಗೆ ಬಿದ್ದ ಮಣ್ಣನ್ನು ಡ್ರೆಜಿಂಗ್ ಮಾಡಲು ರೂ.2 ಕೋಟಿ ವೆಚ್ಚದಲ್ಲಿ ಮರು ಟೆಂಡರ್ ಕರೆಯಲಾಗಿದ್ದು, ನದಿಯ ನೀರಿನ ಮಟ್ಟ ಕಡಿಮೆಯಾದ ನಂತರ ಡ್ರೆಜಿಂಗ್ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲ ಸಾರಿಗೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್ ವೈದ್ಯ, ಎಂಸಿಎ ಅಧ್ಯಕ್ಷ ಹಾಗೂ ಶಾಸಕ ಸತೀಶ್ ಕೆ ಸೈಲ್, ಶಾಸಕರಾದ ಭೀಮಣ್ಣ ನಾಯ್ಕ, ದಿನಕರ ಶೆಟ್ಟಿ, ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಮತ್ತಿತರರು ಉಪಸ್ಥಿತರಿದ್ದರು.

## ಕಾರ್ಮಿಕರ ರಾಜ್ಯ ವಿಮಾ ನಿಗಮ ನವೀಕೃತ ಯೋಜನೆ : ನೋಂದಣಿಗೆ ಅವಕಾಶ

ವಿಜಯಪುರ ಕಾರ್ಮಿಕರ ರಾಜ್ಯ ವಿಮಾ ನಿಗಮವು ಕಾರ್ಮಿಕರ ಕಲ್ಯಾಣಕ್ಕಾಗಿ ಖಕಖಇಇ 2025–ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣೀಯನ್ನು ಉತ್ತೇಜಿಸುವ ಯೋಜನೆ–2025 ಎಂಬ ನವೀಕೃತ ಯೋಜನೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಡಿಸೆಂಬರ್ 31ರವರೆಗೆ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಕಾರ್ಮಿಕರ ರಾಜ್ಯ ವಿಮಾ ನಿಗಮದ ಜಿಲ್ಲಾ ಶಾಖಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂಗಡಿಗಳು, ಹೋಟೆಲ್ ಮತ್ತು ರೆಸ್ಟೋರೆಂಟ್ಗಳು, ಸಿನೆಮಾ ಹಾಲ್, ರಸ್ತೆ ಸಾರಿಗೆ ಘಟಕಗಳು, ವಾರ್ತಾಪತ್ರಿಕಾ ಘಟಕಗಳು, ಖಾಸಗಿ ವೈದ್ಯಕೀಯ ಸಂಸ್ಥೆಗಳು. ವಿದ್ಯಾ ಸಂಸ್ಥೆಗಳು ಮತ್ತು ಮುನ್ಸಿಪಲ್ ಕಾರ್ಪೊರೇಷನ್ ಗಳಲ್ಲಿ ಕಾರ್ಯನಿರ್ವಹಿಸುವ ಗುತ್ತಿಗೆ ಕಾರ್ಮಿಕರು ಹಾಗೂ ತಾತ್ಕಾಲಿಕ, ಸಾಂಧರ್ಭಿಕ ಗುತ್ತಿಗೆ ಕಾರ್ಮಿಕರನ್ನು ಒಳಗೊಂಡಂತೆ ಕಾರ್ಯನಿರತ ಅರ್ಹ ಉದ್ಯೋಗಸ್ಥರು ನೋಂದಾಯಿಸಿಕೊಳ್ಳಲು ಅವಕಾಶವಿರುತ್ತದೆ.

ಒಂದು ಬಾರಿನೋಂದಾಯಿಸಿಕೊಂಡರೆ, ನೋಂದಣಿಯಾದ ದಿನಾಂಕದಿಂದ ಉದ್ಯೋಗಿಗಳು ಹಾಗೂ ಅವರ ಕುಟುಂಬದ ಸದಸ್ಯರುಗಳಿಗೆ ವೈದ್ಯಕೀಯ ಸೌಲಭ್ಯಗಳಾದ ಅನಾರೋಗ್ಯ, ಪ್ರಸವ (ಹೆರಿಗೆ), ಅಪಘಾತ ಹಾಗೂ ಉದ್ಯೋಗದ ಸಂದರ್ಭದಲ್ಲಿ ಉದ್ಯೋಗಿಗಳು ಮರಣ ಹೊಂದಿದ್ದರೆ, ನಗದು ಸೌಲಭ್ಯ ಸೇರಿದ್ದಂತೆ ಇಎಸ್ಐ ಕಾಯ್ದೆ 1948 ರ ಅಡಿಯಲ್ಲಿ ಧೀರ್ಘಾವಧಿ ಭದ್ರತೆಯ ರಕ್ಷಣೆಯು ಕಾರ್ಮಿಕರಿಗೆ ದೊರೆಯುತ್ತದೆ.

ಖಕಖಇಇ 2025 ಅಡಿಯಲ್ಲಿ ನೋಂದಣಿಯನ್ನು ಉದ್ಯೋಗದಾತರು ಇಖಖಅ : **https://www.esic.gov.in** ಪೋರ್ಟಲ್ ಹಾಗೂ ಶ್ರಮ್ ಸುವಿಧಾ **https://registration.shramsuvidha.gov.in/user/register** ಪೋರ್ಟಲ್‌ನಲ್ಲೂ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಈ ಕುರಿತು ಸಹಾಯಕ್ಕಾಗಿ **https://portal.esic.gov.in/ ºÁUÀÆ https://www.esic.gov.in/** ಸಂಪರ್ಕಿಸಬ ಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಇಂದಿನಿಂದ ಆ.2 ರವರೆಗೆ ಜಿಲ್ಲೆಯಲ್ಲಿ ಇ-ಪೌತಿ ಆಂದೋಲನ

### ಉಚಿತವಾಗಿ ಪೌತಿ ಖಾತೆ ಬದಲಾವಣೆಗೆ ಅವಕಾಶ; ಸದುಪಯೋಗ ಪಡಿಸಿಕೊಳ್ಳಲು ಸಾರ್ವಜನಿಕರಲ್ಲಿ ಜಿಲ್ಲಾಧಿಕಾರಿ ಮನವಿ

ಧಾರವಾಡ : ಪಹಣಿಗಳಿಗೆ ಆದ–ಾರ ಜೋಡಣೆ ಸಂದರ್ಭದಲ್ಲಿ ಜಿಲ್ಲೆಯ ಸಾವಿರಾರು ಖಾತೆಗಳಲ್ಲಿ ವಾರಸುದಾರರ ಪೌತಿ ಎಂದು ಗುರುತಿಸಲಾದ ಜಮೀನುಗಳ ಪಹಣಿಗಳನ್ನು ವಾರಸುದಾರರಿಗೆ ಉಚಿತವಾಗಿ ಖಾತೆ ಮಾಡುವ ಉದ್ದೇಶದಿಂದ ಇ–ಪೌತಿ ಅಂದೋಲನವನ್ನು ಜಿಲ್ಲೆಯಲ್ಲಿ ಆರಂಭಿಸಲಾಗಿದೆ. ಜುಲೈ 24, 2025 ರಿಂದ ಆಗಸ್ಟ್ 02, 2025 ರವರೆಗೆ 10 ದಿನಗಳ ವಿಶೇಷ ಇ–ಪೌತಿ ಆಂದೋಲನವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯ ಕಂದಾಯ ಸಚಿವರು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಇ–ಪೌತಿ ತಂತ್ರಾಂಶವನ್ನು ವಿಸ್ತರಿಸಲು ನಿರ್ದೇಶನ ನೀಡಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ಈಗಾಗಲೇ ಪಹಣಿ ಪತ್ರಿಕೆಗಳಿಗೆ ಆಧಾರ ಜೋಡಣೆ ಮಾಡುವ ಕಾರ್ಯ ಪ್ರಗತಿಯಲ್ಲಿದ್ದು, ಸದರಿ ಕಾರ್ಯದಲ್ಲಿ ಈವರೆಗೂ ಶೇ. 87.33 ರಷ್ಟು ಪ್ರಗತಿಯನ್ನು ಸಾಧಿಸಲಾಗಿತ್ತದೆ ಎಂದು ಅವರು ತಿಳಿಸಿದ್ದಾರೆ.

ಪಹಣಿ ಪತ್ರಿಕೆಗಳಿಗೆ ಆಧಾರ ಜೋಡಣೆ ಮಾಡುವ ಅವಧಿಯಲ್ಲಿ ಪೌತಿ ಎಂದು ಗುರುತಿಸಲಾದ ಜಮೀನುಗಳ ಪಹಣಿಗಳನ್ನು ಇ–ಪೌತಿ ತಂತ್ರಾಂಶದ ಮೂಲಕ ವಾರಸುದಾರರಿಗೆ ಖಾತೆ ಬದಲಾವಣೆ ಮಾಡಲು ಸಂಬಂಧಿಸಿದ ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳ ಕಛೇರಿಗಳಲ್ಲಿ ಜುಲೈ 24, 2025 ರಿಂದ ಆಗಸ್ಟ್ 02, 2025 ರವರೆಗೆ 10 ದಿನಗಳ ವಿಶೇಷ ಇ–ಪೌತಿ ಆಂದೋಲನವನ್ನು ಆಯೋಜಿಸಲಾಗಿದೆ ಎಂದು ಹೇಳಿದ್ದಾರೆ.




ವಿಶೇಷ ಇ–ಪೌತಿ ಆಂದೋಲನದ ಸಂದರ್ಭದಲ್ಲಿ ಪೌತಿ ಅಂತಾ ಗುರುತಿಸಲಾದ ಪಹಣಿ ಪತ್ರಿಕೆಗಳ ಇ–ಪೌತಿ ಕಾರ್ಯಕ್ಕೆ ಅವಶ್ಯಕ ದಾಖಲೆಗಳೊಂದಿಗೆ ಸಾರ್ವಜನಿಕರು ಸಂಬಂಧಿಸಿದ ಗ್ರಾಮ ಆಡಳಿತ ಅಧಿಕಾ–ರಿಗಳ ಕಛೇರಿಯಲ್ಲಿ ಅರ್ಜಿಯನ್ನು ಸಲ್ಲಿಸಿ, ಉಚಿತವಾಗಿ ಖಾತೆ ಬದಲಾವಣೆ ಮಾಡಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಇ–ಪೌತಿ ಖಾತೆ ಅಂದೋಲನಕ್ಕೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ ಅಥವಾ ಅಗತ್ಯ ದಾಖಲಾತಿಗಳ ಮಾಹಿತಿಗಾಗಿ ಧಾರವಾಡ ಜಿಲ್ಲಾಧಿಕಾ–ರಿಗಳ ಕಾರ್ಯಾಲಯ ದೂರವಾಣಿ ಸಂಖ್ಯೆ: 0836–2445508, ಧಾರವಾಡ ಉಪವಿಭಾಗಾಧಿಕಾ–ರಿಗಳ ಕಾರ್ಯಾಲಯ ದೂರವಾಣಿ ಸಂಖ್ಯೆ: 0836–2233860, ಧಾರವಾಡ ತಹಶೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ: 0836–2233822, ಅಳ್ನಾವರ ತಹಶೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ: 0836–2385544, ಹುಬ್ಬಳ್ಳಿ ನಗರ ತಹಶೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ: 0836–2358035, ಹುಬ್ಬಳ್ಳಿ ತಹಶೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ: 0836–2233844, ಕಲಘಟಗಿ ತಹಶೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ: 08370–284535, ಕುಂದಗೋಳ ತಹಶೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ: 08304–290239, ನವಲಗುಂದ ತಹಶೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ: 08380–229240, ಅಣ್ಣಿಗೇರಿ ತಹಶೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ: 8618442759 ಗೆ ಸಂಪರ್ಕಿಸಬಹುದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ಲಾಟ ಕೊಡದ ಧಾರವಾಡದ ಸ್ವರ್ಣ ಡವಲಪರ್ಸ್‌ಗೆ ದಂಡ ವಿಧಿಸಿ ಮತ್ತು ಪರಿಹಾರಕ್ಕೆ ಆದೇಶ

ಧಾರವಾಡ : ಬೆಂಗಳೂರಿನ ಮಾರುತಿ ನಗರದ ನಿವಾಸಿ ಸರೋಜಾ ಸಂಪಗಾಂವ ಅವರ ಗಂಡ ಜೀವಿತಾ ಅವಧಿಯಲ್ಲಿ ಎದುರುದಾರರು ಧಾರವಾಡದ ಹಳಿಯಾಳ ರೋಡ್‌ನಲ್ಲಿ ಅಭಿವೃದ್ಧಿ ಪಡಿಸುತ್ತಿದ್ದ ಸ್ವರ್ಣ ಎನಕ್ಲೇವ್ ಪ್ರೋಜೆಕ್ಟ್‌ನಲ್ಲಿ ಪ್ಲಾಟನ್ನು ರೂ.7,65,000 ಖರೀದಿಸಿ ಕರಾರು ಒಪ್ಪಂದ ಮಾಡಿಕೊಂಡಿದ್ದರು. ಇದರ ಪೈಕಿ ದೂರುದಾರರು ರೂ.5,27,750 ಮುಂಗಡ ಹಣವಾಗಿ ಎದುರುದಾರ–ರಿಗೆ ಪಾವತಿಸಿರುತ್ತಾರೆ. ಆದರೆ ಎದುರುದಾರರು ಆ ಪ್ಲಾಟನ್ನು ಅಭಿವೃದ್ಧಿ ಪಡಿಸದೇ ಒಂದಿಲ್ಲೊಂದು ನೆಪ ಹೇಳಿ ಮುಂದುಡುತ್ತಾ ಬಂದರು. ದೂರುದಾರರು ಸಾಕಷ್ಟು ಸಲ ಮುಂಗಡ ಹಣವನ್ನು ಮರಳಿಸುವಂತೆ ವಿನಂತಿಸಿದರೂ ಯಾವುದೇ ಪ್ರಯೋಜನ ಆಗಿರಲಿಲ್ಲ. ದೂರುದಾರರ ಅಂತಹ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಎದುರುದಾರ ಬಿಲ್ಡರ್ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ.03/05/2024 ರಂದು ಈ ದೂರನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಮಾಹಿಳಾ ಸದಸ್ಯರು, ದೂರುದಾರಳಿಂದ ರೂ.5,27,750 ಮುಂಗಡ ಹಣ ಪಡೆದುಕೊಂಡು ಬಾಕಿ ಹಣ ಪಡೆದು ಎದುರುದಾರರು ದೂರುದಾರರಿಗೆ ಪ್ಲಾಟ್ ಖರೀದಿ ಪತ್ರ ನೋಂದಣಿ ಮಾಡಿಕೊಡಲು ವಿಫಲರಾಗಿರುವುದು ಕಂಡು ಬರುತ್ತದೆ. ಮತ್ತು ದೂರುದಾರಳಿಗೆ ಮುಂಗಡ ಹಣವನ್ನು ಹಿಂತಿ–ರುಗಿಸದೆ ಇರುವುದು ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಎಂದು ಆಯೋಗ ಅಭಿಪ್ರಾಯ ಪಟ್ಟು ತೀರ್ಪು ನೀಡಿದೆ. ದೂರುದಾರಳು ಸಂದಾಯ ಮಾಡಿದ ರೂ.5,27,750 ಮತ್ತು ಅದರ ಮೇಲೆ ಮುಂಗಡ ಹಣ ಪಾವತಿಸಿದ ದಿನದಿಂದ ಪೂರ್ತಿ ಹಣ ಸಂದಾಯವಾಗುವವರೆಗೆ ಶೇ. 10 ರಂತೆ ವಾರ್ಷಿಕ ಬಡ್ಡಿ ಲೆಕ್ಕ ಹಾಕಿ ತೀರ್ಪು ನೀಡಿದ ಒಂದು ತಿಂಗಳ ಒಳಗಾಗಿ ಕೊಡುವಂತೆ ಆಯೋಗ ಎದುರುದಾರರಿಗೆ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ ಮತ್ತು ಮಾನಸಿಕ ಹಿಂಸೆಗಾಗಿ ರೂ.50,000 ಪರಿಹಾರ ಹಾಗೂ ಈ ಪ್ರಕರಣದ ಖರ್ಚು ವೆಚ್ಚ ಅಂತಾ ರೂ.10,000 ನೀಡುವಂತೆ ಸ್ವರ್ಣ ಡವಲಪರ್ಸ್‌ನ ಮ್ಯಾನೇಜಿಂಗ್ ಪಾರ್ಟನರ್ ಆದ ರಾಜು ನಯ್ಯರ್ ಎದುರುದಾರರಿಗೆ ಆಯೋಗ ತನ್ನ ತೀರ್ಪಿನಲ್ಲಿ ಹೇಳಿದೆ.

## ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು: ಪ್ರಥಮ ವರ್ಷದ ಬಿ.ವಿ.ಎ ಪದವಿಗೆ ಅರ್ಜಿ ಆಹ್ವಾನ

ವಿಜಯಪುರ : ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಂ–ಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ನಲ್ಲಿ ಬಾಕಿ ಉಳಿದಿರುವ 2025–26ನೇ ಸಾಲಿನ ಪ್ರಥಮ ವರ್ಷದ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿ.ವಿ.ಎ) ಪದವಿ ಸೀಟುಗಳ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸದರಿ ಪದವಿಯೂ 4 ವರ್ಷದಾಗಿದ್ದು, 8 ಸೆಮಿಸ್ಟರ್‌ಗಳನ್ನು ಒಳಗೊಂಡಿರುತ್ತದೆ. 3 ನೇ ಸೆಮಿಸ್ಟರ್‌ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ, ಅನ್ವಯಕಲೆ, ಕಲಾ ಇತಿಹಾಸ, ಛಾಯಾಚಿತ್ರ ಹಾಗೂ ಛಾಯಚಿತ್ರ ಪತ್ರಿಕೋದ್ಯಮ ವಿಭಾಗದ ವಿಷಯಗಳಿರುತ್ತವೆ. ಅರ್ಜಿ ಸಲ್ಲಿಸಲು ದಿನಾಂಕ:30–07–2025 ರಂದು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:0821–2438931, **https://uucms.karnataka.gov.in** ಹಾಗೂ **https://www.cavamysore.karnataka.gov.in** ವೆಬ್‌ಸೈಟ್‌ನ್ನು ಸಂಪರ್ಕಿಸಬಹುದಾಗಿದೆ ಎಂದು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ

# ಅಸಂಘಟಿತ ಕಾರ್ಮಿಕರ ಜೀವನ ಮಟ್ಟ ಸುಧಾರಣೆಗೆ ಕ್ರಮ : ಸಚಿವ ಸಂತೋಷ ಲಾಡ್

ವಿಜಯಪುರ : ವಿವಿಧ ಸಣ್ಣ ಸಣ್ಣ ವೃತ್ತಿ ಕೈಗೊಂಡು, ವೃತ್ತಿಯನ್ನೇ ಅವಲಂಬಿಸಿ ಶ್ರಮಿಜೀವಿಯಾಗಿ ತಮ್ಮ ಜೀವನ ನಿರ್ವಹಿಸುತ್ತಿರುವ ಅಸಂಘಟಿ–ತ ವರ್ಗಗಳ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಜೀವನ ಮಟ್ಟ ಸುಧಾರಣೆಗೆ ಸರ್ಕಾರ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಕಾರ್ಮಿಕ ಖಾತೆ ಸಚಿವ ಸಂತೋಷ ಲಾಡ್ ಹೇಳಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಬುಧವಾರ ಆಯೋಜಿಸಿದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಜಿಲ್ಲೆಯ ವಿವಿಧ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ವಿತರಿಸಿ ಅವರು ಮಾತನಾಡಿದರು.

ರಾಜ್ಯದಾದ್ಯಂತ ವಿವಿಧ ವೃತ್ತಿಗಳಲ್ಲಿ ತೊಡಗಿರುವ 91 ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಗುರುತಿಸಲಾಗಿದೆ. ಅಸಂಘಟಿ–ತ ವಲಯದ ಕಾರ್ಮಿಕರು ಸಾಮಾಜಿ–ಕವಾಗಿ ಹಾಗೂ ಆರ್ಥಿಕವಾಗಿ ಅಷ್ಟೇನೂ ಸಬಲರಾಗಿರುವುದಿಲ್ಲ. ಸಂಘಟಿತ ಕಾರ್ಮಿಕ–ರಿಗೆ ದೊರಕುವ ಕಾನೂನಾತ್ಮಕ ಸೌಲಭ್ಯಗಳು ಅಸಂಘಟಿತ ಕಾರ್ಮಿಕರಿಗೂ ದೊರೆತು ಅವರ ಜೀವನಮಟ್ಟ ಸುಧಾರಣೆಗೊಳ್ಳಲಿ ಎಂದು ಸರ್ಕಾರ ಸದುದ್ದೇಶ ಹೊಂದಿ, ವಿವಿಧ ಯೋಜನೆಗಳಡಿ ಈ ಕಾರ್ಮಿಕರನ್ನು ಒಳಪಡಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ ಎಂದು ಅವರು ಹೇಳಿದರು.

ಅಸಂಘಟಿತ ವಲಯದ ಕಾರ್ಮಿಕರಲ್ಲಿ ಖಾಸಗಿ ವಾಣಿಜ್ಯ ಸಾರಿಗೆ ಹಾಗೂ ಇತರೆ ಸಂಬಂಧಿಸಿದ ಕಾರ್ಮಿಕ–ರಿಗೆ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ ಸೌಲಭ್ಯ ಒದಸುವ ಉದ್ದೇಶದಿಂದ ರಾಜ್ಯ ಸರ್ಕಾರ ಕರ್ನಾಟಕ ಮೋಟಾರ ಸಾರಿಗೆ




ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಅಧಿನಿಯಮ 2024ನ್ನು ಜಾರಿಗೆ ತಂದಿದ್ದು, ಇದಕ್ಕನುಗುಣವಾಗಿ ನಿಯಮಾವಳಿಗಳನ್ನು ರೂಪಿಸಿ ಮಂಡಳಿ ಮೂಲಕ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಯೋಜನೆಗಳನ್ನು ಜಾ–ರಿಗೊಳಿಸಲಾಗುತ್ತಿದೆ.ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ, ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ, ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ, ಕರ್ನಾಟಕ ರಾಜ್ಯ ದಿನ ಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ, ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿ–ಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ, ಕರ್ನಾಟಕ ಸಿನಿಮಾ ಮತ್ತು ಸಾಂಸ್ಕೃತಿ–ಕ ಚಟುವಟಿಕೆಗಳಲ್ಲಿ ತೊಡಗಿದ ಕಾರ್ಮಿಕರ ಸುಂಕ ಅಧಿನಿಯಮ–2024, ಕರ್ನಾಟಕ ಪ್ಲಾಟ್‌ಫಾರ್ಮ ಆಧಾರಿತ ಗಿಗ್ ಕಾರ್ಮಿಕರ ಅಧಿನಿಮ–2025, ಕಾರ್ಮಿಕರಿಗೆ ಸುರಕ್ಷತೆ ಒದಗಿಸುವ ಕರ್ನಾಟಕ ಕಡ್ಡಾಯ ಉಪಧನ ವಿಮಾ ನಿಯಮಗಳು–2024 ಸೇರಿದಂತೆ ಮಂಡಳಿ ವತಿಯಿಂದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಹೇಳಿದರು.

ಅಸಂಘಟಿತ ವಲಯದ ಕಾರ್ಮಿಕರಿಗೆ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 91 ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಗುರುತಿಸಲಾಗಿದ್ದು, ಸುಮಾರು 30 ರಿಂದ 40 ಲಕ್ಷ ಕಾರ್ಮಿಕರು ಒಳಗೊಂಡಿದ್ದು, ಈ ಕಾರ್ಮಿಕರನ್ನು ಉಚಿತವಾಗಿ ನೊಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತದೆ. ಸರ್ಕಾರದಿಂದ ಜಾರಿಗೊಂಡಿರುವ ಸೌಲಭ್ಯಗಳು ಕಾರ್ಮಿಕ–ರಿಗೆ ತಲುಪಿಸುವ ನಿಟ್ಟಿನಲ್ಲಿ ಸ್ಮಾರ್ಟ್ ಕಾರ್ಡ್ ಒದಗಿಸಲಾಗುತ್ತಿದ್ದು, ಈವರೆಗೆ ರಾಜ್ಯದಲ್ಲಿ 25,45,607 ಕಾರ್ಮಿಕರು ನೊಂದಣಿಯಾಗಿದ್ದು, ವಿಜಯಪುರ ಜಿಲ್ಲೆಯಲ್ಲಿ 102971 ನೊಂದಾಯಿಸಿಕೊಂಡ ಕಾರ್ಮಿಕ–ರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ. ಅಸಂಘಟಿತ ಕಾರ್ಮಿಕರು ಸ್ಮಾರ್ಟ್ ಕಾರ್ಡ್ ಪಡೆದುಕೊಂಡು ಸರ್ಕಾರದ ಯೋಜನೆಗಳ ಲಾಭ ಪಡೆದು ತಮ್ಮ ಜೀವನವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಖಾಸಗಿ ವಾಣಿಜ್ಯ ವಾಹನ ಚಾಲಕರು, ನಿರ್ವಾಹಕರು, ಕ್ಲೀನರ್, ನಿಲ್ದಾಣ ಸಿಬ್ಬಂದಿ, ಮಾರ್ಗ ಪರಿಶೀಲನಾ ಸಿಬ್ಬಂದಿ, ಬುಕ್ಕಿಂಗ್ ಗುಮಾಸ್ತ್, ಸಮಯ ಪಾಲಕರು, ಕಾವಲುಗಾರ ಹಾಗೂ ಪರಿಚಾರಕರು, ಮೋಟಾರ್ ಗ್ಯಾರೇಜ್‌ಗಳಲ್ಲಿ ಟೈರ್ ಜೋಡಿಸುವ ಮತ್ತು ಬೇರ್ಪಡಿಸುವ ಘಟಕಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರು ಸೇ–ರಿದಂತೆ ವಿವಿಧ ಕಾರ್ಮಿಕರನ್ನು ಸಾಮಾಜಿ–ಕ ಭದ್ರತಾ ಸೌಲಭ್ಯದಡಿ ಒಳಪಡಿಸಲಾಗಿದೆ ಎಂದು ಅವರು ಹೇಳಿದರು.

ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಬೀದರ ಮಾದರಿಯಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸೊಸಾಯಿಟಿ ರಚನೆ ಮಾಡಿ ಸೊಸಾಯಿಟಿ ಮೂಲಕವೇ ವೇತನ ಪಾವತಿಸುವ ವ್ಯವಸ್ಥೆ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ವಿವಿಧ ಖಾಸಗಿ ವಲಯದ ಕೈಗಾರಿಕೆ, ಕಾರ್ಖಾನೆಗಳಲ್ಲಿ ಹೆಚ್ಚೆಚ್ಚು ಉದ್ಯೋಗ ದೊರಕಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ವತಿಯಿಂದ ಆಶಾ ದೀಪ ಯೋಜನೆಯನ್ನು ಜಾರಿಗೊಳಿಸಿ ಮಾಲೀಕರು ಹಾಗೂ ಉದ್ಯೋಗದಾತರನ್ನು ಉತ್ತೇಜಿಸಲಾಗುತ್ತಿದೆ ಎಂದು ಅವರು ಹೇಳಿದರು.

ಸರ್ಕಾರ ಜಾರಿಗೊಳಿಸಿರುವ ಪಂಚ್ ಗ್ಯಾರಂಟಿ ಯೋಜನೆಗಳು ಜನರ ಬದುಕನ್ನು ಹಸನಗೊಳಿಸಿದೆ. ಶಕ್ತಿ ಯೋಜನೆಯಡಿ 500 ಕೋಟಿ ಬಾರಿ ಪ್ರಯಾಣ ಬೆಳೆಸಲಾಗಿದೆ. ಸರ್ಕಾರದಿಂದ ಪಂಚ್ ಗ್ಯಾರಂಟಿ ಯೋಜನೆಗಳಿಗೆ ಒಂದು ವರ್ಷಕ್ಕೆ 60 ಸಾವಿರ ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ. ಎಲ್ಲ ವರ್ಗದ ಜನರನ್ನು ಸರ್ಕಾರದ ಗ್ಯಾರಂಟಿ ಯೋಜನೆಗಳಡಿ ಸೌಲಭ್ಯಗಳನ್ನು ದೊರಕಿಸಲಾಗುತ್ತಿದೆ ಎಂದು ಅವರು ಹೇಳಿದರು.

ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ ಅವರು ಮಾತನಾಡಿ, ಅಸಂಘಟಿತ ಕಾರ್ಮಿಕರ ಹಿತದೃಷ್ಟಿಯಿಂದ ಸರ್ಕಾರ ವಿವಿಧ ಯೋಜನೆಗಳನ್ನು ಜಾ–ರಿಗೊಳಿಸಿದೆ. ಅಸಂಘಟಿತ ಕಾರ್ಮಿಕರನ್ನು ಗುರುತಿಸಿ ಸ್ಮಾರ್ಟ್ ಕಾರ್ಡ್ ವಿತರಿಸುವ ಮೂಲಕ ದುರ್ಬಲ ವರ್ಗದವರನ್ನು ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಕಾರ್ಮಿಕರು ಈ ಯೋಜನೆಗಳ ಸದುಪಯೋಗ ಪಡೆದುಕೊಂಡು ತಮ್ಮ ಬದುಕನ್ನು ಸುಭದ್ರಗೊಳಿಸಿಕೊಳ್ಳುವಂತೆ ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ 15 ಜನ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಯಿತು. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರದಡಿ ಇಬ್ಬರಿಗೆ ಪರಿಹಾರ ಚೆಕ್, ಅಪಘಾತದಿಂದ ಮರಣ ಹೊಂದಿದ ಇಬ್ಬರೂ ಕಾರ್ಮಿಕರ ಮಕ್ಕಳಿಗೆ ತಲಾ 10 ಸಾವಿರ ರೂ. ಚೆಕ್ ಮತ್ತು ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಮರಣ ಹೊಂದಿದ ಕಾರ್ಮಿಕರ ಅವಲಂಬಿತರಿಗೆ 10 ಸಾವಿರ ರೂ.ಗಳ ಚೆಕ್‌ನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಜಿಲ್ಲಾಧಿಕಾರಿ ಡಾ.ಆನಂದ ಕೆ., ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿಗಳಾದ ಡಾ.ಎಸ್.ಬಿ.ರವಿಕುಮಾರ, ಕಾರ್ಮಿಕ ಇಲಾಖೆ ಉಪ ಕಾರ್ಮಿಕ ಆಯುಕ್ತರಾದ ಡಿ.ಜಿ.ನಾಗೇಶ, ಸಹಾಯಕ ಕಾರ್ಮಿಕ ಆಯುಕ್ತ ಕೆ.ಬಿ.ನಾಗರಾಜ, ಕಾರ್ಮಿಕ ಅಧಿಕಾರಿ ಶ್ರೀಮತಿ ಉಮಾಶ್ರೀ ಕೋಳಿ ಸೇರಿದಂತೆ ಜಿಲ್ಲೆಯ ವಿವಿಧ ಜನಪ್ರತಿನಿಧಿಗಳು, ಕಾರ್ಮಿಕ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಸಾರ್ವಜನಿಕರು ಉಪಸ್ಥಿತರಿದ್ದರು.

*****

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :145, Postal Reg No. PMG/KA/NK/BM/135/25-27 / POST AT Vantamury Colony Post Office